ಸಂಪುಟ : 13 Volume | ಸಂಚಿಕೆ : 210 Issue | ಪುಟಗಳು : 08 Pages | ಶನಿವಾರ 04 ಅಕ್ಟೋಬರ್ 2025 | ₹2 | RNINO:KARKAN/2011/48371 | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

" ಗಾಳಿಯಂತೆ ನೀನು ಜೀವನದ ಎಲ್ಲಾ ಭಾಗಗಳಲ್ಲೂ ಪ್ರವೇಶ ಪಡೆ ಆದರೆ ಅಂಟಿಕೊಳ್ಳಬೇಡ "

- ಅವಧೂತ ವೆಂಕಟಾಚಲ ಸದ್ಗುರು

ಕೆಂಭಾವಿಯ ಮಲ್ಲಯ್ಯನ ವೈಭವ 2 | ವಿಶೇಷ ರೈಲು ಸಂಚಾರ 7 | ವಾಹುಮಾರೆಗೆ ತಪ್ಪಿದ ನಿಗಮು 8

# ಪಂಚಗ್ಯಾರಂಟಿಗಳಿಂದ ರಾಜ್ಯ ಆರ್ಥಿಕವಾಗಿ ದಿವಾಳಿ:ದೇವೇಗೌಡ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ಅ.3:ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ 'ಐದು ಗ್ಯಾರಂಟಿ' ಯೋಜನೆಗಳಿಂದಾಗಿ ರಾಜ್ಯದ ಆರ್ಥಿಕ ಸ್ಥಿತಿ ಹದಗೆಟ್ಟಿದೆ ಎಂದು ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಆರೋಪಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿಮಾತನಾಡಿದಅವರು, ಕಲಬುರಗಿ ಸೇರಿದಂತೆ ಉತ್ತರ ಕರ್ನಾಟಕದ ಆರು ಜಿಲ್ಲೆಗಳಲ್ಲಿ ಉಂಟಾಗಿರುವ ತೀವ್ರ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಸರ್ಕಾರದ ಬಳಿ ಹಣವಿಲ್ಲ ಮುಂದಿನ ಒಂದು ವಾರದೊಳಗೆ ಕಲಬುರಗಿ ಮತ್ತು ನೆರೆ ಪೀಡಿತ ಪ್ರದೇಶಗಳಿಗೆಭೇಟಿನೀಡಿಪರಿಸ್ಥಿತಿಯನ್ನುಪರಿಶೀಲಿಸುತ್ತೇನೆ, ಸರ್ಕಾರ ಏನು ಮಾಡಿದೆ ಎಂಬುದರ ಕುರಿತು ನನ್ನ ಅಭಿಪ್ರಾಯವನ್ನು ನೀಡುತ್ತೇನೆ. ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿ ಮಾಡಿ ರಾಜ್ಯದ ಪ್ರವಾಹ ಪೀಡಿತಜನರಿಗೆಪರಿಹಾರನೀಡುವಂತೆಒತ್ತಾಯಿಸುತ್ತೇನೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಮುಂದೆ ಬರುವ ಎಲ್ಲಾ ಚುನಾವಣೆಗಳಿಗೂ ಬಿಜೆಪಿ-ಜೆಡಿಎಸ್ ಮೈತ್ರಿ ಮುಂದುವರೆಯಲಿದೆಅಂತಮಾಜಿಪ್ರಧಾನಿ, ಜೆಡಿಎಸ್ ರಾಷ್ಟ್ರೀಯಅಧ್ಯಕ್ಷದೇವೇಗೌಡರುಸ್ಪಷ್ಟಪಡಿಸಿದರು. ಅವರು ಬಿಜೆಪಿ-ಜೆಡಿಎಸ್ ಮೈತ್ರಿ ಬಗ್ಗೆಮಾತನಾಡಿ, ಈವೇಳೆ,



ಜಿಬಿಎಚುನಾವಣೆಯಲ್ಲಿ ಬಿಜೆಪಿಜೊತೆಮೈತ್ರಿ ಆಗ್ತೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಬಿಜೆಪಿ-ಜೆಡಿಎಸ್ ಮೈತ್ರಿಗೆಯಾವುದೇಕಾರಣದಿಂದಆತಂಕಆಗುವುದಿಲ್ಲ. ಬಿಜೆಪಿ ಜೊತೆ ಮೈತ್ರಿ ಮುಂದುವರೆಯುತ್ತದೆ. ಜಿಲ್ಲಾ, ತಾಲೂಕು, ಜಿಬಿಎ, ವಿಧಾನಸಭೆಚುನಾವಣೆಸೇರಿ ಎಲ್ಲಾ ಚುನಾವಣೆಗಳಿಗೂಈಮೈತ್ರಿ ಮುಂದುವರೆಯಲಿದೆಎಂದು ತಿಳಿಸಿದರು. ಬಿಜೆಪಿ-ಜೆಡಿಎಸ್ ಮೈತ್ರಿಗೆಎಂದೂಆತಂಕ ಇಲ್ಲ. ಮೋದಿ ನನ್ನ ಸಂಬಂಧ ಯಾವುದೇ ಕಾರಣಕ್ಕೂ ಯಾರು ಬದಲಾವಣೆ ಮಾಡೋಕೆ ಆಗೊಲ್ಲ. ನಮ್ಮ ಅವರ ಸಂಬಂಧ 10 ವರ್ಷದಿಂದ ಉತ್ತಮವಾಗಿದೆ. ನಾನುಕಳೆದ10ವರ್ಷಗಳಲ್ಲಿಮೋದಿಬಗ್ಗೆಲಘುವಾಗಿ ಮಾತಾಡಿಲ್ಲ. ಇದ್ದರೆ ತೋರಿಸಿ ಎನ್ನುವ ಮೂಲಕ ನನ್ನ ಮೋದಿ ಸಂಬಂಧ ಉತ್ತಮವಾಗಿದ್ದು, ಇದೇ ಮೈತ್ರಿಗೆ ಅಡಿಪಾಯ ಅಂತ ತಿಳಿಸಿದರು.

ಕುಮಾರಸ್ವಾಮಿಯವರು 4 ತಿಂಗಳಿಂದ ನಮ್ಮ ರಾಜ್ಯದಲ್ಲಿ ಪ್ರವಾಸ ಮಾಡಿರಲಿಲ್ಲ. ಸ್ವಲ್ಪ ಆರೋಗ್ಯ ಸುಧಾರಣೆ ಆಗಬೇಕಿತ್ತು. ಆರೋಗ್ಯ ಸರಿಯಾಗಿದೆ, ಯಾವುದೇ ಸಮಸ್ಯೆ ಇಲ್ಲ. ಹೊರ ದೇಶದಿಂದ ಬಂದ ಡಾಕ್ಟರ್ ಪರಿಶೀಲನೆ ಮಾಡಿ ಯಾವುದೇ ಸಮಸ್ಯೆ ಇಲ್ಲ. ಅವರು ಎಷ್ಟು ಬೇಕಾದ್ರು ರಾಜಕೀಯದಲ್ಲಿ ಹೋರಾಟ ಮಾಡೋಕೆ ತೊಂದರೆ ಇಲ್ಲ ಎಂದಿದ್ದಾರೆ. ಕೆಲವೇ ದಿನಗಳಲ್ಲಿ ಅವರು ರಾಜ್ಯ ಪ್ರವಾಸ ಮಾಡ್ತಾರೆ ಎಂದು ಘೋಷಿಸಿದರು.

## ಬೈಕ್ ಅಪಘಾತ: ಶಿಕ್ಷಕಿ ದಾನಮ್ಮ ಸಾವು


ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.3-ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ಕಾರ್ಯ ಮುಗಿಸಿ ಬಾಗಲಕೋಟೆಗೆ ತೆರಳುತ್ತಿದ್ದ ಸ್ಥಳೀಯ ಆಶ್ರಯ ಕಾಲೊನಿಯ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ದಾನಮ್ಮ ನಂದರಗಿ(55)ಬೈಕ್ ನಿಂದ ಕೆಳಗೆ ಬಿದ್ದು ಮೃತಪಟ್ಟ ಘಟನೆ ಶುಕ್ರವಾರ ಸಾಯಂಕಾಲ ಬೋಡನಾಯ್ಕದಿನ್ನಿ ಕ್ರಾಸ್ ಬಳಿ ನಡೆದಿದೆ.

ಬಾಗಲಕೋಟೆಯ ಕಂಠಿ ಬಡಾವಣೆಯಲ್ಲಿ ನೆಲೆಸಿರುವ ಶಿಕ್ಷಕಿ ದಾನಮ್ಮ ನಂದರಗಿ, ಶುಕ್ರವಾರ ಸೀತಿಮನಿ ಗ್ರಾಮದಲ್ಲಿ ಗಣತಿ ಕಾರ್ಯ ಮುಗಿಸಿ ತಮ್ಮ ಪುತ್ರನ ಜೊತೆ ಬೈಕ್ ಮೇಲೆ ಬಾಗಲಕೋಟೆಗೆ ತೆರಳುತ್ತಿದ್ದಾಗ ಈ ಅವಘಡ ಸಂಭವಿಸಿ ತಲೆಗೆ ತೀವ್ರ ಪೆಟ್ಟಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಘಟನಾ ಸ್ಥಳಕ್ಕೆ ಬಾಗಲಕೋಟೆ ಗ್ರಾಮೀಣ ಪೋಲಿಸ್ ಠಾಣೆಯ ಸಿಪಿಐ ಎಚ್.ಆರ್.ಪಾಟೀಲ, ಪಿಎಸ್ ಐ ಗಿರೀಶ, ಎಎಸ್ಐ ಎಸ್.ಎಂ.ಉಕ್ಕಲಿ ಭೇಟಿ ನೀಡಿದ್ದು, ಗ್ರಾಮೀಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಖ್ಯಾತ ಹಿರಿಯ ಪತ್ರಕರ್ತ, ಲೇಖಕ ಟಿಜೆಎಸ್ ಜಾರ್ಜ್ ನಿಧನ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.3: ಟಿಜೆಎಸ್ ಎಂದೇ ಪ್ರಸಿದ್ಧರಾಗಿದ್ದ, ಪದ್ಮಭೂಷಣಪುರಸ್ಕೃತ ಖ್ಯಾತ ಪತ್ರಕರ್ತ ಥೈಲ್ ಜಾಕೋಬ್ ಸೋನಿ ಜಾರ್ಜ್ ಅವರು ಶುಕ್ರವಾರ ಬೆಂಗಳೂರಿನಲ್ಲಿನಿಧನರಾದರು. ಅವರಿಗೆ 97 ವರ್ಷ ವಯಸ್ಸಾಗಿತ್ತು.

ಕಳೆದಕೆಲವುದಿನಗಳಿಂದಅನಾರೋಗ್ಯದಿಂದ ಬಳಲುತ್ತಿದ್ದ ಟಿಜೆಎಸ್ ಅವರುಇಂದು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಹೃದಯಾಘಾತದಿಂದನಿಧನರಾಗಿದ್ದಾರೆ. ಟಿಜೆಎಸ್ ಜಾರ್ಜ್ ಅವರನಿಧನಕ್ಕೆಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೇರಿದಂತೆ ಹಲವು ಗಣ್ಯರು ಕಂಬನಿ ಮಿಡಿದಿದ್ದಾರೆ.1928 ಮೇ7 ರಂದುಕೇರಳದಲ್ಲಿಜನಿಸಿದ್ದ ಟಿಜೆಎಸ್ ಅವರು, ಮದ್ರಾಸ್ ಕ್ರಿಶ್ಚಿಯನ್ ಕಾಲೇಜಿನಿಂದ ಇಂಗ್ಲಿಷ್ ಸಾಹಿತ್ಯದಲ್ಲಿ ಪದವಿ ಪಡೆದುಕೊಂಡಿದ್ದರು. ನಂತರ 1950ರಲ್ಲಿ ಮುಂಬೈನ ದಿ ಫ್ರೀ ಪ್ರೆಸ್ ಜರ್ನಲ್‌ನಲ್ಲಿ ತಮ್ಮ ವೃತ್ತಿಜೀವನವನ್ನು ಆರಂಭಿಸಿದರು. ಹಾಂಗ್ ಕಾಂಗ್‌ನಿಂದ ಪ್ರಕಟವಾಗುವ ಏಷ್ಯಾವೀಕ್‌ನ ಸ್ಥಾಪಕ ಸಂಪಾದಕರಾಗುವ ಮೊದಲು ಅವರು ದಿ ಸರ್ಚ್‌ಲೈಟ್, ಇಂಟರ್ನ್ಯಾಷನಲ್ ಪ್ರೆಸ್ ಇನ್‌ಸ್ಟಿಟ್ಯೂಟ್ ಮತ್ತು ಫಾರ್ ಈಸ್ಟರ್ನ್ ಎಕನಾಮಿಕ್ ರಿವ್ಯೂನಲ್ಲಿ ಕೆಲಸ ಮಾಡಿದರು. ನಮ್ಮಲ್ಲಿ ಕೆಲವರು ನಮ್ಮ ದೇಶವನ್ನು ಟೀಕಿಸಬಾರದು ಎಂದು ಭಾವಿಸುತ್ತಾರೆ. ಕೆಲವರು ಇದಕ್ಕೆ ತದ್ವಿರುದ್ಧವಾಗಿ ಭಾವಿಸುತ್ತಾರೆ - ನಮ್ಮಂತಹದೊಡ್ಡದೇಶವು ಅಪಾಯಗಳಬಗ್ಗೆ ಎಲ್ಲಾರೀತಿಯಲ್ಲಿಯೂ ಎಚ್ಚರಿಕೆ ನೀಡಬೇಕು. ಎಲ್ಲಾ ವಾದಗಳಿಗೆ ತಮ್ಮದೇ ಆದ ಬೆಂಬಲಿಗರು ಮತ್ತು ತಮ್ಮದೇ ಆದ ವಿಮರ್ಶಕರು, ತಮ್ಮದೇ ಆದ ಸಮರ್ಥನೆಗಳು ಮತ್ತು ತಮ್ಮದೇ ಆದ ನ್ಯೂನತೆಗಳಿವೆ. ಆದರೆ ಒಂದು ದೇಶ ಮತ್ತು ಅದರಆಡಳಿತಗಾರರುತಮ್ಮನ್ನು ಟೀಕಿಸಬಾರದುಎಂದುಭಾವಿಸುವುದು ಸರಿಯಲ್ಲ - ವಿಶೇಷವಾಗಿ ವೃತ್ತಪತ್ರಿಕೆ ವ್ಯಾಪಾರಿಗಳು ಎಂದು ಟಿಜೆಎಸ್ ಬರೆದಿದ್ದಾರೆ. ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್‌ನೊಂದಿಗಿನ ಅವರ ದೀರ್ಘಾವಧಿಯ ಅವಧಿಯಲ್ಲಿ, ಟಿಜೆಎಸ್ ಜೂನ್ 12, 2022 ರಂದು ಈಗ ವಿದಾಯ ಹೇಳುವ ಸಮಯ ದೊಂದಿಗೆ 25 ವರ್ಷಗಳ ಕಾಲ 1300 ಅಂಕಣಗಳನ್ನು ಬರೆದಿದ್ದಾರೆ.

## ದುರ್ಗಾ ಮೂರ್ತಿ ವಿಸರ್ಜನೆ ವೇಳೆ 17 ಯುವಕರು ನೀರು ಪಾಲು



ಮಲ್ಲಮ್ಮ ನುಡಿವಾರ್ತೆ ಲಖನೌ:ಅ.3: ಆಗ್ರಾದಲ್ಲಿ ವಿಜಯದಶಮಿಯಂದು ದುರ್ಗಾ ಮೂರ್ತಿ ವಿಸರ್ಜನೆ ವೇಳೆ ನಡೆದ ಎರಡು ಪ್ರತ್ಯೇಕ ಘಟನೆಗಳಲ್ಲಿ 17ಕ್ಕೂ ಹೆಚ್ಚು ಯುವಕರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ. ರಕ್ಷಣಾ ತಂಡಗಳು ನದಿಯಿಂದ ಮೂರು ಶವಗಳನ್ನು ಹೊರತೆಗೆದರೆ, ಒಬ್ಬ ಯುವಕನನ್ನು ರಕ್ಷಿಸಿದ್ದಾರೆ. ಇನ್ನೂ ಹದಿಮೂರು ಜನರು ಕಾಣೆಯಾಗಿದ್ದು, ಎಸ್‌ಡಿಆರ್‌ಎಫ್ ಮತ್ತು ಪಿಎಸಿ ತಂಡಗಳು ಶೋಧ ಕಾರ್ಯಾಚರಣೆ ಮುಂದುವರೆಸಿವೆ. ಮೊದಲ ಘಟನೆ ಆಗ್ರಾ ಜಿಲ್ಲೆಯ ಖೇರಾಗಢದಲ್ಲಿ ನಡೆದಿದ್ದು, ಅಲ್ಲಿ ಕುಸಿಯಾಪುರ್ ಗ್ರಾಮದ 14 ಯುವಕರು ಉತಂಗನ್ ನದಿಯಲ್ಲಿ ಕೊಚ್ಚಿ ಹೋಗಿದ್ದಾರೆ. ರಕ್ಷಣಾ ತಂಡ ಮೂರು ಶವಗಳನ್ನು ಹೊರತೆಗೆದಿದ್ದು, ಒಬ್ಬ ವ್ಯಕ್ತಿಯನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ. ಇನ್ನೂ 10 ಜನರಿಗಾಗಿ ಶೋಧ ಕಾರ್ಯಾಚರಣೆ ನಡೆಯುತ್ತಿದೆ. 20 ವರ್ಷದ ಹರೇಶ್ ಮತ್ತು 17 ವರ್ಷದ ಗಗನ್ ಎಂಬ ಇಬ್ಬರು ಸಹೋದರರು ಪ್ರಾಣ ಕಳೆದುಕೊಂಡಿದ್ದಾರೆ. ಎರಡು ವಿಗ್ರಹಗಳನ್ನು ವಿಸರ್ಜಿಸಲು ಗ್ರಾಮಸ್ಥರು ನದಿಗೆ ಇಳಿದ ವೇಳೆ ಈ ದುರಂತ ಸಂಭವಿಸಿದೆ. ಪ್ರವಾಹದ ತೀವ್ರತೆಗೆ ಸಿಲುಕಿ ಯುವಕರು ಕೊಚ್ಚಿಕೊಂಡು ಹೋಗಿದ್ದಾರೆ. ಘಟನೆಯ ನಂತರ, ಪೊಲೀಸರು ತಕ್ಷಣ ರಕ್ಷಣಾ ಕಾರ್ಯಾಚರಣೆ ಪ್ರಾರಂಭಿಸಿದರು. ಜೀವ ಉಳಿಸಲು ಸ್ಟೇಷನ್ ಹೌಸ್ ಆಫೀಸರ್ ಮದನ್ ಸಿಂಗ್ ಅವರು ಸಮವಸ್ತ್ರದಲ್ಲೇ ನದಿಗೆ ಹಾರುತ್ತಿರುವುದು ಕಂಡುಬಂದಿದೆ.

## ರಾಹುಲ್ ಒಬ್ಬಂಟಿ ಅಲ್ಲ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ರಾಹುಲ್ ಗಾಂಧಿಯವರ ಕುಟುಂಬಕ್ಕೆ ಪ್ರಾಣಬೆದರಿಕೆ ಇದು ಮೊದಲಲ್ಲ. ಇಂತಹ ಕೊಲೆಗಡುಕರಿಂದಲೇ ಅವರು ತಮ್ಮ ಅಜ್ಜಿ ಮತ್ತು ಅಪ್ಪನನ್ನು ಕಳೆದುಕೊಂಡವರು. ಆದರೆ, ಅವರು ಈಗ ಒಬ್ಬಂಟಿ ಅಲ್ಲ, ಅವರ ಬೆಂಬಲಕ್ಕೆ ಕೋಟ್ಯಂತರ ಸಂಖ್ಯೆಯ ಕಾರ್ಯಕರ್ತರಿದ್ದಾರೆ ಎನ್ನುವುದು ಬಿಜೆಪಿಯ ಕೊಲೆಗಡುಕ ಮನಸ್ಸುಗಳಿಗೆ ತಿಳಿದಿರಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಲೋಕಸಭೆಯ ವಿರೋಧಪಕ್ಷದ ನಾಯಕ ರಾಹುಲ್ ಗಾಂಧಿಗೆ ಬಿಜೆಪಿ ವಕ್ತಾರನೊಬ್ಬನು ಎದೆಗೆ ಗುಂಡು ಹೊಡೆಯುತ್ತೇವೆ ಎಂದು ನೀಡಿದ ಕೊಲೆ ಬೆದರಿಕೆಗೆ ಪ್ರತಿಕ್ರಿಯೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬಿಜೆಪಿ ಮತ್ತು ಸಂಘಪರಿವಾರದ ವಿರುದ್ಧ ನಿರಂತರ ಧ್ವನಿಯೆತ್ತುತ್ತಿರುವ ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿಯವರ ಎದೆಗೆ ಗುಂಡು ಹೊಡೆಯುತ್ತೇವೆ, ಹುಷಾರ್..!! ಎಂದು ಬಿಜೆಪಿ ವಕ್ತಾರರೊಬ್ಬರು ಬಹಿರಂಗವಾಗಿ ಜೀವ ಬೆದರಿಕೆ ಒಡ್ಡಿರುವ ಬಗ್ಗೆ ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರ ಮೌನವನ್ನು ನೋಡಿದರೆ ಹೇಳಿಕೆಯ ಬಗ್ಗೆ ಅವರಿಗೂ ಸಮ್ಮತಿ ಇದೆಯೇ ಎಂಬ ಪ್ರಶ್ನೆ ಸಹಜವಾಗಿ ಎಲ್ಲರಲ್ಲೂ ಮೂಡಿದೆ. ಬೆದರಿಕೆ ಒಡ್ಡಿ ಸೈದ್ಧಾಂತಿಕ ವಿರೋಧಿಗಳ ಧ್ವನಿ ಅಡಗಿಸುವುದು, ಅದಕ್ಕೂ ಬಗ್ಗದಿದ್ದಾಗ ಅವರನ್ನೇ ಇಲ್ಲವಾಗಿಸುವುದು ಬಿಜೆಪಿ ಮತ್ತು ಸಂಘಪರಿವಾರಕ್ಕೆ ಹೊಸದೇನಲ್ಲ. ಮೊದಲೆಲ್ಲ ತೆರೆಮರೆಯಲ್ಲಿ ನಿಂತು ತಮ್ಮ ವಿರೋಧಿಗಳ ಹತ್ಯೆಗಳಿಗೆ ಬೆಂಬಲ ನೀಡುತ್ತಾ ಬಂದವರು, ಈಗ ನೇರಾನೇರವಾಗಿ ಅಖಾಡಕ್ಕೆ ಇಳಿದಿದ್ದಾರೆ. ಎದುರಾಳಿಗಳನ್ನು ಸಂವಾದ, ಚರ್ಚೆಗಳ ಮೂಲಕ ಸೈದ್ಧಾಂತಿಕವಾಗಿ ಎದುರಿಸಲಾಗದವರು ದೈಹಿಕವಾಗಿ ಮುಗಿಸಲು ಹೊರಟಿರುವುದು ಅವರ ಬೌದ್ಧಿಕ ದಿವಾಳಿತನವನ್ನು ತೋರಿಸುತ್ತದೆ ಎಂದು ಹೇಳಿದ್ದಾರೆ. ಸಂಘ ಪರಿವಾರದ ದುರುಳರಿಂದ ಪ್ರಾಣ ಕಳೆದುಕೊಂಡವರು ಒಬ್ಬರಾ? ಇಬ್ಬರಾ? ಮಹಾತ್ಮ ಗಾಂಧಿಯವರಿಂದ ಆರಂಭಗೊಂಡ ಈ ಹತ್ಯಾ ಸರಣಿ ಗೋವಿಂದ ಪನ್ಸಾರೆ, ನರೇಂದ್ರ ದಾಭೋಲ್ಕರ್, ಎಂ.ಎಂ. ಕಲಬುರ್ಗಿ, ಗೌರಿ ಲಂಕೇಶ್ ಹೀಗೆ ಪಟ್ಟಿ ಬೆಳೆಯುತ್ತಾ ಹೋಗುತ್ತದೆ. ಇವರೆಲ್ಲರ ಕೊಲೆಗಾರರಿಗೂ ತಮಗೂ ಸಂಬಂಧವಿಲ್ಲವೆಂದು ಹೇಳಿ ಸಂಘಪರಿವಾರದ ನಾಯಕರು ಸುಲಭದಲ್ಲಿ ತಲೆ ತೊಳೆದುಕೊಂಡರೂ, ಅವರ ಕೈಗಳಿಗಂಟಿದ ರಕ್ತದ ಕಲೆಗಳನ್ನು ತೊಳೆಯಲಾಗಲಿಲ್ಲ.



## ಮೂವರು ಬಾಲಕರ ಜಲಸಮಾಧಿ

ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ:ಅ.3: ಕೆರೆಯಲ್ಲಿ ಈಜಲು ಹೋಗಿದ್ದ ಮೂವರು ಬಾಲಕರು ನೀರುಪಾಲಾಗಿರುವ ದಾರುಣ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲೂಕಿನ ಆಚೇಪಲ್ಲಿ ಗ್ರಾಮದಲ್ಲಿ ಶುಕ್ರವಾರ ನಡೆದಿದೆ. ಮೃತ ಬಾಲಕರನ್ನು ವಿಷ್ಣು(14), ನಿಹಾಲ್ ರಾಜ್ (12) ಮತ್ತು ಹರ್ಷವರ್ಧನ್(16) ಎಂದು ಗುರುತಿಸಲಾಗಿದ್ದು, ದಸರಾ ರಜೆ ಹಿನ್ನೆಲೆಯಲ್ಲಿ ಈ ಮಕ್ಕಳು ಕೆರೆಗೆ ಈಜಲು ಹೋಗಿದ್ದರು. ಈ ಮೂವರ ಪೈಕಿ ಇಬ್ಬರು ಈಜು ಬಾರದ್ದರಿಂದ ಮುಳುಗಿದ್ದಾರೆ. ಈ ವೇಳೆ ನೀರಿನಲ್ಲಿ ಮುಳುಗುತ್ತಿದ್ದ ಇಬ್ಬರನ್ನು ರಕ್ಷಿಸಲು ಹೋದ ಹರ್ಷವರ್ಧನ್ ಕೂಡ ಮೃತಪಟ್ಟಿದ್ದಾನೆ. ಈ ಸಂಬಂಧ ಬಾಗೇಪಲ್ಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜಾತ್ರೆಯಲ್ಲಿ ದೊಣ್ಣೆಗಳಿಂದ ಬಡಿದಾಟ, ಇಬ್ಬರ ಸಾವು

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ: ಅ.3: ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಹೊಳಗುಂದ ಮಂಡಲದ ದೇವರಗಟ್ಟದ ಮಾಳಮಲ್ಲೇಶ್ವರಸ್ವಾಮಿ ಬನ್ನಿ ಉತ್ಸವ ಸಂದರ್ಭದಲ್ಲಿ ಗ್ರಾಮಸ್ಥರ ನಡುವೆ ಘರ್ಷಣೆ ಸಂಭವಿಸಿದ್ದು, ಇಬ್ಬರು ಮೃತಪಟ್ಟಿದ್ದಾರೆ. ನೂರು ಜನರಿಗೆ ಗಾಯಗಳಾಗಿವೆ ಎಂದು ತಿಳಿದು ಬಂದಿದೆ. ಗುರುವಾರ ಮಧ್ಯರಾತ್ರಿ ಮಲ್ಲೇಶ್ವರಸ್ವಾಮಿ ಮತ್ತು ಮಾಳಮ್ಮ ದೇವಿಯ ಕಲ್ಯಾಣೋತ್ಸವ ನಂತರ ರಾಜಬೀದಿಯಲ್ಲಿ ಚೈತ್ರಯಾತ್ರೆ ನಡೆಸಲಾಯಿತು. ದೇವರ ವಿಗ್ರಹಗಳನ್ನು ತೆಗೆದುಕೊಂಡು ಹೋಗಲು ಎರಡು ಗುಂಪುಗಳು ಪೈಪೋಟಿ ನಡೆಸಿದವು. ಈ ಪ್ರಕ್ರಿಯೆಯಲ್ಲಿ ಕೋಲುಗಳಿಂದ ಹೊಡೆದಾಟ ನಡೆಯಿತು. ಇದರ ಪರಿಣಾಮವಾಗಿ ಇಬ್ಬರು ಭಕ್ತರು ಮೃತಪಟ್ಟರು. 100 ಜನರು ಗಾಯಗೊಂಡರು. ಈ ಪೈಕಿ ಐವರು ಗಂಭೀರವಾಗಿದ್ದು, ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಆದವನಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಕರ್ನೂಲ್ ಜಿಲ್ಲೆ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ದೇವರಗುಡ್ಡದ ತಾತ್ಕಾಲಿಕ ಆಸ್ಪತ್ರೆಯಲ್ಲಿ ಕೆಲಗಾಯಾಳುಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಬನ್ನಿ ಹಬ್ಬದ ಅಂಗವಾಗಿ ಗ್ರಾಮದಲ್ಲಿ ಸಾಂಪ್ರದಾಯಿಕ ರಕ್ತಸಿಕ್ತ ಆಚರಣೆ ನಡೆಯುತ್ತದೆ. ಕೋಲುಗಳು, ಬಡಿಗೆ, ಮರದ ತುಂಡುಗಳಿಂದ ಭಕ್ತರು ಪರಸ್ಪರ ಹೊಡೆದಾಡಿಕೊಳ್ಳುತ್ತಾರೆ.

## ನವೆಂಬರ್-ಡಿಸೆಂಬರ್ ಒಳಗೆ ಸಿಎಂ ಅಧಿಕಾರ ಕಳೆದುಕೊಳ್ತಾರೆ



ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ:ಅ.3: ನವೆಂಬರ್-ಡಿಸೆಂಬರ್ ಒಳಗೆ ಸಿದ್ದರಾಮಯ್ಯ ಮುಖ್ಯಮಂತ್ರಿ ಹುದ್ದೆ ಕಳೆದುಕೊಳ್ಳುವುದು ನೂರಕ್ಕೆ ನೂರರಷ್ಟು ನಿಜ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಭವಿಷ್ಯ ನುಡಿದಿದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು, ಅಧಿಕಾರ ಹಂಚಿಕೆ ಸಂಬಂಧ ಒಪ್ಪಂದ ಆಗಿರುವುದು ನಿಜ. ನವೆಬರ್, ಡಿಸೆಂಬರ್ ತಿಂಗಳಲ್ಲಿ ಕಾಂತ್ರಿ ಅಂತ ಹೇಳಿ ಒಬ್ಬರು ಸಚಿವರು ಈಗ ಮನೆಗೆ ಹೋಗಿದ್ದಾರೆ. ಒಪ್ಪಂದ ಆಗಿರೋದು ನಿಜ. ಈಗ ಜಗಳ ಆರಂಭವಾಗಿದೆ ಎಂದು ಲೇವಡಿ ಮಾಡಿದರು. ಸಿದ್ದರಾಮಯ್ಯ ಅಧಿಕಾರ ಬಿಟ್ಟುಕೊಡಲ್ಲ, ಡಿಕೆಶಿ ಹಠ ಬಿಡ್ತಿಲ್ಲ. ಕಾಂಗ್ರೆಸ್ ಜಗಳದಲ್ಲಿ ಸರ್ಕಾರ ಪತನವಾದ್ರೆ, ನಾವೇನೂ ಸರ್ಕಾರ ಮಾಡಲ್ಲ. ನಾವು ಚುನಾವಣೆಗೆ ಹೋಗಲು ಸಿದ್ಧರಿದ್ದೇವೆ ಎಂದು ತಿಳಿಸಿದರು. ಕಾಂಗ್ರೆಸ್ ಶಾಸಕರೇ ಅನುದಾನ ಬಂದಿಲ್ಲ ಎಂದು ಹೇಳುತ್ತಿದ್ದಾರೆ. ಬೆಂಗಳೂರಿನಲ್ಲಿ ಹಳ್ಳ ಇಲ್ಲದೇ ರಸ್ತೆ ತೋರಿಸಿದ್ರೆ ಬಹುಮಾನ ಕೊಡಬಹುದು ಎಂದು ಸಿದ್ದರಾಮಯ್ಯ ಸರ್ಕಾರದ ವಿರುದ್ಧ ವ್ಯಂಗ್ಯವಾಡಿದರು. ಮಳೆ ಹಾನಿ ಮತ್ತು ಬೆಳೆ ಹಾನಿ ವೀಕ್ಷಣೆಗೆ ಬಂದ ಬಿಜೆಪಿ ನಿಯೋಗ ಅತಿವೃಷ್ಟಿಯಿಂದ ಹಾಳಾದ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸುವ ಕೆಲಸ ಮಾಡಿತು. ಬೆಳಗಾವಿಯಲ್ಲಿ ಬಿಜೆಪಿ ನಾಯಕರಿಂದ ಅತಿವೃಷ್ಟಿ ಪ್ರದೇಶ ವೀಕ್ಷಣೆ ಮಾಡಲಾಯ್ತು.

## ಕಾರು ಪಲ್ಟಿ, ಮಗು ಸೇರಿ ಮೂವರ ಸಾವು


ಮಲ್ಲಮ್ಮ ನುಡಿವಾರ್ತೆ ಚಿತ್ರದುರ್ಗ:ಅ.3: ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲೂಕಿನ ಮೇಟಿಕುರ್ಕೆ ಬಳಿ ಶುಕ್ರವಾರ ಕಾರು ಪಲ್ಟಿಯಾಗಿದ್ದು, ಭೀಕರ ಅಪಘಾತದಲ್ಲಿ ಮಗು ಸೇರಿ ಮೂವರು ಮೃತಪಟ್ಟಿದ್ದಾರೆ. ಯಾದಗಿರಿ ಮೂಲದ ಮಲ್ಲಮ್ಮ (26), ಸರೋಜಮ್ಮ (25) ಮತ್ತು ಪುಟ್ಟ ಮಗು ಮೃತ ದುರ್ದೈವಿಗಳು. ಚಾಲಕನ ನಿಯಂತ್ರಣ ತಪ್ಪಿ ಕಾರು ಪಲ್ಟಿಯಾಗಿ ಈ ದುರಂತ ಸಂಭವಿಸಿದೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಸ್ಥಳಕ್ಕೆ ಡಿವೈಎಸ್‌ಪಿ ಶಿವಕುಮಾರ್ ಮತ್ತು ಸಿಪಿಐ ಗುಡ್ಡಪ್ಪ ಅವರು ಭೇಟಿನೀಡಿ ಪರಿಶೀಲನೆ ಮಾಡಿದ್ದು, ಹಿರಿಯೂರು ಗ್ರಾಮಾಂತರ ಠಾಣಾಯಲ್ಲಿ ಪ್ರಕರಣ ದಾಖಲಾಗಿದೆ.

## ರಾಜ್ಯ ಸರ್ಕಾರವು ರೈತರಿಗೆ ಸ್ಪಂದಿಸಿದೆ ಡಾ.ಶರಣಪ್ರಕಾಶ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು ಅ.3 : ಜಿಲ್ಲಾಧಿಕಾರಿಗಳ ಪಿಡಿ ಅಕೌಂಟಿನಲ್ಲಿ 26 ಕೋಟಿ ರೂ ಹಣ ಇದೆ. ಪರಿಹಾರ ಕಾರ್ಯಕ್ಕೆ ಯಾವುದೇ ರೀತಿಯ ಹಣಕಾಸಿನ ಕೊರತೆಯಿಲ್ಲ. ನಮ್ಮ ಸರ್ಕಾರವು ರೈತರಿಗೆ ಸ್ಪಂದಿಸುತ್ತಿದೆ ಎಂದು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ಹೇಳಿದರು. ಅ.3 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿದ ಬಳಿಕ ಅವರು ಪತ್ರಿಕಾಗೋಷ್ಠಿ ನಡೆಸಿದರು. ಮುಂಗಾರು ಹಂಗಾಮಿನ ಅವಧಿಯಲ್ಲಿ ಮಾನವ ಜೀವಹಾನಿಯ 7 ಪ್ರಕರಣಗಳಿಗೆ ತಲಾ 5 ಲಕ್ಷ ರೂ ದಂತೆ ಒಟ್ಟು 35 ಲಕ್ಷ ರೂ ಪರಿಹಾರವನ್ನು ಈಗಾಗಲೇ ನೀಡಲಾಗಿದೆ. 11 ಸಣ್ಣ ಮತ್ತು 4 ದೊಡ್ಡ ಜಾನುವಾರು ಜೀವಹಾನಿ ಪ್ರಕರಣಗಳಿಗೆ ಸಹ ಪರಿಹಾರ ಒದಗಿಸಲಾಗಿದೆ. ಜೀವಹಾನಿ, ಮನೆ ಹಾನಿ ಪ್ರಕರಣಗಳಿಗೆ ಕಾಲಮಿತಿಯೊಳಗೆ ಪರಿಹಾರ ಒದಗಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಸಚಿವರಾದ ಎನ್ ಎಸ್ ಬೋಸರಾಜು, ಶಾಸಕರಾದ ಬಸನಗೌಡ ದದ್ದಲ್, ಆರ್ ಬಸನಗೌಡ ತುರವಿಹಾಳ, ಹಂಪಯ್ಯ ನಾಯಕ, ಡಾ.ಎಸ್ ಶಿವರಾಜ ಪಾಟೀಲ, ಕರೆಮ್ಮ ಜಿ ನಾಯಕ, ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ ಹಾಗೂ ಇನ್ನಿತರರು ಇದ್ದರು.

## 2021ನೇ ಸಾಲಿನ ಪ್ರಶಸ್ತಿ ಘೋಷಣೆ ಚಾರ್ಲಿ 777 ಚಿತ್ರದ ನಟನೆಗೆ ರಕ್ಷಿತ್ ಶೆಟ್ಟಿಗೆ ಪ್ರಶಸ್ತಿ



ಮಲ್ಲಮ್ಮ ನುಡಿವಾರ್ತೆ ಬೆಂಗಳೂರು: ಅ.3:2021ನೇ ಸಾಲಿನ ವಾರ್ಷಿಕ ಚಲನಚಿತ್ರ ಪ್ರಶಸ್ತಿ ಘೋಷಣೆಯಾಗಿದ್ದು ಚಾರ್ಲಿ 777 ಚಿತ್ರದ ನಟನೆಗೆ ರಕ್ಷಿತ್ ಶೆಟ್ಟಿ ಅವರಿಗೆ ಅತ್ಯುತ್ತಮ ನಟ, ಮ್ಯೂಟ್ ಸಿನಿಮಾದ ನಟನೆಗೆ ಅರ್ಚನಾ ಜೋಯಿಸ್ ಅವರಿಗೆ ಅತ್ಯುತ್ತಮ ನಟಿ ಪ್ರಶಸ್ತಿ ಲಭಿಸಿದೆ. ದೊಡ್ಡಹಟ್ಟಿ ಬೈರೇಗೌಡ ಚಿತ್ರಕ್ಕೆ ಅತ್ಯುತ್ತಮ ಮೊದಲ ಚಿತ್ರ, ಯುವರತ್ನಕ್ಕೆ ಅತ್ಯುತ್ತಮ ಮನರಂಜನಾ ಚಿತ್ರ ಪ್ರಶಸ್ತಿ ಲಭಿಸಿದೆ

## ಜೈಲಿನಲ್ಲಿ ಮಾರಾಮಾರಿ ಓರ್ವನ ಮೇಲೆ ಹಲ್ಲೆ

ಮಲ್ಲಮ್ಮ ನುಡಿವಾರ್ತೆ ಕಲಬುರಗಿ ಅ.3 - ನಗರದ ಹೊರವಲಯದಲ್ಲಿರುವ ಕೇಂದ್ರ ಕಾರಾಗೃಹದಲ್ಲಿ ಕೈದಿಗಳಿಬ್ಬರ ಮಧ್ಯೆ ಮಾರಮಾರಿ ನಡೆದಿದ್ದು, ಮಾರಮಾರಿ ವೇಳೆ ಕೈದಿಯೊಬ್ಬ ಮತ್ತೊಬ್ಬ ಕೈದಿಗೆ ಹರಿತವಾದ ಆಯುಧದಿಂದ ಕುತ್ತಿಗೆಗೆ ಇರಿದ ಘಟನೆ ವರದಿಯಾಗಿದೆ. ಶುಕ್ರವಾರ ಬೆಳಿಗ್ಗೆ 8 ಗಂಟೆಗೆ ಘಟನೆ ಸಂಭವಿಸಿದೆ. ಪ್ರಕರಣವೊಂದರಲ್ಲಿ ಸಜಾ ಬಂಧಿಯಾಗಿರೋ ಇಸ್ಮಾಯಿಲ್ ಮೌಲಾಲಿ ಎಂಬಾತನಿಗೆ ಗಾಂಜಾ ಪ್ರಕರಣದಲ್ಲಿ ಸಜಾ ಬಂಧಿಯಾಗಿರುವ ನೆರೆಯ ಬೀದರ್ ಮೂಲದ ಮಹಮ್ಮದ್ ಹುಸೇನ್ ಎಂಬಾತ ಹರಿತವಾದ ಆಯುಧದಿಂದ ಕುತ್ತಿಗೆಗೆ ಇರಿದಿದ್ದಾನೆ.

**ವಿಶ್ವ ವೇಟ್‌ಲಿಫ್ಟಿಂಗ್ ಚಾಂಪಿಯನ್‌ಶಿಪ್: ಮಹಿಳೆಯರ 48 ಕೆಜಿ ವಿಭಾಗದಲ್ಲಿ ಮೀರಾಬಾಯಿ ಚಾನುಗೆ ಬೆಳ್ಳಿ ಪದಕ**

# "ಏಳು ಕೋಟಿಗೊ" ಜಯಘೋಷದ ಮಧ್ಯೆ: ಕೆಂಭಾವಿಯ ಮಲ್ಲಯ್ಯನ ವೈಭವ"

ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ :ಪಟ್ಟಣದಲ್ಲಿ ನಡೆದ ಮಲ್ಲಯ್ಯನ ಬಂಡಿ ಉತ್ಸವ ಈ ಬಾರಿ ಆಧ್ಯಾತ್ಮಿಕತೆ, ಸಂಸ್ಕೃತಿ ಮತ್ತು ಭಕ್ತಿಯ ಮಿಶ್ರಣವಾಗಿ ಅದ್ಭುತವಾಗಿ ಜರುಗಿತು. ಕರ್ನಾಟಕದ ನಾನಾ ಭಾಗಗಳಿಂದ ಬಂದ ಭಕ್ತಾದಿಗಳು ಉತ್ಸವದಲ್ಲಿ ಭಾಗವಹಿಸಿ ಮಲ್ಲಯ್ಯನ ಆಶೀರ್ವಾದ ಪಡೆದರು.



ಬಂಡಿ ಉತ್ಸವದ ಅಂಗವಾಗಿ ನಡೆದ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಪಟ್ಟಣದ ಜ್ಯೋತಿಷ್ಮಂತವಾಗಿ ಪ್ರಕಾಶಮಾನವಾಯಿತು. ಡೊಳ್ಳು ಕುಣಿತ, ಭಜನೆಗಳು, ಸಾಂಪ್ರದಾಯಿಕ ಕಲಾ ಪ್ರದರ್ಶನಗಳು ಉತ್ಸವವನ್ನು ವಿಶೇಷವಾಗಿಸಿದವು. ಡೊಳ್ಳಿನ ಘಂಘಾಟ, ಅದರ ಜೊತೆಗೆ ಭಕ್ತರ ಉತ್ಸಾಹದ ಜೈಕಾರ "ಏಳು ಕೋಟಿಗೊ ಮಲ್ಲಯ್ಯನಿಗೆ ಜಯ!" ಎಂಬ ಘೋಷಣೆಗಳಿಂದ ಸ್ಥಳವ್ಯಾಪ್ತವಾಗಿ ಆಧ್ಯಾತ್ಮಿಕ ಚೈತನ್ಯ ಹರಡಿತು. ಈ ಜೈಕಾರಗಳು ಭಕ್ತರ ಮನಸ್ಸಿನಲ್ಲಿ ಭಕ್ತಿಯ ಗಂಭೀರತೆಯನ್ನೂ, ಶ್ರದ್ಧೆಯ ಶಕ್ತಿ ಯನ್ನೂ ಪ್ರತಿಬಿಂಬಿಸಿವೆ.

ಈ ಉತ್ಸವವು ಕೆಂಭಾವಿಯ ಸಂಸ್ಕೃತಿಯ ಶ್ರೀಮಂತತೆಯನ್ನು ತೋರಿಕೊಟ್ಟಂತಾಯಿತು. ಹಿರಿಯ-ರಿಂದ ಮಕ್ಕಳವರೆಗೆ ಎಲ್ಲರೂ ಈ ಹಬ್ಬದಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಸಂಸ್ಕೃತಿ, ಪರಂಪರೆ ಮತ್ತು ದೇವಭಕ್ತಿಗೆ ಜೀವಂತ ಸಾಕ್ಷಿಯಾದರು.

**ಭಕ್ತರ ಮನಸ್ಸಿನಲ್ಲಿ ಆಧ್ಯಾತ್ಮಿಕ ಭಂಡಾರ:**

ಈ ಮಹೋತ್ಸವವು ಭಕ್ತರಲ್ಲಿ ಆಧ್ಯಾತ್ಮಿಕ ಭಾವನೆಗಳನ್ನು ತುಂಬಿದಂತೆ, ಒಂದು ಅಪೂರ್ವ ಅನುಭವವಾಯಿತು. ಮಲ್ಲಯ್ಯನ ಬಂಡಿ ಉತ್ಸವ ಎಂಬುದು ಕೇವಲ ಧಾರ್ಮಿಕ ಆಚರಣೆ ಮಾತ್ರವಲ್ಲ, ಅದು ಸಮಾಜದ ಐಕ್ಯತೆ, ನಂಬಿಕೆ, ಮತ್ತು ಸಂಸ್ಕೃತಿಯ ಒಂದು ಜತೆಗೋಲಿಸುವ ಕ್ಷಣವಾಗಿದೆ.

# ಅಮ್ಮ ಪ್ರಶಸ್ತಿ'ಗೆ ಬೆಳ್ಳಿ ಹಬ್ಬ 25 ನೇ ವರ್ಷದ 'ಅಮ್ಮ ಪ್ರಶಸ್ತಿ'ಗೆ ಕೃತಿಗಳ ಆಹ್ವಾನ

ಮಲ್ಲಮ್ಮನುಡಿ ವಾರ್ತೆ ಕಲಬುರಗಿ, ಅ. 3 ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ 'ಅಮ್ಮ ಪ್ರಶಸ್ತಿ' ಪ್ರಖ್ಯಾತಿಯನ್ನು ಪಡೆದಿದ್ದು, ಇದೀಗ 25 ನೇ ವರ್ಷದ ಸಂಭ್ರಮದಲ್ಲಿದೆ. ಪತ್ರಕರ್ತ ಹಾಗೂ ಸಾಹಿತಿ ಮಹಿಪಾಲರೆಡ್ಡಿ ಮುನ್ನೂರ್ ಅವರು ತಮ್ಮ ತಾಯಿಯ ಸ್ಮರಣಾರ್ಥವಾಗಿ ಜಿಲ್ಲೆಯ ಸೇಡಂನ ಮಾತೋಶ್ರೀ ಮಹಾದೇವಮ್ಮ ನಾಗಪ್ಪ ಮುನ್ನೂರ್ ಪ್ರತಿಷ್ಠಾನದ ವತಿಯಿಂದ ಕೊಡಮಾಡುವ 25 ನೇ ವರ್ಷದ 'ಅಮ್ಮ ಪ್ರಶಸ್ತಿ'ಗಾಗಿ 2024 ಮತ್ತು 2025 ನೇ ಸಾಲಿನಲ್ಲಿ ಪ್ರಕಟವಾದ ಕೃತಿಗಳನ್ನು ಆಹ್ವಾನಿಸಲಾಗಿದೆ.

ಕಳೆದ 24 ವರ್ಷಗಳಿಂದ ನಿರಂತರ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ನೀಡಲಾಗುತ್ತಿರುವ ಈಗ ಅಮ್ಮ ಪ್ರಶಸ್ತಿಗೆ 25 ರ ಸಂಭ್ರಮ. ಈ ಹಿನ್ನೆಲೆಯಲ್ಲಿ ರಾಜ್ಯಮಟ್ಟದ ಪ್ರತಿಷ್ಠಿತ 'ಅಮ್ಮ ಪ್ರಶಸ್ತಿ'ಗಾಗಿ ಸಾಹಿತ್ಯದ ಯಾವುದೇ ಪ್ರಕಾರದ ಕೃತಿಗಳ ಎರಡು ಪ್ರತಿಗಳನ್ನು ಕಳುಹಿಸಬಹುದು.

ಆಯ್ಕೆಯಾದ 5 ಕೃತಿಗಳಿಗೆ ತಲಾ 5 ಸಾವಿರ ನಗದು ಪುರಸ್ಕಾರ ಮತ್ತು




ಸನ್ಮಾನ, ಗೌರವದ ಕಾಣಿಕೆ ನೀಡಿ ಸತ್ಕರಿಸಲಾಗುವುದು. ಕೃತಿಗಳನ್ನು ಸ್ವೀಕರಿಸಲು ಅಕ್ಟೋಬರ್ 30 ಕೊನೆಯ ದಿನಾಂಕವಾಗಿರುತ್ತದೆ



ಎಂದು ಪ್ರತಿಷ್ಠಾನದ ಸಂಚಾಲಕಿ ರತ್ನಕಲಾ ಮಹಿಪಾಲರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕೃತಿಗಳನ್ನು ಕಳುಹಿಸಬೇಕಾದ ವಿಳಾಸ : ಶ್ರೀಮತಿ ರತ್ನಕಲಾ ಮಹಿಪಾಲರೆಡ್ಡಿ ಮುನ್ನೂರ್, ಸಂಚಾಲಕಿ, ಮಾತೋಶ್ರೀ ಮಹಾದೇವಮ್ಮ ನಾಗಪ್ಪ ಮುನ್ನೂರ್ ಪ್ರತಿಷ್ಠಾನ "ಅಮ್ಮ ನಿಲಯ", ರಾಮಚಂದ್ರ ಲೇಔಟ್, ಪಿಡಬ್ಲ್ಯೂ ಡಿ ಕಚೇರಿ ಹತ್ತಿರ, ಸೇಡಂ-585 222. ಕಲಬುರಗಿ ಜಿಲ್ಲೆ. ಹೆಚ್ಚಿನ ವಿವರಗಳಿಗಾಗಿ, ಮೊಬೈಲ್ ಸಂಖ್ಯೆ: 9731666052 ಸಂಪರ್ಕಿಸಬಹುದು.

# ಬೆಳೆಹಾನಿಗೆ ಪರಿಹಾರ ಸಿಕ್ಕಿಲ್ಲ ಎಂದು ದೂರು ಬಂದರೆ ಕ್ರಮ: ಜಿಲ್ಲಾ ಉಸ್ತುವಾರಿ ಸಚಿವರಿಂದ ಎಚ್ಚರಿಕೆ

ಮಲ್ಲಮ್ಮನುಡಿ ವಾರ್ತೆ ರಾಯಚೂರು ಅ.3: ನಮ್ಮ ಜಮೀನಿಗೆ ಯಾರು ಬಂದಿಲ್ಲ. ಸಮೀಕ್ಷೆ ಮಾಡಿಲ್ಲ. ಬೆಳೆಹಾನಿಯಾದರೂ ನಮಗೆ ಇದುವರೆಗೆ ಪರಿಹಾರ ಸಿಕ್ಕಿಲ್ಲ ಎಂದು ಜಿಲ್ಲೆಯ ಯಾವುದೇ ಪ್ರದೇಶದ ರೈತರಿಂದ ದೂರುಗಳು ಕೇಳಿ ಬಂದಲ್ಲಿ, ಅಧಿಕಾರಿಗಳಿಗೆ ಹೊಣೆಯಾಗಿಸಿ ಕ್ರಮ ಜರುಗಿಸಲಾಗುವುದು ಎಂದು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ಎಚ್ಚರಿಕೆ ನೀಡಿದರು.



ಅ.3ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿ ಮಳೆ ಹಾನಿ ಪ್ರದೇಶದಲ್ಲಿ ಕೈಗೊಂಡಿರುವ ಪರಿಹಾರ ಕಾರ್ಯಗಳ ಪ್ರಗತಿ ಪರಿಶೀಲನೆ ನಡೆಸಿ ಅವರು ಅವರು ಮಾತನಾಡಿದರು.

ಬೆಳೆಹಾನಿ ಜಂಟಿ ಸಮೀಕ್ಷೆ ಅಚ್ಚುಕಟ್ಟಾಗಿ ನಡೆಯಬೇಕು. ಹಾನಿಗೊಳಗಾದ ಪ್ರತಿಯೊಂದು ಹೊಲಕ್ಕೂ ಹೋಗಿ ಸರ್ವೆ ಮಾಡಬೇಕು. ಹಾನಿ ಅನುಭವಿಸಿದ ಪ್ರತಿಯೊಬ್ಬ ರೈತರಿಗೂ ಸಮರ್ಪಕ ಪರಿಹಾರಕ್ಕೆ ಕ್ರಮ ವಹಿಸಬೇಕು. ಜನ-ಜಾನುವಾರ ಜೀವಹಾನಿ, ಮನೆ ಹಾನಿ ಪ್ರಕರಣಗಳಿಗೆ ಸಹ ಕಾಲಮಿತಿಯೊಳಗೆ ಪರಿಹಾರ ನೀಡಲು ಕ್ರಮವಹಿಸಬೇಕು ಎಂದು ಸಚಿವರು ಸೂಚನೆ ನೀಡಿದರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಬೋಸರಾಜು ಅವರು ಮಾತನಾಡಿ, ಅಧಿಕಾರಿಗಳು ಕಚೇರಿಯಿಂದ ಹೊರಬಂದು ತಂಡವಾಗಿ ಸಮೀಕ್ಷಾ ಕಾರ್ಯದಲ್ಲಿ ಭಾಗಿಯಾಗಬೇಕು. ಪರಿಹಾರ ದಕ್ಕುತ್ತದೆ ಎಂದು ರೈತರಿಗೆ ವಿಶ್ವಾಸ ಬರುವ ಹಾಗೆ ಅಧಿಕಾರಿಗಳು ಕಾಳಜಿ ವಹಿಸಿ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

ಶಾಸಕರ ಸಲಹೆ: ಕೆಲಕಡೆಗೆ ವಿದ್ಯುತ್ ಪರಿವರ್ತಕಗಳು ಮುಳುಗಡೆಯಾಗಿದ್ದು, ಇದಕ್ಕೆ ರಿಪ್ಲೇಸಮೆಂಟ್ ಮಾಡಬೇಕು ಎಂದು ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಟ್ರಾನ್ಸಫಾರ್ಮರ್ ಖರೀದಿಸಿ: ಟ್ರಾನ್ಸಫಾರ್ಮರ್ ಬೇಕು ಎಂದು ರೈತರು ಸಾಲುಗಟ್ಟಿ ನಿಲ್ಲುವಂತಾಗಿದೆ. ಎಲ್ಲಾ ತಾಲೂಕಿನಲ್ಲಿ ಟ್ರಾನ್ಸಫಾರ್ಮರಗಳ ಖರೀದಿ ಆಗಬೇಕಿದೆ ಎಂದು ರಾಯಚೂರ ನಗರ ಶಾಸಕರಾದ ಡಾ.ಎಸ್ ಶಿವರಾಜ್ ಪಾಟೀಲ ಅವರು ಸಲಹೆ ಮಾಡಿದರು.

ಅಧಿಕಾರಿಗಳಿಗೆ ಸೂಚನೆ: ದಾಳಿಂಬೆ ಸೇರಿದಂತೆ ಬೇರೆ ಬೇರೆ ತೋಟಗಾರಿಕಾ ಬೆಳೆಗಳಿಗೆ ಮಸ್ಕಿ ತಾಲೂಕಿನಲ್ಲಿ ಹಾನಿಯಾಗಿದೆ. ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಬೇಕು. ರಸ್ತೆಗಳ ರಿಪೇರಿ ಆಗಬೇಕು ಎಂದು ಮಸ್ಕಿ ಶಾಸಕರಾದ ಆರ್ ಬಸನಗೌಡ ತುರವಿಹಾಳ ಅವರು ತೋಟಗಾರಿಕಾ ಹಾಗೂ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಕಳೆದ ಶನಿವಾರದಿಂದಲೇ ಜಂಟಿ ಸಮೀಕ್ಷೆ ಆರಂಭವಾಗಿದೆ. ತೀವ್ರ ಮಳೆಯಿಂದಾಗಿ, ಈಗಾಗಲೇ ಜಿಲ್ಲೆಯಲ್ಲಿ ಮೊದಲ ಹಂತದಲ್ಲಿ 25,000 ಹೆಕ್ಟೇರ್ ಪ್ರದೇಶದಲ್ಲಿನ ಬೆಳೆಗೆ ಹಾನಿಯಾಗಿದೆ ಎಂದು ಅಂದಾಜಿಸಲಾಗಿದೆ. ಇದುವರೆಗೆ ಶೇ.18ರಷ್ಟು ಸಮೀಕ್ಷೆ ಆಗಿದೆ. ಇನ್ನು ಮುಂದುವರೆದಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಮಾನವಿ ಶಾಸಕರಾದ ಹಂಪಯ್ಯ ನಾಯಕ, ದೇವದುರ್ಗ ಶಾಸಕರಾದ ಕರೆಮ್ಮ ಜಿ ನಾಯಕ, ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಎಂ., ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

# ಶಾಸಕರಿಂದ ಸಮುದಾಯ ಭವನ ನಿರ್ಮಾಣಕ್ಕೆ ಭೂಮಿಪೂಜೆ



ಮಲ್ಲಮ್ಮನುಡಿ ವಾರ್ತೆ ರಾಯಚೂರು ಅ.3 : ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್ ಅವರು ಅಕ್ಟೋಬರ್ 2ರಂದು ಹೀರಾಪೂರ ಗ್ರಾಮದಲ್ಲಿ ಶ್ರೀ ಆಂಜನೇಯ್ಯಸ್ವಾಮಿ ದೇವಸ್ಥಾನಕ್ಕೆ ಶೆಡ್ ನಿರ್ಮಾಣ ಮತ್ತು ಶ್ರೀ ಮಾರೆಮ್ಮ ದೇವಸ್ಥಾನ ಅಭಿವೃದ್ಧಿಗಾಗಿ ಕೆಕೆಆರ್‌ಡಿಬಿ ಮೈಕ್ರೋ ಯೋಜನೆಡಿಯಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದರು.

ಎಲೆಬಿಚ್ಚಾಲಿ, ಕುರ್ಡಿ, ಆರೋಲಿ, ಅಡವಿಖಾನಪೂರ, ಉಡಮಗಲ್ ಗ್ರಾಮಗಳಿಗೆ ತೆರಳಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾದರು. ಗ್ರಾಮ ದೇವತೆ ದ್ಯಾಮವ್ವ ದೇವಿಯ ಮೂರ್ತಿ ಪ್ರತಿಷ್ಠಾಪನೆ ಮತ್ತು ನೂತನ ಗುಡಿಯ ಉದ್ಘಾಟನೆ ನೆರವೇರಿಸಿದರು. ಕುರ್ಡಿ ಗ್ರಾಮದಲ್ಲಿ ಶ್ರೀ ದ್ಯಾಮವ್ವದೇವಿಯ ಪುರಾಣದ ಅಂಗವಾಗಿ ಕುಂಭೋತ್ಸವ ಕಾರ್ಯಕ್ರಮದಲ್ಲಿ ಭಾಗಿಯಾದರು. ಈ ಸಂದರ್ಭದಲ್ಲಿ ಬ್ಲಾಕ್ ಅಧ್ಯಕ್ಷರು, ಹಿರಿಯ ಮುಖಂಡರು, ಆಯಾ ಗ್ರಾಮಸ್ಥರು ಉಪಸ್ಥಿತರಿದ್ದರು.

# ಲಿಂಗಸುಗೂರ, ಮಸ್ಕಿ, ಸಿಂಧನೂರ, ಮಾನ್ವಿ ತಾಲೂಕಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಸಂಚಾರ: ಬೆಳೆ ಹಾನಿ ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅ 3: ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ಅ.3ರಂದು ಲಿಂಗಸುಗೂರ, ಮಸ್ಕಿ, ಸಿಂಧನೂರ, ಮಾನವಿ ತಾಲೂಕುಗಳಲ್ಲಿ ಸಂಚರಿಸಿ ಅತಿವೃಷ್ಟಿಯಿಂದಾದ ಬೆಳೆ ಹಾನಿ ಪರಿಶೀಲಿಸಿದರು.



ಪೂರ್ವನಿಗದಿಯಂತೆ ಬೆಳಗ್ಗೆ 9.30ರ ವೇಳೆಗೆ ಲಿಂಗಸುಗೂರ ತಾಲೂಕಿನ ಸರಹದ್ದು ಪ್ರವೇಶಿಸಿದ ಸಚಿವರು, ಗುರಗುಂಟಾ ಗ್ರಾಮದ ಮೂಲಕ ಬೆಳೆಹಾನಿಯ ಪರಿವೀಕ್ಷಣೆ ಆರಂಭಿಸಿದರು. ಲಿಂಗಸುಗೂರ ಕ್ಷೇತ್ರದ ಶಾಸಕರಾದ ಮಾನಪ್ಪ ಡಿ ವಜ್ಜಲ್ ಮತ್ತು ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ ಅವರೊಂದಿಗೆ ಯರಡೋಣದಲ್ಲಿ ತೊಗರಿ ಬೆಳೆಯ ವೀಕ್ಷಣೆ ಮಾಡಿದರು.

ಮಳೆಯಿಂದಾಗಿ ಲಿಂಗಸುಗೂರು ತಾಲೂಕಿನ ಬಹುತೇಕ ಕಡೆಗಳಲ್ಲಿನ ರಸ್ತೆಗಳು ಹಾಳಾಗಿದ್ದು, ಇದಕ್ಕೆ ಕೂಡಲೇ ಅನುದಾನ ಬಿಡುಗಡೆ ಮಾಡಿ ರಸ್ತ ಸರಿಪಡಿಸಬೇಕು ಎಂದು ಇದೆ ವೇಳೆ ಶಾಸಕರಾದ ಮಾನಪ್ಪ ಡಿ ವಜ್ಜಲ್ ಅವರು ಸಚಿವರಿಗೆ ಮನವಿ ಸಲ್ಲಿಸಿದರು.

ಸಚಿವರು ಬಳಿಕ ಮಸ್ಕಿ ತಾಲೂಕು ಪ್ರವೇಶಿಸಿ, ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಆರ್ ಬಸನಗೌಡ ತುರವಿಹಾಳ ಅವರೊಂದಿಗೆ ಕೋಠ ಗ್ರಾಮದ ಬಳಿಯಲ್ಲಿ ಹತ್ತಿ ಬೆಳೆ ಮತ್ತು ಸಂತೆಕೆಲ್ಲೂರ ಗ್ರಾಮದಲ್ಲಿ ಹಾಳಾದ ತೊಗರಿ ಬೆಳೆಯ ಮಾಹಿತಿ ಪಡೆದುಕೊಂಡರು. ಬಳಿಕ ಸಿಂಧನೂರ ತಾಲೂಕು ಸರಹದ್ದಿನ ರಾಮತ್ನಾಳ ಗ್ರಾಮದಲ್ಲಿ ಸಿಂಧನೂರ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಹಾಗೂ ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ ಅವರೊಂದಿಗೆ ಹತ್ತಿ ಬೆಳೆಯ ವೀಕ್ಷಣೆ ನಡೆಸಿದರು.

ಬಳಿಕ ಸಚಿವರು, ಮಧ್ಯಾಹ್ನ 1.30ರ ವೇಳೆಗೆ ಮಾನವಿ ತಾಲೂಕಿನ ಸರಹದ್ದು ಪ್ರವೇಶಿಸಿ ಹಿರೇಕೊಟ್ನೇಕಲ್ ಗ್ರಾಮದ ರೈತ ಮುದುಕಪ್ಪಗೌಡ ವಟಗಲ್ ಅವರ ಜಮೀನಲ್ಲಿನ ಹತ್ತಿ ಬೆಳೆಯನ್ನು ಮಾನವಿ ಕ್ಷೇತ್ರದ ಶಾಸಕರಾದ ಹಂಪಯ್ಯ ನಾಯಕ ಹಾಗೂ ಮಸ್ಕಿ ಕ್ಷೇತ್ರದ ಶಾಸಕರಾದ ಆರ್ ಬಸನಗೌಡ ತುರ್ವಿಹಾಳ ಅವರೊಂದಿಗೆ ವೀಕ್ಷಣೆ ನಡೆಸಿ ಮಾಹಿತಿ ಪಡೆದುಕೊಂಡರು. ಬಳಿಕ ನೀರಮಾನ್ವಿಯ ರೈತ ಮಹೇಶ ನಾಗಸಾಯಿ ಅವರ ಜಮೀನಿಗೆ ತೆರಳಿ ಹಾಳಾದ ಹತ್ತಿ ಬೆಳೆಯ ವೀಕ್ಷಣೆ ನಡೆಸಿದರು.

ಜಂಟಿ ಸಮೀಕ್ಷೆಗೆ ಸೂಚನೆ: ರಾಯಚೂರು ಜಿಲ್ಲಾದ್ಯಂತ ಈಗಾಗಲೇ ಬೆಳೆಹಾನಿ ಕುರಿತ ಸಮೀಕ್ಷೆ ಆರಂಭವಾಗಿದೆ. ಅಧಿಕಾರಿಗಳಿಗೆ ಅಚ್ಚುಕಟ್ಟಾಗಿ ಸಮೀಕ್ಷೆ ನಡೆಸಲು ಸೂಚನೆ ನೀಡಲಾಗಿದೆ ಎಂದು ಸಚಿವರು ಸುದ್ದಿಗಾರರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಅಧಿಕಾರೇತರ ಸದಸ್ಯರಾದ ಮತ್ತು ಪ್ರಾದೇಶಿಕ ಅಸಮತೋಲನ ತಜ್ಞರಾದ ಡಾ. ರಝಾಕ್ ಉಸ್ತಾದ್ ಹೆಚ್, ಸಹಾಯಕ ಆಯುಕ್ತರಾದ ಬಸವಣೆಪ್ಪ ಕಲಶೆಟ್ಟಿ, ಕೃಷಿ, ತೋಟಗಾರಿಕೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಶೇಂಗಾ ಉತ್ಪನ್ನ ಖರೀದಿಸಲು ಖರೀದಿ ಕೇಂದ್ರಗಳ ಸ್ಥಾಪನೆ: ಜಿಲ್ಲಾಧಿಕಾರಿ ನಿತೀಶ್ ಕೆ

ಮಲ್ಲಮ್ಮನುಡಿ ವಾರ್ತೆ ರಾಯಚೂರು ಅ.03: ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ 2025-26ನೇ ಸಾಲಿನಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ ಶೇಂಗಾ ಉತ್ಪನ್ನ ಖರೀದಿಸಲು ಜಿಲ್ಲೆಯಲ್ಲಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ರೈತರು ಯೋಜನೆಯ ಸದುಪಯೋಗ ಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ಹಾಗೂ ಹಾಗೂ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಅಧ್ಯಕ್ಷರಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.



ಸರ್ಕಾರದ ಆದೇಶದಂತೆ 2025-26ನೇ ಸಾಲಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಶೇಂಗಾ ಉತ್ಪನ್ನವನ್ನು ಪ್ರತಿ ಎಕರಿಗೆ 3.00 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಾಲ್ ಎಫ್.ಎ.ಕ್ಯೂ ಗುಣಮಟ್ಟದ ಪ್ರತಿ ಕ್ವಿಂಟಾಲ್‌ಗೆ 7,263 ರೂ.ಗಳಂತೆ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸಲಾಗುವುದು. ದಿನಾಂಕ 29-09-2025 ರಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗಧಿಪಡಿಸಿದೆ.

ರಾಯಚೂರು ತಾಲೂಕಿನ ಹುಣಸಿಹಾಳಹುಡಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9743695467, ಸಿಂಧನೂರು ತಾಲೂಕಿನ ಜವಳಗೇರಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9964165509, ಹ್ಮಡಾ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9964315868, ಲಿಂಗಸುಗೂರು ತಾಲೂಕಿನ ಮಟ್ಟೂರು ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 7337773317, ಮೆದಕಿನಾಳ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9663704921, ನಾಗರಾಳ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 7483685720, ಮಾನವಿ ತಾಲೂಕಿನ ತೋರಣದಿನ್ನಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9902387316, ದೇವದುರ್ಗ ತಾಲೂಕಿನ ಜಾಲಹಳ್ಳಿ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 7899312989, ಸಿರವಾರ ತಾಲೂಕಿನ ಸಿರವಾರ ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘದ ಮೊಬೈಲ್ ಸಂಖ್ಯೆ: 9880891919ಗೆ ಸಂಪರ್ಕ ಮಾಡಬಹುದಾಗಿದೆ.

ರೈತರಿಂದ ಶೇಂಗಾ ಖರೀದಿಸುವ ಸಂಬಂಧ ರೈತರ ಬಾಂಧವರು ಫ್ರೂಟ್ಸ್ ಐ.ಡಿ ಯೊಂದಿಗೆ ತಮ್ಮ ಹತ್ತಿರದ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿ ಶೇಂಗಾ ಮಾರಾಟ ಮಾಡಿ ಸರ್ಕಾರದ ಯೋಜನೆಯ ಸದುಪಯೋಗಪಡಿಸಿಕೊಳ್ಳಲು ಜಿಲ್ಲೆಯ ರೈತ ಬಾಂಧವರಲ್ಲಿ ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

# ಮಾನವಿ ತಾಯಿ ಮಕ್ಕಳ ಆಸ್ಪತ್ರೆಯ ಸೇವೆಗೆ ಸುಬೋಧ್ ಯಾದವ್ ಮೆಚ್ಚುಗೆ

ರಾಯಚೂರು ಅ.3: ಮಾನ್ವಿ ಪಟ್ಟಣದ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಲಭ್ಯ ಸಂಪನ್ಮೂಲಗಳ ಮೂಲಕ ನೀಡುತ್ತಿರುವ ಸೇವೆ ಶ್ಲಾಘನೀಯವಾಗಿದೆ ಎಂದು ಕೇಂದ್ರ ಜಲಶಕ್ತಿ ಸಚಿವಾಲಯದ ಅಪರ ಕಾರ್ಯದರ್ಶಿಗಳಾದ

ಸುಬೋಧ್ ಯಾದವ್ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಮಹತ್ವಾಕಾಂಕ್ಷಿ ಜಿಲ್ಲೆ ಯೋಜನೆಯಡಿ ಜಿಲ್ಲೆಯಲ್ಲಿ ಸೂಚ್ಯಾಂಕಗಳ ಸಾಧನೆ, ಸೇವೆಗಳ ನೀಡುವಿಕೆ, ಅನುಷ್ಠಾನ ಕುರಿತು ವಿವಿಧ ಇಲಾಖೆಗಳ ಪರಿಶೀಲನೆಯಡಿ ಮಾನ್ವಿ ಪಟ್ಟಣದಲ್ಲಿಯ ತಾಯಿ ಮಕ್ಕಳ ಆಸ್ಪತ್ರೆಗೆ ಅಕ್ಟೋಬರ್ 3ರಂದು ಭೇಟಿ ನೀಡಿ, ಹೆರಿಗೆ ಪೂರ್ವ ನಿಗಾವಣೆ ಕೊಠಡಿ, ಹೆರಿಗೆ ಕೊಠಡಿ, ಬಾಣಂತಿಯರ ಆರೈಕೆ ವಾರ್ಡ್, ನವಜಾತ ಶಿಶು ಆರೈಕೆ ಘಟಕ, ತಾಯಿ ಮಗುವಿನ ಆರೈಕೆಗೆ ಸಂಬಂಧಿಸಿದ ಚಿಕಿತ್ಸಾ ವಿಧಾನಗಳು, ಒದಗಿಸುವ ಔಷಧಿಗಳ ಕುರಿತು ಪರಿಶೀಲಿಸಿ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.



ಅಲ್ಲಿನ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಖುದ್ದು ಮಾತನಾಡಿಸಿ ಸೇವೆಗಳ ನೀಡುವಿಕೆಗೆ ಅವರು ಸಂತಸ ವ್ಯಕ್ತಪಡಿಸಿದರು.

ಆಸ್ಪತ್ರೆಗೆ ಬರುವ ಸಾರ್ವಜನಿಕರಿಗೆ ನೀಡುವ ಸೇವೆಗಳನ್ನು ಮನಪೂರ್ವಕವಾಗಿ ನೀಡಿ ಜನರ ಮನಸ್ಸಿಲ್ಲಿ ಸರಕಾರದ ಬಗ್ಗೆ ಗೌರವ ಮೂಡಿಸುವ ಕಾರ್ಯ ಪ್ರತಿಯೊಬ್ಬ ವೈದ್ಯರು ಹಾಗೂ ಸಿಬ್ಬಂದಿಯವರ ಜವಾಬ್ದಾರಿಯಾಗಿದೆ ಎಂದು ಅವರು ಸಲಹೆ ಮಾಡಿದರು.

ಗುಣಮಟ್ಟದ ಸೇವೆಗಳನ್ನು ನೀಡುವಲ್ಲಿ ಯಾವುದೇ ರೀತಿಯಲ್ಲಿ ರಾಜಿಯಾಗದಂತೆ ಕಾರ್ಯನಿರ್ವಹಿಸಲು ಸೂಚನೆ ನೀಡಿದರು. ಇದಕ್ಕು ಪೂರ್ವದಲ್ಲಿ ಕಲ್ಲೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕು ಸಹ ಭೇಟಿ ನೀಡಿದರು.

ಈ ಸಂದರ್ಭದಲ್ಲಿ ಪ್ರೊಬೆಷನರಿ ಐಎಎಸ್ ಅಧಿಕಾರಿ ಪುರುರಾಜ್ ಸಿಂಗ್ ಸೋಲಂಕಿ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ ಟಿ. ರೋಣಿ,

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ ನಂದಿತಾ. ಎಮ್.ಎನ್. ಜಿಲ್ಲಾ ಎನ್‌ವಿಬಿಡಿಸಿಪಿ ಅಧಿಕಾರಿ ಡಾ.ಚಂದ್ರಶೇಖರಯ್ಯಸ್ವಾಮಿ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಖಾಲೀದ್ ಅಹಮ್ಮದ್, ತಾಲೂಕು ಆರೋಗ್ಯಾಧಿಕಾರಿ ಡಾ ಶರಣಬಸವರಾಜ್, ಸಿಡಿಪಿಓ ಮನ್ಸೂರು ಅಲಿ, ಮುಖ್ಯ ಆಡಳಿತ ವೈದ್ಯಾಧಿಕಾರಿ ಡಾ.ಅರವಿಂದ್ ಸೇರಿದಂತೆ ಪ್ರಸೂತಿ ತಜ್ಞರು, ಮಕ್ಕಳ ತಜ್ಞರು ಉಪಸ್ಥಿತರಿದ್ದರು.

# ವಿಶ್ವ ಬಾಹ್ಯಾಕಾಶ ಸಪ್ತಾಹ ಅಂಗವಾಗಿ ವಿವಿಧ ಕಾರ್ಯಕ್ರಮಗಳ ಆಯೋಜನೆ

ಕಲಬುರಗಿ,ಅ.03-ಗುಲಬರ್ಗಾ ಜಿಲ್ಲಾ ವಿಜ್ಞಾನ ಕೇಂದ್ರವು "ಬಾಹ್ಯಾಕಾಶದಲ್ಲಿ ವಾಸಿಸುವುದು" ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ಇದೇ ಅಕ್ಟೋಬರ್ 05 ರಿಂದ 10 ರವರೆಗೆ ವಿಶ್ವ ಬಾಹ್ಯಾಕಾಶ ಸಪ್ತಾಹವನ್ನು ಆಚರಿಸಲಾಗುತ್ತಿದೆ. ಈ ಸಪ್ತಾಯ ಅಂಗವಾಗಿ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗಾಗಿ ಕೆಳಕಂಡ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದ ವಿಜ್ಞಾನ ಅಧಿಕಾರಿಗಳು ತಿಳಿಸಿದ್ದಾರೆ. ಅಕ್ಟೋಬರ್ 5 ರಂದು ಭಾನುವಾರ ಬೆಳಿಗ್ಗೆ 11 ಗಂಟೆಗೆ 5 ರಿಂದ 7ನೇ ತರಗತಿಯ ವಿದ್ಯಾರ್ಥಿಗಳಿಗೆ "Life on Mars - Our Future Home" ವಿಷಯ ಕುರಿತು ಹಾಗೂ 8 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗE "The future of Space Travel-Beyond imagination" ವಿಷಯ ಕುರಿತು ಡ್ರಾಯಿಂಗ್ ಮತ್ತು ಪೇಂಟಿಂಗ್ ಸ್ಪರ್ಧೆ ಆಯೋಜಿಸಲಾಗಿದೆ. ಈ ಸ್ಪರ್ಧೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಡ್ರಾಯಿಂಗ್ ಶೀಟ್ ಒದಗಿಸಲಾಗುತ್ತಿದ್ದು,

ಇತರ ಸಾಮಗ್ರಿಗಳನ್ನು ವಿದ್ಯಾರ್ಥಿಗಳೇ ತರಬೇಕು. ಅಕ್ಟೋಬರ್ 6 ರಂದು ಸೋಮವಾರ ಬೆಳಿಗ್ಗೆ 11 ಗಂಟೆಗೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗಾಗಿ Exploring the Cosmos' ಕುರಿತು

ಚಲನಚಿತ್ರ ಪ್ರದರ್ಶನ ನಡೆಯಲಿದೆ. ಅಕ್ಟೋಬರ್ 7 ರಂದು ಸಂಜೆ 6.30 ರಿಂದ 7.30 ಗಂಟೆಯವರೆಗೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗಾಗಿ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ದೂರದರ್ಶಕದೊಂದಿಗೆ ಆಕಾಶ ವೀಕ್ಷಣೆ ಕಾರ್ಯಕ್ರಮ ಜರುಗಲಿದೆ. ಈ ಆಕಾಶ ವೀಕ್ಷಣೆಯು ಆಕಾಶದ ಸ್ಥಿತಿಗೆ ಒಳಪಟ್ಟಿರುತ್ತದೆ.

ಅಕ್ಟೋಬರ್ 8 ರಂದು ಬೆಳಿಗ್ಗೆ 11 ಗಂಟೆಗೆ 5 ಹಾಗೂ 6ನೇ ತರಗತಿಯ

ತರಗತಿಯ ವಿದ್ಯಾರ್ಥಿಗಳಿಗಾಗಿ 'Build a Satellite Model' ಉಪಗ್ರಹ ಮಾದರಿಯನ್ನು

ನಿರ್ಮಿಸುವ ಕುರಿತು ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

ಉಪಗ್ರಹ ಮಾದರಿ ತಯಾರಿ-ಕೆ ಕಾರ್ಯಾಗಾರಕ್ಕೆ ಬೇಕಾದ ಸಾಮಗ್ರಿಗಳನ್ನು ಜಿಲ್ಲಾ ವಿಜ್ಞಾನ ಕೇಂದ್ರವು ಒದಗಿಸುತ್ತಿದೆ.

ಅಕ್ಟೋಬರ್ 10 ರಂದು ಬೆಳಿಗ್ಗೆ 11 ಗಂಟೆಗೆ 'Journey to Space-Challenges & Possibilities' ವಿಜ್ಞಾನ ಉಪನ್ಯಾಸ ಕಾರ್ಯಕ್ರಮ

ಹಾಗೂ ಬಹುಮಾನ ವಿತರಣಾ ಕಾರ್ಯಕ್ರಮ ಜರುಗಲಿದೆ.

ಹೆಚ್ಚಿನ ಮಾಹಿತಿಗಾಗಿ

ದೂರವಾಣಿ ಸಂಖ್ಯೆ 08472-270608, ಮೊಬೈಲ್ ಸಂಖ್ಯೆ 9788078048/ 9447541616 ಗಳಿಗೆ ವಾಟ್ಸ್‌ಆಪ್ ಮೂಲಕ ಸಂಪರ್ಡಿಸಲು ಕೋರಲಾಗಿದೆ.

# ಶಾಂತಿಯುತ ಆರ್.ಎಸ್.ಎಸ್ ಪಥಸಂಚಲನಕ್ಕೆ ಕರೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.3-ಅಕ್ಟೋಬರ 5 ರಂದು ನಗರದಲ್ಲಿ ಜರುಗಲಿರುವ ಆರ್.ಎಸ್.ಎಸ್.ಪಥಸಂಚಲನವನ್ನು ಶಾಂತಿ, ಸೌಹಾರ್ದತೆಯಿಂದ ಆಚರಿಸುವಂತೆ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಕರೆ ನೀಡಿದರು.

ಶುಕ್ರವಾರ ನಡೆದ ಶಾಂತತಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ನಗರದಲ್ಲಿ ವ್ಯಕ್ತಿಗತವಾಗಿ ಯಾರ ಭಾವನೆಗೂ ಧಕ್ಕೆ ತರುವಂತ ಹಾಗೂ ಕೋಮು ಸೌಹಾರ್ದತೆ ಕದಡುವ ಘೋಷಣೆ ಹಾಗೂ ಭಾವಚಿತ್ರವುಳ್ಳ ಬಂಟಿಂಗ್ಸ್, ಬ್ಯಾನರ್‌ಗಳನ್ನು ಹಾಕದಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಆರ್.ಎಸ್.ಎಸ್ ಒಂದು ಶಿಸ್ತಿನ ಸಂಘವಾಗಿದ್ದು, ಶಿಸ್ತಿನಿಂದಲೇ ಪಥಸಂಚಲವನ್ನು ಉತ್ಸವದಂತೆ ಆಚರಿಸಿ, ಸಂಭ್ರಮ ತರುವ ಕೆಲಸವಾಗಬೇಕು ಎಂದರು.

ಸಂಚಲನದ ಹಿಂದೆ ಹಾಗೂ ಮುಂದೆ ಸಂಘದ ಪ್ರಮುಖ ಸ್ವಯಂ ಸೇವಕರು ಶಾಂತಿ ಕಾಪಾಡಲು ನಿಗಾ ವಹಿಸುವ ಜವಾಬ್ದಾರಿ ಹೊರಬೇಕೆಂದು ತಿಳಿಸಿದ ಅವರು, ಪಥ ಸಂಚಲನದ ಮಾರ್ಗದಲ್ಲಿ ಸ್ವಚ್ಛತೆ ಜೊತೆ ರಸ್ತೆಯಲ್ಲಿಯೂ ತಗ್ಗುದಿನ್ನೆ ಮುಚ್ಚುವಂತೆ ಹಾಗೂ ಕಡ್ಡಾಯವಾಗಿ ವಿದ್ಯುತ್ ಸಂಪರ್ಕ ಕಡಿತಗೊಳ್ಳದಂತೆ ನೋಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಹೆಚ್ಚುವರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ ಮಾತನಾಡಿ, ಆರ್.ಎಸ್.ಎಸ್ ಪಥ ಸಂಚಲನವನ್ನು ಸೌಹಾರ್ದತೆಯಿಂದ ಆಚರಿಸುವಂತೆ ಕೋರಿದರು. ಜಿಲ್ಲೆಯ ಜನರು ಶಾಂತಿ-ಸೌಹಾರ್ದತೆಯಿಂದ ಆಚರಿಸಿ ಏಕತಾ ಮನೋಬಾವ ಮೆರೆಯಬೇಕು ಎಂದರು.

ಪಥ ಸಂಚಲನ ಸಂಜೆ 4 ಗಂಟೆಗೆ ಪ್ರತ್ಯೇಕ ಎರಡು ಮಾರ್ಗದಲ್ಲಿ ಸಂಚರಿಸಿ, ಕೊನೆಗೆ ಶ್ರೀ ಬಸವೇಶ್ವರ ಮಹಾವಿದ್ಯಾಲಯದ ಮೈದಾನದಲ್ಲಿ ಸೇರಲಿದೆ. ಡಿವಾಯ್‌ಎಸ್ಪಿ ಗಜಾನನ ಸುತಾರ, ಲೋಕೋಪಯೋಗಿ ಇಲಾಖೆಯ ಮುಖ್ಯ ಅಭಿಯಂತರ, ನಗರಸಭೆ ಪೌರಾಯುಕ್ತ ವಾಸಣ್ಣ ಆರ್, ತಹಶೀಲ್ದಾರ ವಾಸುದೇವ ಸ್ವಾಮಿ ಸೇರಿದಂತೆ ಶಾಂತಿ ಸಮಿತಿಯ ಸದಸ್ಯರು ಉಪಸ್ಥಿತರಿದ್ದು ಸಲಹೆ

# ಇಂದು 'ಕಗ್ಗಲ್ಲ ಕ್ರಾಸ್' ಕಥಾ ಸಂಕಲನ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.3-ನಗರದ ಸಕ್ರಿಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಉಮೇಶ ತಿಮ್ಮಾಪುರ ಅವರ 'ಕಗ್ಗಲ್ಲ ಕ್ರಾಸ್' ಕಥಾ ಸಂಕಲನ ಬಿಡುಗಡೆ ಸಮಾರಂಭ ಅ.4 ಬೆಳಿಗ್ಗೆ 10.30ಕ್ಕೆ ಸರಳಾಬಾಯಿ ಭಾಗವತ ಸಭಾಭವನದಲ್ಲಿ ಜರುಗಲಿದೆ.

ಸಕ್ರಿ ಪದವಿ ಪೂರ್ವ ಕಾಲೇಜಿನ ಕನ್ನಡ ಸಂಘ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು, ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಕನ್ನಡ ಉಪನ್ಯಾಸಕರ ಒಕ್ಕೂಟದ ಸಹಯೋಗದಲ್ಲಿ ಶನಿವಾರ ನಡೆಯುವ ಕಾರ್ಯಕ್ರಮದಲ್ಲಿ ಹಿರಿಯ ಲೇಖಕ ಕುಂ.ವೀರಭದ್ರಪ್ಪ ಕೃತಿ ಬಿಡುಗಡೆಗೊಳಿಸುವರು.

ಕೃತಿ ಕುರಿತು ಸಾಹಿತಿ ಡಾ.ವೈ.ಎಂ.ಯಾಕೊಳ್ಳಿ ಮಾತನಾಡುವರು. ಸಂಸ್ಕೃತಿ ಚಿಂತಕ ಕಿರಣ ಬಾಳಗೋಳ ಆಶಯ ನುಡಿ ಹೇಳುವರು. ಲೇಖಕ ಪ್ರಕಾಶ ಖಾಡೆ ಸಂವಿಧಾನ ಪೀಠಿಕೆ ಓದುವರು. ವಿದ್ಯಾಪ್ರಸಾರಕ ಮಂಡಳದ ಗೌರವ ಕಾರ್ಯದರ್ಶಿ ಡಾ.ಗಿರೀಶ ಮಾಸೂರಕರ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಡಾ.ಶೇಖರ ಮಾನೆ, ರಾಜು ನಾಯ್ಕರ ಭಾಗವಹಿಸಲಿದ್ದು, ಕಥೆಗಾರ ಉಮೇಶ ತಿಮ್ಮಾಪುರ ಹಾಗೂ ಕವಿತಾ ಪ್ರಕಾಶನದ ಗಣೇಶ ಅಮೀನಗಡ ಉಪಸ್ಥಿತರಿರುವರು.

# ಕಂಪ್ಲಿ: ಬಾಡಿಗೆ ಕಟ್ಟಡ ಬೇಕಾಗಿದೆ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,ಅ.03:

ಸಮಾಜ ಕಲ್ಯಾಣ ಇಲಾಖೆಯ ಕಂಪ್ಲಿ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಕಂಪ್ಲಿ ಪಟ್ಟಣದ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ಮತ್ತು ರಾಮಸಾಗರ ಗ್ರಾಮದ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಗಳ ಕಟ್ಟಡವು ತುಂಬಾ ಹಳೆಯದಾಗಿದ್ದು, ಶಿಥಿಲಾವಸ್ಥೆಯಲ್ಲಿರುತ್ತವೆ. ವಿದ್ಯಾರ್ಥಿಗಳ ಆರೋಗ್ಯ ಮತ್ತು ಶೈಕ್ಷಣಿಕ ಹಿತದೃಷ್ಟಿಯಿಂದ 150 ಮಕ್ಕಳ ವಾಸಕ್ಕೆ ಅನುಕೂಲಕರವಾಗಿರುವ ಕಂಪ್ಲಿ ಮತ್ತು ರಾಮಸಾಗರ ವ್ಯಾಪ್ತಿಗೆ 02 ಬಾಡಿಗೆ ಕಟ್ಟಡ ಬೇಕಾಗಿದೆ.

ಆಸಕ್ತ ಕಟ್ಟಡ ಮಾಲೀಕರು ಅಕ್ಟೋಬರ್ 10 ರೊಳಗೆ ಕಟ್ಟಡದ ಅಗತ್ಯ ದಾಖಲೆಗಳನ್ನು ನಗರದ ಕೌಲ್ ಬಜಾರ್ ನ ಮೊದಲನೇ ರೈಲ್ವೇ ಗೇಟ್ ಹತ್ತಿರದ ಡಾ.ಬಿ.ಆರ್.ಅಂಬೇಡ್ಕರ್ ಭವನದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೊ.9845596262 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,ಅ.03: ತಾಲ್ಲೂಕಿನ ಕಾರೆಕಲ್ಲು ಗ್ರಾಮದ ಬಸವಣ್ಣ ಗುಡಿ ಹತ್ತಿರದ 01 ನೇ ವಾರ್ಡ್ ನ ನಿವಾಸಿ ವೀರೇಶ್.ಎ ಎನ್ನುವ 24 ವರ್ಷದ ವ್ಯಕ್ತಿ ಬಸಾಯಿ ಸ್ಟೀಲ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡುತ್ತಿದ್ದು, ಸೆ.21 ರಂದು ಕಾಣೆಯಾಗಿರುವ ಕುರಿತು ಪಿ.ಡಿ.ಹಳ್ಳಿ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕೆಂದು ಎಂದು ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಕಾಣೆಯಾದ ವ್ಯಕ್ತಿಯ ಚಹರೆ: ಎತ್ತರ 5.5 ಅಡಿ, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿರುತ್ತಾನೆ. ಕಾಣೆ-ಯಾದ ಸಂದರ್ಭದಲ್ಲಿ ನೀಲಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಕ್ರೀಂ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಪಿ.ಡಿ ಹಳ್ಳಿ ಪೋಲಿಸ್ ಠಾಣೆ-ಯ ದೂ.08392-295010, ಪಿಎಸ್‌ಐ ಮೊ.9480803052, ಪಿಐ ಮೊ.9480803047, ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100, ಎಸ್‌ಪಿ ಕಚೇರಿ ದೂ.08392-258400, ಸಿರುಗುಪ್ಪ ಡಿಎಸ್‌ಪಿ ಕಚೇರಿ ದೂ.08392-27600 ಅಥವಾ ಪಿ.ಡಿ ಹಳ್ಳಿ ವೃತ್ತದ ಸಿಪಿಐ ದೂ.08392-276461 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಕಿ ಪ್ರವೇಶ ಶುಲ್ಕ ಮರು ಪಾವತಿಸುವಂತೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಆದೇಶ

ಬಳ್ಳಾರಿ,ಅ.03:ಬಾಕಿ ಪ್ರವೇಶ ಶುಲ್ಕ ಮರು ಪಾವತಿಸುವಂತೆ ಬೆಂಗಳೂರಿನ ಪರಿಶ್ರಮ ಪಿಯು ಕಾಲೇಜು ಹಾಗೂ ಎಜ್ಯುಕೇಷನ್ ಚಾರಿಟಬಲ್ ಟ್ರಸ್ಟ್‌ನ ವ್ಯವಸ್ಥಾಪಕ ನಿರ್ದೇಶಕರು ಮತ್ತು ಕಾರ್ಯದರ್ಶಿ ಬಸವರಾಜು ಗೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಆದೇಶಿಸಿದೆ.

ದೂರುದಾರ ಡಾ.ರಾಜೇಶ್ ಬಿ.ಆರ್. ಕೊಟ್ಟೂರ್ ಅವರು ತಮ್ಮ ಮಗಳನ್ನು 2024-25ನೇ ಸಾಲಿಗೆ ಪರಿಶ್ರಮ ಪಿಯು ಕಾಲೇಜಿನಲ್ಲಿ ಪ್ರಥಮ ಪಿಯುಸಿ ಪ್ರವೇಶಾತಿಗೆ ಮೂಲ ದಾಖಲೆಗಳ ಸಹಿತ ರೂ.1,50,000 ಪಾವತಿಸಿದ್ದರು. ಕಾಲೇಜಿನ ವಾತಾವರಣದಿಂದಾಗಿ ಹಾಗೂ ಮಾನಸಿಕವಾಗಿ ಹೊಂದಾಣಿಕೆಯಾಗದ ಕಾರಣ ಪ್ರವೇಶ ರದ್ದುಪಡಿಸಿ ಕಾಲೇಜನ್ನು ತೊರೆದು ಪ್ರವೇಶ ಶುಲ್ಕ ಪಾವತಿಸುವಂತೆ ಕೋರಿದ್ದರು.

ಕಾಲೇಜು ಮಂಡಳಿ ವಿದ್ಯಾರ್ಥಿಯ ಮೂಲ ದಾಖಲೆ ಮತ್ತು ಆನ್‌ಲೈನ್ ಮೂಲಕ ರೂ.50,000 ಮರು ಪಾವತಿಸಿತ್ತು. ಬಾಕಿ ಮೊತ್ತ ರೂ.1,00,000 ಗಳನ್ನು ಕೆಲದಿನಗಳಲ್ಲಿ ಹಿಂದಿರುಗಿಸುವುದಾಗಿ ಭರವಸೆ ನೀಡಿದ್ದು, ಹಿಂದಿರುಗಿಸದೇ ಸೇವಾನ್ಯೂನ್ಯತೆ ಎಸಗಿದ್ದರು. ದೂರುದಾರರು ರೂ.1,00,000 ಗೆ ಶೇ.18ರ ಬಡ್ಡಿ ರೂ.25,000 ಹಾಗೂ ಬಾಕಿ ಮೊತ್ತ ಪರಿಹಾರ ಒದಗಿಸಿಕೊಡಬೇಕು ಎಂದು ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಆಯೋಗದಿಂದ ಎದುರುದಾರರಿಗೆ ನೋಟಿಸ್ ಜಾರಿಯಾದರೂ ಸಹ ಪ್ರಕರಣದಲ್ಲಿ ಎದುರುದಾರರು ಹಾಜರಾಗದ ಕಾರಣ ಪ್ರಕರಣವನ್ನು ಏಕಪಕ್ಷೀಯವಾಗಿ ಪರಿಗಣಿಸಿದೆ.

ಈ ವೇಳೆ ಆಯೋಗದ ಅಧ್ಯಕ್ಷರಾದ ಎನ್.ತಿಪ್ಪೇಸ್ವಾಮಿ ಹಾಗೂ ಸದಸ್ಯರಾದ ಮಾರ್ಲಾ ಶಶಿಕಲಾ ಅವರು ದಾಖಲಾತಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಎದುರುದಾರರು ಪ್ರಕರಣದಲ್ಲಿ ಭಾಗಶ: ಪ್ರವೇಶಾತಿ ಮೊತ್ತವನ್ನು ಪಾವತಿಸಿರುವ ಬಗ್ಗೆ ದಾಖಲಾತಿ ಪರಿಶೀಲಿಸಿದ್ದು, ಉಳಿದ ಬಾಕಿ ಮೊತ್ತ ರೂ.1,00,000 ಗಳನ್ನು ಪಾವತಿಸದೇ ಇರುವುದು ಮೇಲ್ನೋಟಕ್ಕೆ ಸೇವಾ ನಿರ್ಲಕ್ಷ ??ತನ ಎಸಗಿರುವುದು ಕಂಡು ಬಂದಿದೆ ಎಂದು ಆಯೋಗ ಅಭಿಪ್ರಾಯಪಟ್ಟಿತ್ತು.

ಈ ಆದೇಶದ ದಿನಾಂಕದಿಂದ 45 ದಿನಗಳೊಳಗೆ ರೂ.1,00,000 ಮತ್ತು ಸೇವಾ ನ್ಯೂನ್ಯತೆಗೆ ರೂ.10,000 ಪರಿಹಾರ ಹಾಗೂ ದೂರಿನ ವೆಚ್ಚ ರೂ.5,000 ಗಳನ್ನು ಪಾವತಿಸುವಂತೆ ಆದೇಶಿಸಿದೆ. ತಪ್ಪಿದಲ್ಲಿ ರೂ.1,00,000 ಗಳಿಗೆ ಶೇ.6 ರಷ್ಟು ಬಡ್ಡಿ ಪಾವತಿಸಲು ಎದುರುದಾರರು ಭಾದ್ಯಸ್ಥರಿರುತ್ತಾರೆ

# ಸಮಸಮಾಜಕ್ಕಾಗಿ ಹೋರಾಡಿದ ಶರಣ ಹರಳಯ್ಯ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.3:12ನೇ ಶತಮಾನದಲ್ಲಿ ಸಮಸಮಾಜ ನರ್ಮಾಣಕ್ಕಾಗಿ ಹೋರಾಡಿದವರಲ್ಲಿ ಶರಣ ಹರಳಯ್ಯ ಕೂಡ ಪ್ರಮುಖರಾಗಿದ್ದರು ಎಂದು ಸಹ ಶಿಕ್ಷಕಿ ಭಾರತಿ ಪ್ರಭುದೇವ ಹೇಳಿದರು.ಪಟ್ಟಣದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ತಾಲೂಕು ವಚನ ಸಾಹಿತ್ಯ ಪರಿಷತ್ತು ಸಹಯೋಗದಲ್ಲಿ ಆಯೋಜಿಸಿದ್ದ ಲಿಂಗೈಕ್ಯ ಸುಶೀಲಕುಮಾರ ನಾಗಯ್ಯ ಸ್ವಾಮಿ ಅವರ ದತ್ತಿ ಉಪನ್ಯಾಸ ಕರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.ಸಮಾನತೆಯ ಸಮಾಜದ ನಾಂದಿಗಾಗಿ ಶರಣ ಹರಳ್ಳಯನವರು ತಮ್ಮ ಬದುಕು ತ್ಯಾಗ ಮಾಡಿದ್ದರು. ಬಸವಣ್ಣನವರು ಶರಣರ್ಥಿ ಬದಲಿಗೆ ಶರಣು ಶರಣರ್ಥಿಗಳು ಎಂದಿದ್ದಕ್ಕಾಗಿ ಶರಣ ಹರಳಯ್ಯನವರು ನೊಂದು ತಮ್ಮ ತೊಡೆಯ ರ್ಮದ ಚಮ್ಮಾವುಗೆ ಮಾಡಿ ಋಣ ತೀರಿಸಲು ನರ್ಧರಿಸಿದ ಧೀರ ಶರಣ ಎಂದು ತಿಳಿಸಿದರು.ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಮಾತನಾಡಿ, ಬಸವಾದಿ ಶರಣರು ಮರಣವನ್ನು ಸಂಭ್ರಮಿಸಿ, ಅದನ್ನು ಹಬ್ಬವಾಗಿ ಆಚರಿಸಿದರು. ತಮ್ಮ ತತ್ವ ಸಿದ್ಧಾಂತಕ್ಕಾಗಿ ಎಂದಿಗೂ ರಾಜಿ ಮಾಡಿಕೊಂಡಿರಲಿಲ್ಲ ಎಂದು ತಿಳಿಸಿದರು. ಗಣಪತಿ ಪಂಚಾಳ ದೀಪ ಬೆಳಗಿಸಿ ಕರ್ಯಕ್ರಮ ಉದ್ಘಾಟಿಸಿದರು.ತಾಲೂಕು ವಚನ ಸಾಹಿತ್ಯ ಪರಿಷತ್ತು ಅಧ್ಯಕ್ಷ ಗುಂಡಪ್ಪ ಸಂಗಮಕರ್ ಪ್ರಾಸ್ತಾವಿಕವಾಗಿ ಮಾತನಾಡಿದರು.ಅನಿತಾ ಉಮೇಶ ಬೋರಾಳೆ ಬಸವ ಗುರುವಿನ ಪೂಜೆ ನೆರವೇರಿಸಿದರು.ನಾಗಶೆಟೆಪ್ಪ ಲಂಜವಾಡೆ ಷಟಸ್ಥಲ ಧ್ವಜಾರೋಹಣ ನೆರವೇರಿಸಿದರು. ಈ ಸಂರ್ಭದಲ್ಲಿ ನೀಲಕಂಠ ಚಾಪೆ, ಡಿ.ಡಿ.ಸಿಂಧೆ, ಶಿವರಾಜ ಮಲ್ಲೇಶಿ, ಜಯರಾಜ ಬಿರಾದಾರ್, ಅಶೋಕ ಭಂಡಾರಿ, ವಾಯ್.ಆರ್.ಇಂಗಳೆ ಸೇರಿದಂತೆ ಹಲವರು ಇದ್ದರು ಮಲ್ಲಿಕಾರ್ಜುನ್ ಡೋಣಗಾಪುರೆ ವಚನ ಪ್ರಾರ್ಥನೆ ಗೀತೆ ನುಡಿದರು. ಸಂತೋಷ ಹಡಪದ ಸ್ವಾಗತಿಸಿದರು. ರಮೇಶ ಬಾಬು ನಿರೂಪಿಸಿದರು.

# ಅನಾಮಧೇಯ ಮೃತ ವ್ಯಕ್ತಿ; ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,ಅ.03:

ನಗರದ ಸಿದ್ದಾರ್ಥ ಕಾಲೋನಿಯ ಹೆಚ್.ಎಲ್.ಸಿ 14 ನೇ ಡಿ.ಪಿ ಕಾಲುವೆಯಲ್ಲಿ ಅಂದಾಜು 35-40 ವರ್ಷದ ಅನಾಮಧೇಯ ವ್ಯಕ್ತಿಯು ಸೆ.30 ರಂದು ಮೃತಪಟ್ಟಿದ್ದು, ಈ ಕುರಿತು ಗಾಂಧಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಮೃತನ ಚಹರೆ: ಎತ್ತರ ಅಂದಾಜು 5.5 ಅಡಿ, ದುಂಡು ಮುಖ, ಗೋಧಿ ಮೈಬಣ್ಣ, ದೃಢವಾದ ಮೈಕಟ್ಟು, ತಲೆಯಲ್ಲಿ ಕಪ್ಪು ಬಣ್ಣದ ಕೂದಲು ಇರುತ್ತದೆ. ಮೃತನ ಮೈಮೇಲೆ ನಸೀ ಬಣ್ಣದ ಶರ್ಟ್ ಮತ್ತು ಪ್ಯಾಂಟ್, ನೀಲಿ ಬಣ್ಣದ ಕಟ್ ಬನಿಯನ್, ನಸೀ ಬಣ್ಣದ ಅಂಡರ್‌ವೇರ್ ಧರಿಸಿರುತ್ತಾನೆ. ಮೇಲ್ಕಂಡ ಚಹರೆ ಗುರುತುಗಳುಳ್ಳ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಗಾಂಧಿನಗರ ಪೊಲೀಸ್ ಠಾಣೆಯ ದೂ.08392-272192, ಪಿ.ಐ ಮೊ.9480803046 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ:08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಲ್ಲಣ್ಣ ದೇವರ ದರುಶನ ಪಡೆದ ಸಚಿವ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ: ಅ.3:ತಾಲೂಕಿನ ಖಾನಾಪುರ(ಮೈಲಾರ) ಗ್ರಾಮದಲ್ಲಿ ವಿಜಯದಶಮಿ(ದಸರಾ) ನಿಮಿತ್ತ ಮಲ್ಲಣ್ಣ ದೇವರ ಪಲ್ಲಕ್ಕಿ ಮೆರವಣಿಗೆ ವೈಭವದಿಂದ ನೆರವೇರಿತು. ಮಲ್ಲಣ್ಣ ದೇಗುಲದಲ್ಲಿ ಗುರುವಾರ ರಾತ್ರಿ 11 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಮಲ್ಲಣ್ಣ ದೇವರಿಗೆ ಆರತಿ ಬೆಳಗುವುದರ ಜತೆಗೆ ವಿಶೇಷ ಪೂಜೆ ಸಲ್ಲಿಸಿ ಪಲ್ಲಕ್ಕಿ ಮೆರವಣಿಗೆ ಮತ್ತು ರಥೋತ್ಸವಕ್ಕೆ ಚಾಲನೆ ನೀಡಿದರು.ಘೃತಮಾರಿ ತುಪ್ಪದ ಮಾಳವ್ವ (ಗುರುತ ಮಲ್ಲಮ್ಮ ) ದೇವಸ್ಥಾನ, ಮುಖ್ಯಬೀದಿ, ಬೀದರ-ಭಾಲ್ಕಿ ಮುಖ್ಯ ರಸ್ತೆ ಮೂಲಕ ಹಾದು ಹನುಮಾನ ದೇವಸ್ಥಾನಕ್ಕೆ ಪಲ್ಲಕ್ಕಿ ಮೆರವಣಿಗೆ ತಲುಪಿತು. ಮೆರವಣಿಗೆಯುದ್ದಕ್ಕೂ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ದೇವಸ್ಥಾನದವಗ್ಗೆ, ವಾರುಗಳು, ಭಕ್ತರು ಕುಣಿದು ಸಂಭ್ರಮಿಸಿದರು.ಶುಕ್ರವಾರ ಬೆಳಿಗ್ಗೆ 6 ಗಂಟೆಗೆ ಮಹಾ ಮಂಗಳಾರತಿಯೊಂದಿಗೆ ಉತ್ಸವ ಸಮಾರೋಪಗೊಂಡಿತು.

ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಬಂಡೆಪ್ಪ ಖಾಶೆಂಪೂರ, ರಾಜಶೇಖರ ಪಾಟೀಲ್, ಮೀನುಗಾರಿಕೆ ನಿಗಮ ಮಂಡಳಿಯ ಅಧ್ಯಕ್ಷೆ ಮಾಲಾ ಬಿ. ನಾರಾಯಣರಾವ, ವಿಧಾನ ಪರಿಷತ್ ಮಾಜಿ ಸದಸ್ಯ ಅರವಿಂದಕುಮಾರ ಅರಳಿ, ಬಿಡಿಎ ಮಾಜಿ ಅಧ್ಯಕ್ಷ ಪಂಡಿತ ಚಿದ್ರಿ, ಹಾಲು ಒಕ್ಕೂಟದ ನಿರ್ದೇಶಕ ಮಲ್ಲಿಕಾರ್ಜುನ ಬಿರಾದಾರ, ದೇವಸ್ಥಾನದ ಆಡಳಿತಾಧಿಕಾರಿ, ಬಸವಕಲ್ಯಾಣ ಸಹಾಯಕ ಆಯುಕ್ತ ಮುಕುಲ್ ಜೈನ್, ಕಾರ್ಯನಿರ್ವಾಹಣಾಧಿಕಾರಿ ಅನಂತರಾವ ಕುಲಕರ್ಣಿ, ವ್ಯವಸ್ಥಾಪಕ ಸಂಜೀವಕುಮಾರ ಸುಂಧಾಳ, ಮಾರುತಿ ಪಾಟೀಲ್, ರಾಜಕುಮಾರ ಪಾಟೀಲ್, ಪ್ರಧಾನ ಅರ್ಚಕ ಬಸಪ್ಪ ಹಿರಿವಗ್ಗೆ, ಮಲ್ಲಿಕಾರ್ಜುನ ಹಿರಿವಗ್ಗೆ, ಪ್ರಕಾಶ ಹಿರಿವಗ್ಗೆ, ಆಕಾಶ ಹಿರಿವಗ್ಗೆ, ಪಂಡಿತ, ಬೀರಪ್ಪ ಪೂಜಾರಿ ಸೇರಿದಂತೆ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು.

# ಗಾಂಧಿಜೀ ಮತ್ತು ಶಾಸ್ತ್ರಿಜೀ ರವರ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಅ.3: ಪಟ್ಟಣದ ಪುರಸಭೆಯಲ್ಲಿ ಮಹಾತ್ಮ ಗಾಂಧಿ ಮತ್ತು ಲಾಲ್ ಬಹದ್ದೂರ ಶಾಸ್ತ್ರಿ ರವರ ಜಯಂತಿಯ ಅಂಗವಾಗಿ ಪುರಸಭೆ ಕಾರ್ಯಾಲಯದಲ್ಲಿ ಅಧ್ಯಕ್ಷ ದಿಲೀಪಕುಮಾರ ಬಗ್ದಲಕರ್, ಉಪಾಧ್ಯಕ್ಷ ನಸೀರಖಾನ ಮತ್ತು ಮುಖ್ಯಾಧಿಕಾರಿ ಹುಸಾಮುದ್ದಿನ್ ಬಾಬಾ ರವರು ಮಹಾತ್ಮ ಗಾಂಧಿ ಮತ್ತು ಲಾಲ್ ಬಹದ್ದೂರ ಶಾಸ್ತ್ರಿರವರ ಭಾವಚಿತ್ರಕ್ಕೆ ಹೂ ಮಾಲಾರ್ಪಣೆ ಮಾಡುವುದರ ಮೂಲಕ ಪೂಜೆಯನ್ನು ನೆರೇವರಿಸಿದ್ದರು. ನಂತರ ಪಟ್ಟಣದ ಮಹಾತ್ಮ ಗಾಂಧಿ ವೃತ್ತಕ್ಕೆ ಹೂ ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಿದರು. ಗಾಂಧಿ ಜಯಂತಿ ಪ್ರಯುಕ್ತ ಪಟ್ಟಣದ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮವನ್ನು



ಪುರಸಭೆ ಅಧ್ಯಕ್ಷ ದಿಲೀಪಕುಮಾರ ಬಗ್ದಲಕರ್ ನೇತೃತ್ವದಲ್ಲಿ ಹಮ್ಮಿಕೊಂಡು ಸರ್ಕಾರಿ ಆಸ್ಪತ್ರೆಯ ಆವರಣದ ಸುತ್ತ ಮುತ್ತ ಸ್ವಚ್ಛತೆಗೊಳಿಸಲಾಯಿತ್ತು. ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ಮಾಲಾಶ್ರೀ ಎಸ್. ಭೂತಾಳೆ, ಜಲೀಸಾ ಬೇಗಂ, ಪಾರ್ವತಿ ರಮೇಶ, ಮಹ್ಮದ ಹಬೀಬ್ ಅಹ್ಮದ, ರೇವಣಸಿದ್ದಪ್ಪಾ ಭೂತಾಳೆ, ಮಹ್ಮದ ನಸೀರ ಹಕ್ಕೀಂ, ಮಹ್ಮದ ನಿಸಾರೋದ್ದಿನ್, ರಹೇಮಾನ ಪಾಶ ಪಟ್ಟಣದ ಪ್ರಮುಖರಾದ ಅಶೋಕ ಸ್ವಾಮಿ, ಶಾಮರಾವ ಭುತ್ತಾಳೆ, ನಾಗೇಂದ್ರ ಬಾಗಿ, ಮುಜಾಮಿಲ್ ಸಿಬ್ಬಂದಿಗಳಾದ ವಿಜಯದೀಪ, ರವಿಕುಮಾರ ಸ್ವಾಮಿ, ಆನಂದ, ಸಚಿನ, ರಾಜೇಶ ತೇಲಂಗ್, ರವಿ ಭಯ್ಯಾ, ಭೀಮಶಾ, ಬಕ್ಕಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸೊಳ್ಳೆ ನಿಯಂತ್ರಣಕ್ಕೆ ಪ್ರತಿಯೊಬ್ಬರೂ ಕೈ ಜೋಡಿಸಿ

ಮಲ್ಲಮ್ಮ ನುಡಿ ವಾರ್ತೆ



ಬಳ್ಳಾರಿ,ಅ.03:ಸಾರ್ವಜನಿಕರು ತಮ್ಮ ಮನೆಯ ಸುತ್ತಮುತ್ತ ನೀರು ನಿಲ್ಲುವುದನ್ನು ತಪ್ಪಿಸಿ, ಡೆ-ಂಗ್ಯು ಹರಡುವ ಈಡಿಸ್ ಇಜಿಪ್ಟೈ ಸೊಳ್ಳೆಯ ಸಂತತಿಯನ್ನು ನಾಶ ಮಾಡುವ ಮೂಲಕ ಸೊಳ್ಳೆ ನಿಯಂತ್ರಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ತಿಳಿಸಿದ್ದಾರೆ. ನಿಂತ ನೀರಿನಿಂದ ಸೊಳ್ಳೆ ಉತ್ಪತ್ತಿಯಾಗುವ ಜೊತೆಗೆ ಮಕ್ಕಳಿಗೆ ಡೆಂಗ್ಯೂ ಸೇರಿದಂತೆ ಸೊಳ್ಳೆಯ ಕಚ್ಚುವಿಕೆಯಿಂದ ಹರಡುವ ಚಿಕುನ್‌ಗುನ್ಯಾ, ಮಲೇರಿಯಾ, ಆನೇಕಾಲು ರೋಗ, ಮೆದುಳು ಜ್ವರ ಮುಂತಾದವುಗಳು ಕಂಡುಬರುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ. ಡೆಂಗ್ಯು ಸಂಬಂಧಿತ ಜ್ವರವಾಗಿದ್ದರೆ ರೋಗಿಯ ಪ್ಲೇಟ್‌ಲೆಟ್ಸ್‌ಗಳ ಶೀಘ್ರ ಕುಸಿಯುವಿಕೆಯಿಂದ ಆರೋಗ್ಯ ಸಮಸ್ಯೆ ಎದುರಾಗಿ ರಕ್ತಸ್ರಾವದಂತಹ ಗಂಭಿರ ಸಮಸ್ಯೆ ಉಂಟಾಗಬಹುದು. ಯಾರಿಗಾದರೂ ಮೂರು ದಿನಗಳಿಗಿಂತ ಕಡಿಮೆಯಾಗದ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು ಕಾಣಿಸಿಕೊಂಡಲ್ಲಿ ನಿರ್ಲಕ್ಷಿಸದೇ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಗತ್ಯ ಪರೀಕ್ಷೆ ಮಾಡಿಸಿ ವೈದ್ಯರ ಸಲಹೆಯಂತೆ ಲಕ್ಷಣಗಳ ಆಧಾರದ ಮೇರೆಗೆ ಚಿಕಿತ್ಸೆ ಪಡೆಯಬೇಕು ಎಂದಿದ್ದಾರೆ.

***ಮುಂಜಾಗ್ರತೆ ಕ್ರಮ:***

ಡ್ರಮ್, ಬ್ಯಾರಲ್, ನೀರಿನ ತೊಟ್ಟಿ, ಕಲ್ಲಿನ ಡೋಣಿ, ಹೂವಿನ ಕುಂಡಲ ಮುಂತಾದ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಿ ಹಾಗೂ ಮುಚ್ಚಳ ಮುಚ್ಚಿ ಬಟ್ಟೆ ಕಟ್ಟಿ ಬಳಕೆ ಮಾಡದ ನೀರು ಸಂಗ್ರಹಕಗಳಿಗೆ ಕೊಬ್ಬರಿ ಎಣ್ಣೆಯನ್ನು ಹಾಕುವ ಮೂಲಕ ಸೊಳ್ಳೆ ಉತ್ಪತ್ತಿ ತಡೆಯಬಹುದು.

ಹಳೆಯ ಡಬ್ಬಿ, ಟ್ಯೂಬ್, ಒಡೆದ ಬಕೆಟ್, ಕುಡಿಯುವ ಪಾನೀಯದ ಬಾಟಲ್, ಕಸ, ಪುಡಿಯನ್ನು ಸರಿಯಾಗಿ ವಿಲೇವಾರಿ ಮಾಡಿ ಹೂದಾನಿ ಅಥವಾ ಕಪ್‌ಗಳಲ್ಲಿ ನೀರನ್ನು ದಿನವೂ ಬದಲಾಯಿಸಬೇಕು.

ಟ್ಯಾಂಕ್, ಬಕೆಟ್‌ಗಳು ಮುಚ್ಚಿ, ಕೂಲರ್, ಫ್ರಿಜ್ ಹಿಂಬದಿ ಭಾಗದ ಟ್ರೇಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಪೂರ್ಣಬಾಹು ಬಟ್ಟೆಗಳನ್ನು ಧರಿಸಿ ಕಿಟಕಿ-ಬಾಗಿಲುಗಳಿಗೆ ಕಿಡೆ ಜಾಲಿ ಅಳವಡಿಸಿ ಡೆಂಗ್ಯೂ ಜ್ವರ ಹರಡದಂತೆ ಎಚ್ಚರವಹಿಸಬೇಕು ಎಂದು ಡಿಹೆಚ್‌ಓ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಾಂಧಿ – ಶಾಸ್ತ್ರಿ ರಾಷ್ಟ್ರಕ್ಕೆ ಪ್ರೇರಣಾದಾಯಕ : ಮಲ್ಲಿಕಾರ್ಜುನ ಕೋಟೆ



ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಾ) :ಅ.3: ಪಟ್ಟಣದ ನಾಲಂದಾ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ನಾಲಂದಾ ಪ್ರೌಢ ಶಾಲೆಯಲ್ಲಿ ಇಂದು ರಾಷ್ಟ್ರಪಿತ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ಜಯಂತಿಯು ಜರುಗಿತು.

ಕಾಲೇಜಿನ ಪ್ರಭಾರಿ ಪ್ರಾಂಶುಪಾಲ ನರಸಿಂಗರಾವ ಬೆಲ್ದಾರ, ಪ್ರೌಢ ಶಾಲೆಯ ಮುಖ್ಯಗುರುಗಳಾದ ಜಗನ್ನಾಥ.ಎಸ್.ಬಿರಾದಾರ ಒಡಗೂಡಿ ಸ್ವಾತಂತ್ರ್ಯ ಸೇನಾನಿ ಮಹಾನ್ ಚೇತನರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ, ನಮಿಸಿದರು.ಗಾಂಧಿಜೀ ಮತ್ತು ಶಾಸ್ತ್ರಿಜೀ ರಾಷ್ಟ್ರಕ್ಕೆ ಪ್ರೇರಣಾದಾಯಕ ಶಕ್ತಿಯಾಗಿದ್ದಾರೆ. ಯುವ ಶಕ್ತಿಗಳಿಗೆ ಆದರ್ಶಪ್ರಾಯವಾದ ಚೇತನ ಹಾಗೂ ಮಹಾನ್ ಅಹಿಂಸಾವಾದಿಯಾದ ಗಾಂಧಿಜೀಯವರು 'ರಕ್ತವಿಲ್ಲದೆ ದೇಹವು ಹೇಗೆ ಬದುಕಲು ಸಾಧ್ಯವಿಲ್ಲವೋ, ಹಾಗೆಯೇ ಶ್ರದ್ಧೆ ಮತ್ತು ಪ್ರಾರ್ಥನೆಗಳಿಲ್ಲದೆ ಆತ್ಮವೂ ಕೂಡ ಬದುಕಲು ಸಾಧ್ಯವಿಲ್ಲವೆಂದು ಭಾರತದ ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಹೇಳಿದ್ದನ್ನ ಸಹಶಿಕ್ಷಕ ಮಲ್ಲಿಕಾರ್ಜುನ.ವ್ಹಿ.ಕೋಟೆ ಸ್ಮರಿಸಿದರು

ಹೀಗೆ ಮಾತನಾಡುತ್ತಾ ಲಾಲ್ ಬಹದ್ದೂರ್ ಶಾಸ್ತ್ರಿಯವರು ಸಹ ಭಾರತ ದೇಶದ ದ್ವಿತೀಯ ಪ್ರಧಾನ ಮಂತ್ರಿಯಾಗಿದ್ದರು. ಸರಳ, ದೃಢವಾದ ನಾಯಕತ್ವಕ್ಕಾಗಿ ಅವರು ಪ್ರಸಿದ್ಧರಾಗಿದ್ದಾರೆ. 1965 ರ ಭಾರತ – ಪಾಕಿಸ್ತಾನ ಯುದ್ಧದ ಸಮಯದಲ್ಲಿ ನೀಡಿದ 'ಜೈ ಜವಾನ್, ಜೈ ಕಿಸಾನ್' (ಸೈನಿಕನಿಗೆ ನಮಸ್ಕಾರ, ರೈತರಿಗೆ ನಮಸ್ಕಾರ) ಘೋಷಣೆಯಿಂದ ಇವರಿರ್ವರ ನಾಯಕತ್ವ ಮತ್ತು ದೇಶಕ್ಕಾಗಿ ಅವರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಈ ಘೋಷಣೆಯನ್ನು ಅವರು ಇದು ಸೈನಿಕರ ಧೈರ್ಯ ಹಾಗೂ ರೈತರ ಶ್ರಮವನ್ನು ಗೌರವಿಸುವ ಮೂಲಕ ದೇಶದ ಒಗ್ಗಟ್ಟನ್ನು ಹಾಗೂ ರಾಷ್ಟ್ರೀಯ ಪ್ರಗತಿಯನ್ನು ಸಾರಿ – ಸಾರಿ ಹೇಳುತ್ತದೆಂದು ಶಾಸ್ತ್ರಿಯವರ ನಾಯಕತ್ವದ ಕುರಿತು ತಿಳಿಸಿದರು.

ಉಪನ್ಯಾಸಕರಾದ ಪ್ರಕಾಶ ಬಸವಲಿಂಗ, ದಿಲೀಪಕುಮಾರ ತಾರೆ ಹಾಗೂ ಪ್ರೌಢ ಶಾಲೆಯ ಸಹಶಿಕ್ಷಕರಾದ ದಿಲೀಪಕುಮಾರ.ಎನ್.ಮೇತ್ರೆ, ಪರಮೇಶ್ವರ.ಬಿ.ಬಿರಾದಾರ, ದೈಹಿಕ ಶಿಕ್ಷಕ ಸುನೀಲಕುಮಾರ.ಬಿ.ವಾಗಮೋಡೆ ಸೇರಿದಂತೆ ಬೋಧಕೇತರ ಸಿಬ್ಬಂಧಿ ವರ್ಗದವರಾದ ಎಮ್.ಡಿ.ಜಾಫರ್, ಶಶಿಕಾಂತ್ ಉಪಸ್ಥಿತರಿದ್ದು, ಮಕ್ಕಳು ಹಾಜರಿದ್ದರು.

# ಅ.06 ರಂದು ಮುಖ್ಯಮಂತ್ರಿಯವರ ಕಾರ್ಯಕ್ರಮ; ದೈನಂದಿನ ಬಸ್ ಕಾರ್ಯಾಚರಣೆಯಲ್ಲಿ ವ್ಯತ್ಯಯ

ಬಳ್ಳಾರಿ,ಅ.03:ಇದೇ ಅ.06 ರಂದು ಕೊಪ್ಪಳದಲ್ಲಿ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಉಪಸ್ಥಿತಿಯಲ್ಲಿ ಫಲಾನುಭವಿಗಳಿಗೆ ಸೌಲಭ್ಯ ವಿತರಣಾ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮಕ್ಕೆ ಗಂಗಾವತಿ, ಕೊಪ್ಪಳ ಮತ್ತು ಕಾರಟಗಿ ತಾಲ್ಲೂಕುಗಳಿಂದ ಫಲಾನುಭವಿಗಳನ್ನು ಕರೆತರಲು ಬಳ್ಳಾರಿ ವಿಭಾಗದಿಂದ ಒಟ್ಟು 25 ಬಸ್ಸುಗಳನ್ನು ಕೊಪ್ಪಳ ಜಿಲ್ಲೆಗೆ ಸಾಂದರ್ಭಿಕ ಒಪ್ಪಂದದ ಮೇಲೆ ಒದಗಿಸಲಾಗುತ್ತಿದ್ದು, ಅ.05 ರಂದು ಸಂಜೆ ಮತ್ತು ಅ.06 ರಂದು ಬಳ್ಳಾರಿ, ಸಿರುಗುಪ್ಪ, ತೆಕ್ಕಲಕೋಟೆ, ಕುರುಗೋಡು, ಕುಡತಿನಿ, ಕಂಪ್ಲಿ, ಸಂಡೂರು ಭಾಗದಿಂದ ವಿವಿಧ ಸ್ಥಳಗಳಿಗೆ ತೆರಳುವ ದೈನಂದಿನ ಬಸ್ ಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯವಾಗಲಿದೆ. ಹಾಗಾಗಿ ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕ ಪ್ರಯಾಣಿಕರು ಸಹಕರಿಸಬೇಕು ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಳ್ಳಾರಿ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಸನ ಮುಕ್ತ ಸಮಾಜ ನಿರ್ಮಾಣವೇ ಧರ್ಮಸ್ಥಳ ಧರ್ಮಾಧಿಕಾರಿಗಳ ಗುರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.3: ನಾಡಿನಾದ್ಯಂತ ವ್ಯಸನಮುಕ್ತಸಮಾಜನಿರ್ಮಿಸುವುದೇ ಧರ್ಮಸ್ಥಳ ಧರ್ಮಾಧಿಕಾರಿಗಳ ಮುಖ್ಯ ಗುರಿಯಾಗಿದೆ ಎಂದು ಶ್ರೀಕ್ಷೇತ್ರಧರ್ಮಸ್ಥಳಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಜಿಲ್ಲಾ ಯೋಜನಾಧಿಕಾರಿ ಮುರಳಿಧರ ಎಚ್.ಎಲ್ ಹೇಳಿದರು.

ಪಟ್ಟಣದ ಕುಂಬಾರ ಗುಂಡಯ್ಯಾ ಕಲ್ಯಾಣಮಂಟಪದಲ್ಲಿಡಾ।ಡಿ.ವೀರೇಂದ್ರ ಹೆಗಡೆ ಹಾಗು ಡಾ। ಹೇಮಾವತಿ ಹೆಗಡೆಯವರ ಸಂಕಲ್ಪದಂತೆ ಶ್ರೀ–ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಟಿ.ಟ್ರಸ್ಟ್ ತಾಲೂಕು ಘಟಕದ ವತಿಯಿಂದ ಶುಕ್ರವಾರ ಆಯೋಜಿಸಿದ್ದ 1995 ಮಧ್ಯವರ್ಜನ ಶಿಬಿರದ ಉದ್ಘಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿಗಳು ಸ್ವಸಹಾಯ ಸಂಘದ ವತಿಯಿಂದ ಅದ್ಭುತ ಕಾರ್ಯಮಾಡುತ್ತ ನಾಡಿನ ಸ್ವಾಸ್ಥ ಸಮಾಜ ನಿರ್ಮಾಣಕ್ಕೆ ನಾಂದಿ ಹಾಡಿದ್ದಾರೆ. ಸಮಾಜದಲ್ಲಿ ವ್ಯಸನಿಗಳು ಮಾಯವಾಗಿ, ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಶ್ರೀಗಳು ಉತ್ತಮ ಕಾರ್ಯ ರೂಪಿಸಿದ್ದಾರೆ. ಶ್ರೀಗಳ ಮಾರ್ಗದರ್ಶನದಲ್ಲಿ ಮಧ್ಯವರ್ಜನ ಶಿಬಿರ ಆಯೋಜಿಸಿ ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಬೇಕು ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಡಿವಾಯ್‌ಎಸ್‌ಪಿ ಶಿವಾನಂದ ಪವಾಡಶೆಟ್ಟಿ, ವ್ಯಸನ ಮುಕ್ತಿಯಿಂದ ಶಾಂತಿ, ನೆಮ್ಮದಿ ಕಾಪಾಡಿಕೊಂಡು ಹೋಗಬಹುದು. ಈ ನಿಟ್ಟಿನಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಉತ್ತಮ ಕಾರ್ಯನಿರ್ವಹಿಸುತ್ತಲಿದೆ. ಈ ಕಾರ್ಯಕ್ಕೆ ಕರ್ನಾಟಕ ಜನಜಾಗೃತಿ ವೇದಿಕೆ, ಶ್ರೀಧರ್ಮಸ್ಥಲ ಮಂಜುನಾಥೇಶ್ವರ ವ್ಯಸನಮುಕ್ತಿ ಮತ್ತು ಶಂಶೋಧನಾ ಕೇಂದ್ರ, ಕರ್ನಾಟಕ ರಾಜ್ಯ ಮಧ್ಯಪಾನ ಸಂಯಮ ಮಂಡಳಿ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳು ಕೈ ಜೋಡಿಸುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಹೇಳಿದರು.

ಹಿರೇಮಠ ಸಂಸ್ಥಾನದ ಶ್ರೀ ಮಹಾಲಿಂಗಸ್ವಾಮೀಜಿ ಸಾನಿಧ್ಯವಹಿಸಿ ಮಾತನಾಡಿದರು. ಮಧ್ಯವರ್ಜನ ಶಿಬಿರದ ವ್ಯವಸ್ಥಾಪಕ ಸಮಿತಿ ಅಧ್ಯಕ್ಷ ಸುಭಾಷ ಹುಲಸೂರೆ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಪುರಸಭೆ ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಮಧ್ಯವರ್ಜನ ವ್ಯವಸ್ಥಾಪಕ ಸಮಿತಿಯ ಗೌರವಾಧ್ಯಕ್ಷ ಶಿವು ಲೋಖಂಡೆ, ಉದ್ಯಮಿ ಸೋಮನಾಥಪ್ಪ ಅಸ್ಟೂರೆ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟಿ, ತಿಪ್ಪಣ್ಣ ಶಿವಪೂರೆ, ಪ್ರಕಾಶ ಪ್ರಭಾ, ಅಶೋಕ ಗಾಯಿಕವಾಡ, ಶಿವರಾಜ ಮಲ್ಲೇಶಿ, ರಾಜಕುಮಾರ ಪಾಟೀಲ, ಸಂತೋಷ ಬಿಜಿಪಾಟೀಲ, ವೀರಪಾಕ್ಷ ಗಾದಗಿ, ಪಂಢರಿ ಮೇತ್ರೆ ಉಪಸ್ಥಿತರಿದ್ದರು.

ತಾಲೂಕು ಯೋಜನಾಧಿಕಾರಿ ಸಂತೋಷಕುಮಾರ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಶಿವಾನಂದ ಕಲಾಟಿ ವಂದಿಸಿದರು.

# ಶರಣರ ತ್ಯಾಗ ಬಲಿದಾನ ಮರೆಯದಿರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಅ.3:12ನೇ ಶತಮಾನದಲ್ಲಿ ವಿಶ್ವಗುರು ಬಸವಣ್ಣನವರು ಸರ್ವಸಮಾನತೆಯ ಕಲ್ಯಾಣ ರಾಜ್ಯವನ್ನು ಕಟ್ಟಿದ್ದರು ಎಂದು ಬಸವಕಲ್ಯಾಣ ಅನುಭವಮಂಟಪ ಟ್ರಸ್ಟ್ನ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ವಿಜಯದಶಮಿ(ದಸರಾ) ನಿಮಿತ್ತ ಗುರುವಾರ ಆಯೋಜಿಸಿದ್ದ ಮರಣವೇ ಮಹಾನವಮಿ ಮತ್ತು ಕಲ್ಯಾಣ ಕ್ರಾಂತಿ ವಿಜಯೋತ್ಸವ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಬಸವಣ್ಣನವರ ಕ್ರಾಂತಿಯಲ್ಲಿ ಅನೇಕ ಮಹಾಶರಣರು ಭಾಗಿಯಾಗಿದ್ದರು. ಅದರಲ್ಲಿ ಶರಣ ಹರಳಯ್ಯ ಮತ್ತು ಶರಣ ಮಧುವಯ್ಯನವರು ಬಸವಸ್ಥಾಪಿತ ಸಮತಾ ರಾಜ್ಯ ನಿರ್ಮಾಣಕ್ಕಾಗಿ ಬಲಿದಾನವನ್ನು ನೀಡಿದರು.

ಲಿಂಗಾಯತ ಧರ್ಮ ಸಾವಿರಾರು ಶರಣರ ತ್ಯಾಗ ಮತ್ತು ಬಲಿದಾನದ ಮೇಲೆನಿಂತಿದೆ. ವಿಶೇಷವಾಗಿ ಹರಳಯ್ಯ ಮತ್ತು ಮಧುವಯ್ಯನವರು ಸಮತಾ ತತ್ವಕ್ಕಾಗಿ ಎಳೆಹೂಟಿ ಶಿಕ್ಷೆಯನ್ನು ಅನುಭವಿಸಿದರು. ದಿನ ಮಹಾನವಮಿ ಅದಕ್ಕೆ ಶರಣರು ಮರಣವೇ ಮಹಾನವಮಿ ಎಂದು ಹೇಳಿದರು. ಶರಣರಿಗೆ ಶಿಕ್ಷೆಯಾಗಿದ್ದರೂ ಅವರು ಶರಣತತ್ವಕ್ಕಾಗಿ ತಮ್ಮ ಬಲಿದಾನ ನೀಡಿದ್ದಾರೆಂದು ಅದು ನಮಗೆ ಸೋಲಲ್ಲ ಗೆಲವು ಎಂದು ತಿಳಿದು ಕಲ್ಯಾಣ ಕ್ರಾಂತಿ ವಿಜಯೋತ್ಸವವನ್ನು ಆಚರಿಸುತ್ತ ಬಂದಿದ್ದೇವೆ.

ಶರಣರ ತ್ಯಾಗ ಬಲಿದಾನ ಜಗತ್ತಿಗೆ ಪರಿಚಯಿಸುವ ಹೊಣೆಗಾರಿಕೆ ನಮ್ಮೆಲ್ಲರದಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಮಾಜಿ ಶಾಸಕ ಪ್ರಕಾಶ ಖಂಡ್ರೆ, ಹರಳಯ್ಯ ಸಮಾಜದ ಅಧ್ಯಕ್ಷರು, ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಪಾರ್ವತಿ ಧೂಮ್ಮನಸೂರೆ ಸೇರಿದಂತೆ ಹಲವರು ಇದ್ದರು.

ರಾಜು ಜುಬರೆ ವಚನ ಗಾಯನ ನಡೆಸಿಕೊಟ್ಟರು. ಶಂಭುಲಿಂಗ ಕಾಮಣ್ಣ ಸ್ವಾಗತಿಸಿದರು. ನವಲಿಂಗ ಪಾಟೀಲ್ ನಿರೂಪಿಸಿದರು.

ಪಲ್ಲಕ್ಕಿ ಮೆರವಣಿಗೆ

ಪಟ್ಟಣದಲ್ಲಿ ಮರಣವೇ ಮಹಾನವಮಿ ಮತ್ತು ಕಲ್ಯಾಣ ಕ್ರಾಂತಿ ವಿಜಯೋತ್ಸವ ಕಾರ್ಯಕ್ರಮದ ಅಂಗವಾಗಿ ಪಲ್ಲಕ್ಕಿ ಮೆರವಣಿಗೆ ವೈಭವದಿಂದ ನೆರವೇರಿತು. ಹಿರೇಮಠ ಸಂಸ್ಥಾನದಿಂದ ಆರಂಭಗೊಂಡ ಪಲ್ಲಕ್ಕಿ ಮೆರವಣಿಗೆ ಪ್ರಮುಖ ಬೀದಿ, ರಸ್ತೆ ಮೂಲಕ ಸಂಚರಿಸಿ ಚನ್ನಬಸವಾಶ್ರಮ ಪರಿಸರದಲ್ಲಿ ಸಮಾವೇಶಗೊಂಡಿತು.

.5ಕ್ಕೆ ಬಸವ ಸಂಸ್ಕೃತಿ ಸಮಾರೋಪ

ಅ.5 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಬಸವ ಸಂಸ್ಕೃತಿ ಅಭಿಯಾನ ಸಮಾರೋಪ ಸಮಾರಂಭ ಜರುಗಲಿದೆ ಜಿಲ್ಲೆಯ ಬಸವ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮನವಿ ಮಾಡಿದರು ಲಿಂಗಾಯತ ಮಠಾಧಿಪತಿಗಳ ಒಕ್ಕೂಟ ವತಿಯಿಂದ ಕಳೆದ ಸೆ.1ರಿಂದ 30ರ ವರೆಗೆ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಸಾಗಿಬಂದ ಬಸವ ಸಂಸ್ಕೃತಿ ಅಭಿಯಾನ ಅತ್ಯಂತ ಯಶಸ್ವಿಕಂಡಿದೆ ಎಂದು ತಿಳಿಸಿದರು.

# ದಸರಾ ಹಬ್ಬ ನಿಮಿತ್ತ ಶನಿವಾರ ಬನ್ನಿ ಮರಕ್ಕೆ ವಿಶೇಷ ಪೂಜೆ



ಬೀದರ. ಅ. 03 : ಜೈ ಶ್ರೀರಾಮ್ ಚಾರಿಟೇಬಲ್ ಎಜುಕೇಶನ್ ಸೊಸೈಟಿಯ ಅಧ್ಯಕ್ಷ ಚಂದ್ರಶೇಖರ ಪೊಲೀಸ್, ರಾಮ ದರ್ಬಾರ್ ಮಂದಿರದ ಅಧ್ಯಕ್ಷ ರಾಜೇಂದ್ರ ಗೊಯಲ್, ವಿಕಾಸ್ ಗೋಯಲ್, ಮಂದಿರದ ಅರ್ಚಕ ಮಹೇಶ್ವರಿ ತಿವಾರಿ, ಶ್ರೀಕಾಂತ ಪಾಟೀಲ್, ಕಲ್ಯಾಣರಾವ ಬಿರಾದಾರ, ಶಿವಕುಮಾರ ಸ್ವಾಮೀ, ಸಾಮೂಹಿಕವಾಗಿ ಬನ್ನಿ ಮರದ ಪೂಜೆ ನೆರವೇರಿಸಿದರು. ಬಾಜ ಭಜಂತ್ರಿಯೊಂದಿಗೆ ವಿದ್ಯಾನಗರ ಬಡಾವಣೆ ರಾಮ ಮಂದಿರದಿಂದ ಬುದ್ಧ ಮಂದಿರ, ಭವಾನಿ ಮಂದಿರ, ಭವಾನಿ ಮಂದಿರ, ಮಹಾದೇವ ಮಂದಿರ, ಹನುಮಾನ್ ಗದ ಮಂದಿರ, ರೇಣುಕಾ ಮಾತಾ ಮಂದಿರ, ಮಾರ್ಕಡೇಶ್ವರ ಮಂದಿರಗಳಿಗೆ ತೆರಳಿ ವಿಶೇಷ ಪೂಜೆ ಸಲ್ಲಿಸಿ ನೈವೇದ್ಯ ಅರ್ಪಣೆ ಮಾಡಲಾಯಿತು.

ನವರಾತ್ರಿ ಉತ್ಸವ ದಿವಸ ಬಡಾವಣೆ ಮಹಿಳೆಯರಿಂದ ದಾಂಡಿಯ ಕಾರ್ಯಕ್ರಮ ಹಾಗೂ ಷಡಕ್ಷರಿ, ಗೌತಮಿ ಇಂದ ಭರತನಾಟ್ಯ ನೃತ್ಯ, ಹಾಗೂ ವಿಶೇಷವಾಗಿ ಸಂಗೀತ ದರ್ಬಾರ್ ಜರಗಿತು, ದಾಂಡಿಯ ಕಾರ್ಯಕ್ರಮದ ರೂವಾರಿಗಳಾದ ಶ್ರೀಮತಿ ಹೇಮಾ ಸುಲ್ತಾನಪುರೆ, ಮಂಗಲ ಸುಲ್ತಾನಪುರೆ, ವಿಜಯಲಕ್ಷ್ಮಿ ಜಟ್ಲ, ನವೀನ ಜಟ್ಲ, ಅಂಜಮ ರೆಡ್ಡಿ, ಇವರ ತಂಡದ ಸಂಗಡಿಗ–ರಿಂದ ದಾಂಡಿಯ ಕಾರ್ಯಕ್ರಮ ಯಶಸ್ವಿಯಾಗಿ ಜರಗಿತು. ಈ ಸಂದರ್ಭದಲ್ಲಿ ಬಡಾವಣೆಯ ಮುಖಂಡರುಗಳಾದ

ಚಂದ್ರಶೇಖರ ಪೊಲೀಸ್, ಶ್ರೀಕಾಂತ ಪಾಟೀಲ್, ಕಲ್ಯಾಣರಾವ್ ಬಿರಾದಾರ, ಜಗದೀಶ್ ಜಟ್ಟ, ಪ್ರಭು ಆಲೂರೆ, ಪ್ರಭಾಕರ ಜಟ್ಟ' ನಾಗೇಂದ್ರರೆಡ್ಡಿ, ಬಾಬುರಾವ್ ಸಂಗೊಳ್ಳಗಿ, ಮೋಹನ್ ಸೋನಾರ್, ರಾಜಕುಮಾರ್ ಸೋನಾರ್ ನರೇಂದ್ರ ಚಾರಿ, ವಿರೂಪಾಕ್ಷಪ್ಪ ಪಾಟೀಲ್, ಮಲ್ಲಿಕಾರ್ಜುನ ಏಕತಪೂರ, ರಾಚಪ್ಪ ಪಾಟೀಲ್, ಸೂರ್ಯಕಾಂತ ಕೋಟೆ,

ರಾಜಕುಮಾರ ಸ್ವಾಮಿ, ಬಾಬುರಾವ ಸ್ವಾಮಿ, ಬಿ.ರಾಜ್, ಗಣೇಶ ಸಂಗಮ, ಚಂದ್ರಪ್ಪ, ಶಿವಕುಮಾರ, ಬಾಲಸುಬ್ರಮಣ್ಯಂ ಚಾಲಕ್, ವಿಶ್ವನಾಥ ಕೊಂಡ, ಸಂಜುರೆಡ್ಡಿ, ಸಂತೋಷ ಕೊಂಡ, ಶ್ರೀನಿವಾಸ್ ಗದ್ದೆ, ಪ್ರಕಾಶ ಗದ್ದೆ ವೀರಶೆಟ್ಟಿ ಹುಡುಗೆ, ನಾಗಪ್ಪ ಬೊಮ್ಮ, ಪ್ರಶಾಂತ ಬಿರಾದಾರ, ಮಲ್ಲಿಕಾರ್ಜುನ ಬೆಳಕೇರಿ, ಪ್ರದೀಪ್, ಬಿರಾದರ ಹಾಗೂ ಮಹಿಳೆಯರು, ಮಕ್ಕಳು ಇದ್ದರು.

# ಸಾಂಪ್ರದಾಯಿಕ ದಸರಾ ಆಚರಣೆಯಲ್ಲಿ ಭಾಗಿಯಾದ ಬಂಡೆಪ್ಪ ಖಾಶೆಂಪುರ್



ಬೀದರ. ಸೆ. 03 : ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ (ಪಿ) ಗ್ರಾಮದಲ್ಲಿ ಪ್ರತಿ ವರ್ಷದಂತೆಯೂ ಈ ವರ್ಷವೂ ಸಾಂಪ್ರದಾಯಿಕವಾಗಿ ಸಡಗರ ಸಂಭ್ರಮದಿಂದ ಆಚರಿಸಲಾದ ದಸರಾ ಕಾರ್ಯಕ್ರಮದಲ್ಲಿ ಅದೇ ಗ್ರಾಮದವರು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಪಾಲ್ಗೊಂಡರು.

ಪ್ರತಿ ವರ್ಷದ ಸಂಪ್ರದಾಯದಂತೆ ಈ ಬಾರಿ ಕೂಡ ಭಾಜಾ ಭಜಂತ್ರಿಗಳೊಂದಿಗೆ ಗ್ರಾಮದ ಹಿರಿಯರು, ಮಹಾರಾಜರ ಸಮ್ಮುಖದಲ್ಲಿ ಮಾಜಿ ಸಚಿವ ಬಂಡೆಪ್ಪ ಅವರ ನೇತೃತ್ವದಲ್ಲಿ ಗುರುವಾರ ಸಂಜೆ ಊರ ಹತ್ತಿರದ ಬನ್ನಿ ಮರಕ್ಕೆ ಹೋಗಿ ಪೂಜೆ ಸಲ್ಲಿಸಿ, ಬನ್ನಿ ತೆಗೆದುಕೊಂಡು ಬಂದ ಗ್ರಾಮಸ್ಥರು, ಗ್ರಾಮದಲ್ಲಿರುವ ವಿವಿಧ ದೇವಸ್ಥಾನಗಳಿಗೆ ಪೂಜೆ ಸಲ್ಲಿಸಿ ಬನ್ನಿ ಅರ್ಪಿಸಿದರು. ಇದೇ ವೇಳೆ ಗ್ರಾಮಸ್ಥರು ಪರಸ್ಪರ ಬನ್ನಿ ವಿನಿಮಯ ಮಾಡಿಕೊಂಡು ಶುಭ ಕೋರಿದರು.

ಈ ವೇಳೆ ಮಾತನಾಡಿದ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ಅವರು, ಪ್ರತಿ ವರ್ಷದ ಸಂಪ್ರದಾಯದಂತೆ ದೇವಸ್ಥಾನಗಳಿಗೆ ಪೂಜೆ ಸಲ್ಲಿಸುವ ಮೂಲಕ ಹಬ್ಬವನ್ನು ಆಚರಣೆ ಮಾಡಲಾಗಿದೆ. ಗ್ರಾಮದ ವಿವಿಧ ದೇವಸ್ಥಾನಗಳಿಗೆ ಪೂಜೆ ಸಲ್ಲಿಸಿ ನಾಡಿನ ಒಳಿತಿಗಾಗಿ, ಜನರ ನೆಮ್ಮದಿಯ ಜೀವನಕ್ಕಾಗಿ ಪ್ರಾರ್ಥಿಸಲಾಗಿದೆ ಎಂದರು.

ನಂತರ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು ಬೀದರ್ ನಗರದಲ್ಲಿರುವ ತಮ್ಮ ನಿವಾಸಕ್ಕೆ ತೆರಳಿ ಕುಟುಂಬದವರು, ಅಭಿಮಾನಿಗಳು, ಮುಖಂಡರು, ಕಾರ್ಯಕರ್ತರೊಂದಿಗೆ ಬನ್ನಿ ವಿನಿಮಯ ಮಾಡಿಕೊಂಡರು. ಶುಕ್ರವಾರ ದಿನವಿಡೀ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳ ಮುಖಂಡರು, ಕಾರ್ಯಕರ್ತರು ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರ ನಿವಾಸಕ್ಕೆ ತೆರಳಿ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರೊಂದಿಗೆ ಬನ್ನಿ ವಿನಿಮಯ ಮಾಡಿಕೊಂಡು ಶುಭ ಕೋರಿದರು.

ಗುರುವಾರ ಸಂಜೆ ಖಾಶೆಂಪುರ್ ಪಿ ಗ್ರಾಮದಲ್ಲಿ ನಡೆದ ದಸರಾ ಕಾರ್ಯಕ್ರಮದಲ್ಲಿ ಗ್ರಾಮದ ಹಿರಿಯರಾದ ಡಾ. ಮಾರ್ತಾಂಡರಾವ್ ಶ್ರೀನಿವಾಸರಾವ್ ಖಾಶೆಂಪುರ್, ರಾಜು ಶ್ರೀನಿವಾಸರಾವ್ ಖಾಶೆಂಪುರ್, ಶೇಖರ್ ಪೊಲೀಸ್ ಪಾಟೀಲ್, ರಾಜು ಖಾಶೆಂಪುರ್, ಬಾಬುರಾವ್ ಖಾಶೆಂಪುರ್, ಪ್ರಭಾಕರ್ ನಾಗರಾವ್ ಕುಲಕರ್ಣಿ, ಮಾರುತಿ ಸಂಗಪ್ಪ ವಗ್ಗೆ, ಭಜರಂಗ ತಮಗೊಂಡ, ಸುನೀಲ್ ತುಕ್ಕರಾಮ್ ಬಂತ್ಗೆ, ರಾಜು ಪಾಟೀಲ್, ಆನಂದ್ ತಮಗೊಂಡ, ರವಿ ಬಾಲೇಬಾಯಿ, ರವಿ ಗುಮಾಸ್ತಿ, ಶರತ್ ಖಾಶೆಂಪುರ್, ಕೇವಲ್ ಖಾಶೆಂಪುರ್, ಉಜ್ವಲ್ ಖಾಶೆಂಪುರ್, ಆಕರ್ಶ್ ಖಾಶೆಂಪುರ್ ಸೇರಿದಂತೆ ಗ್ರಾಮಸ್ಥರು, ಮುಖಂಡರು ಇದ್ದರು.

# ಬಿಪಿಹೆಚ್‌ಯು ಹುದ್ದೆಗಳಿಗೆ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

ಬೀದರ, ಅ.03: 2025–26ನೇ ಸಾಲಿನ ಐ.ಡಿ.ಎಸ್.ಪಿ ಕಾರ್ಯಕ್ರಮದಡಿಯಲ್ಲಿ 4 ಬಿ.ಪಿ.ಹೆಚ್.ಯು ಹುದ್ದೆಗಳಿಗೆ ದಿನಾಂಕ: 09–06–2025 ರಂದು ಅರ್ಜಿಗಳನ್ನು ಅಹ್ವಾನಿಸಲಾಗಿತ್ತು ಹಾಗೂ 2 ಅರ್ಹ ಅಭ್ಯರ್ಥಿಗಳನ್ನು 13–06–2025 ರಂದು ಸಂದರ್ಶನ ನಡೆಸಲಾಗಿ ಮುಖ್ಯ ಕಾರ್ಯನಿರ್ವಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಬೀದರ ಅವರ ಅನುಮೋದನೆಯೊಂದಿಗೆ ಹಾಜರಾದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಸೂಚನಾ ಫಲಕಕ್ಕೆ ಪ್ರಕಟಿಸಲಾಗಿದೆ. ಆಯ್ಕೆಗೆ ಆಕ್ಷೇಪಣೆ ಸಲ್ಲಿಸುವವರು ದಿನಾಂಕ: 03–10–2025 ರಿಂದ 10–10–2025 ರವೆ ರೆಗೆ ಸಂಜೆ 5.30 ಗಂಟೆಯೊಳಗಾಗಿ ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ : ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಕೃಷ್ಣಾ ಮೇಲ್ದಂಡೆ ಯೋಜನೆ(ಕಾಡಾ) ಅಧ್ಯಕ್ಷರಾಗಿ ಆಯ್ಕೆಯಾದ ಬಾಬು ಹೊನ್ನಾ ನಾಯಕ್ ಅವರ ನಿವಾಸದಲ್ಲಿ ಇಲ್ಲಿನ ಡಿ. ಎಸ್ . ಎಸ್.ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಡಿ. ಎಸ. ಎಸ್. ತಾಲೂಕಾ ಸಂಚಾಲಕರಾದ ಪಿಂಟು ಕಾಂಬಳೆ, ದಲಿತ ಮುಖಂಡರುಗಳಾದ ವಿಜಯಕುಮಾರ ಡಾಂಗೆ, ಗೌತಮ ಜಾಂತೆ, ಅಶೋಕ ಮಧಾಳೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ : ಡಾ. ಬಲಬೀರ ಸಿಂಗ್

ಬೀದರ. ಸೆ. 03 : ಧಾರ್ಮಿಕ ಸ್ವಾತಂತ್ರ್ಯ ಮತ್ತು ಮಾನವ ಹಕ್ಕುಗಳಿಗಾಗಿ ತಮ್ಮ ಪ್ರಾಣವನ್ನೇ ತಯಾಗ ಮಾಡಿದ 9ನೇ ಸಿಖ್ ಗುರು ಹಿಂದ್ ಕಿ ಚದ್ದರ್ ಶ್ರೀ ಗುರು ತೇಜ ಬಹದ್ದೂರ್ ಸಾಹಿಬ್‌ಜಿ ಅವರ 350 ನೇ ಹುತಾತ್ಮ ವಾರ್ಷಿಕೋತ್ಸವದ ಸ್ಮರಣಾರ್ಥ ಅಗಸ್ಟ್ 21, 2025 ರಂದು ಅಸ್ಸಾಮನ ಧುಬ್ರಿಯಿಂದ ಭವ್ಯ ಮೆರವಣಿಗೆ ಪ್ರಾರಂಭವಾಗಿದ್ದು, ಪಶ್ಚಿಮ ಬಂಗಾಳ, ಉತ್ತರ ಪ್ರದೇಶ್, ಜಾರ್ಖಂಡ್, ಮದ್ಯಪ್ರದೇಶ, ಛತ್ತಿಸ್‌ಗಢ್, ತೆಲಂಗಾಣ, ಆಂಧ್ರಪ್ರದೇಶ, ಕರ್ನಾಟಕ, ಮಹಾರಾಷ್ಟ್ರ ಮತ್ತು ತಮಿಳುನಾಡು ರಾಜ್ಯಗಳಾದ್ಯಂತ ಪ್ರಮುಖ ಐತಿಹಾಸಿಕ ಗುರುದ್ವಾರಾಗಳನ್ನು ಮೆರವಣಿಗೆ ಮೂಲಕ ಇಂದು ಅಕ್ಟೋಬರ್ 3, 2025 ರಂದು ರಾತ್ರಿ 8:00 ಗಂಟೆಗೆ ಸೋಲಾಪುರದ ಮೂಲಕ ಹುಮನಾಬಾದ ದಿಂದ ಬೀದರಿಗೆ ತಲುಪಲಿದೆ.


ಅಕ್ಟೋಬರ್ 5 ರಂದು ಬೆಳಿಗ್ಗೆ 9:00 ಗಂಟೆಗೆ ಬೀದರ್‌ನ ಗುರುದ್ವಾರಾ ಶ್ರೀ ನಾನಕ ಝಿರಾ ಸಾಹೇಬ್‌ನಿಂದ ನಾಂದೇಡ್‌ಗೆ ಮೆರವಣಿಗೆ ಸಾಗಿ, ಶ್ರೀ ಮಡಿವಾಲ್ ಚೌಕ, ರೋಟರಿ ವೃತ್ತ, ಸಿಎಂಸಿ ಕಛೇರಿ, ಡಾ. ಬಿ.ಆರ್.ಅಂಬೇಡ್ಕರ್, ಗುರುದ್ವಾರಾ ಭಾಯಿ ಸಾಹೇಬ್ ಸಿಂಗ್‌ಜಿ ಜನವಾಡಾ ಮೂಲಕ ನಾಂದೇಡ್‌ನ ಗುರುದ್ವಾರಾ ಸಚ್‌ಖಂಡ್ ಶ್ರೀ ಹಜೂರ್ ಸಾಹೇಬ್‌ಗೆ ತಲುಪಿ ಮುಕ್ತಾಯಗೊಳ್ಳಲಿದೆ.




350 ನೇ ಹುತಾತ್ಮ ಮೆರವಣಿಗೆಯು ಅವರ ತ್ಯಾಗ, ಏಕತೆ ಮತ್ತು ಸಹಾನುಭೂತಿಯ ಸಂದೇಶವನ್ನು ಹರಡುವ ಗುರಿಯನ್ನು ಹೊಂದಿದೆ ಎಂದು ತಿಳಸಿದಿದ್ದಾರೆ.

ಬೀದರ್‌ನ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವಾಹೇ ಗುರುಜಿಯವರ ಆರ್ಶಿರ್ವಾದವನ್ನು ಪಡೆಯುವಂತೆ ಶ್ರೀ ನಾನಕ ಝಿರಾ ಸಾಹೇಬ್ ಫೌಂಡೇಷನ್‌ನ ಅಧ್ಯಕ್ಷ ಡಾ. ಎಸ್. ಬಲಬೀರ್ ಸಿಂಗ್ ಅವರು ವಿನಂತಿಸಿದ್ದಾರೆ.

# ಮೃದು ಸ್ವಭಾವದ ನಮ್ಮೆಲ್ಲರ ನೆಚ್ಚಿನ ರುಕಮೋದ್ದಿನ್ ಇಸ್ಲಾಂಪೂರ ಇನ್ನಿಲ್ಲ



ಹುಮನಾಬಾದ:ಅ.3:ಸಾಹಿತ್ಯಕ್ಷೇತ್ರದ ಮಿನುಗು ನಕ್ಷತ್ರದಂತಿದ್ದ, ಸರಳ ಸಜ್ಜನಿಕೆಯ, ಸಹಕಾರ ಮೂರ್ತಿ, ಸಮಾನತೆಯ ಹರಿಕಾರ, ಪ್ರಭುದ್ಧ ಭಾರತದ ಆಕಾಂಕ್ಷಿ, ಕನ್ನಡ ನಾಡು ನುಡಿಯ ಆರಾಧಕ, ಹಿರಿಯರನ್ನು ಗೌರವಿಸುವ, ಕಿರಿಯರನ್ನು ಹುರಿದುಂಬಿಸುವ, ಸದಾಕ್ರೀಯಾಶೀಲ, ಅಧ್ಯತ್ಮಿಕವೊಲವುಳ್ಳ, ಪದವಿಗಳ ಸರಮಾಲೆಯನ್ನೆ ಹೊಂದಿರುವ, ಅಹಿಂಸೆ, ಮಾನವಿಯತೆಯ ಪ್ರತಿಪಾದಕ, ಪತ್ರಕರ್ತ, ಕವಿ, ಕಾದಂಬರಿಗಾರ, ಸಾಹಿತಿ, ಮೇಲ್ವಿಚಾರ, ಮೃಧುಸ್ವಭಾವದ ನಮ್ಮೆಲ್ಲರ ನೆಚ್ಚಿನ ರುಕಮೋದ್ದಿನ್ ಇಸ್ಲಾಂಪೂರ ಇನ್ನಿಲ್ಲ.

ಬಾಲ್ಯದಿಂದಲು ಶಿಕ್ಷಣ ಮತ್ತು ಸಾಹಿತ್ಯ ಕ್ಷೇತ್ರದಲ್ಲಿ ಅಭಿರುಚಿವುಳ್ಳ ರುಕ್ಮೋದ್ದಿನರಿಗೆ ಬಡತನ ಅಡ್ಡ ಬರಲಿಲ್ಲ. ಧೃಢ ಸಂಕಲ್ಪವನ್ನು ಹೊಂದಿರುವ ರುಕ್ಮೋದ್ದಿನರು, ಎಂ.ಎ ಕನ್ನಡ, ಎಂ.ಎ ಇತಿಹಾಸ, ಎಂ.ಎ ಪತ್ರಿಕೋದ್ಯಮ, ಬಿ.ಎಲ್.ಆಯ್, ಎಸ್ಸಿ, ಎಲ್.ಎಲ್.ಬಿ, ಡಿಪ್ಲೋಮಾ ಇನ್ ಜರ್ನಲಿಜಮ್, ಪಿಜಿ ಡಿಪ್ಲೋಮಾ ಇನ್ ಹ್ಯೂಮನ್ ರಿಸೋರ್ಸಸ್ ಮ್ಯಾನ್ಯೇಜಮೆಂಟ್, ಪಿಜಿ ಡಿಪ್ಲೋಮಾ ಇನ್ ಮಾಸ್ ಕಮ್ಯೂನಿಕೇಶನ್ ಆಂಡ ಜರ್ನಲಿಜಮ್ ಪದವಿಗಳನ್ನು ಪಡೆದು ಬಡತನವು ಶಿಕ್ಷಣ ಪಡೆದಯಲು ಅಡ್ಡಿ ಬರುವುದಿಲ್ಲವೆಂದು ಸಾಬೀತು ಪಡಿಸಿದವರು.

ಸದ್ಯ ಕೆ.ಎಸ್.ಆರ್.ಟಿ.ಸಿಯಲ್ಲಿ ಮೇಲ್ವಿಚಾರಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ರುಕ್ಮೋದ್ದಿನ್ ಇಸ್ಲಾಂಪೂರ್ ರವರು ಸದಾ ಸಫಾರಿ ಉಡುಪು ಧರಿಸಿಕೊಂಡು ಸಾಹಿತ್ಯದ ಯಾವುದೇ ಕಾರ್ಯಕ್ರಮವಿದ್ದರು ದಾಖಲಾತಿಗಳು ಮತ್ತು ಪುಸ್ತಕಗಳನ್ನು ಹೊಂದಿರುವ ಒಂದು ಬ್ಯಾಗ ತನ್ನ ಕೈಯಲ್ಲಿ ಹಿಡಿದುಕೊಂಡು ತಪ್ಪದೇ ಹಾಜರಾಗಿ ಭಾಗವಹಿಸಿ, ಉಪನ್ಯಾಸಕರಿಂದ ಬೋಧಿಸಲ್ಪಡುವ ಮಾರ್ಗದರ್ಶನಗಳನ್ನು ಬಹಳ ಶಾಂತತೆಯಿಂದ ಆಲಿಸುತ್ತಿದ್ದರು. ಕವಿ, ಕಾದಂಬರಿಕಾರ, ಬರಗಾರರಾಗಿ ಅನೇಕ ಸಾಹಿತ್ಯ ಕೃಷಿಗೈದಿರುವ ಇವರು ಬೀದರ ಜಿಲ್ಲೆಯ ಪ್ರತಿಯೊಬ್ಬ ಸಾಹಿತ್ಯಭಿಮಾನಿಗೆ ಚಿರಪರಿಚಯಸ್ಥರು.

ಎರಡು ದಶಮಾನಗಳ ಹಿಂದೆ ನಾನು ಸಾಹಿತ್ಯ ಕ್ಷೇತ್ರದಲ್ಲಿ ಕೃಷಿಗೈಯುವಾಗ ನನ್ನ ಕೃತಿಗಳನ್ನು ಓದಿದ ಸಾಹಿತ್ಯಭಿಮಾನಿಗಳು ಸರ್ ನಿಮ್ಮ ಸಾಹಿತ್ಯ ಗಡಸುತನದಿಂದ ಕೂಡಿದೆ ಎಂದು ಮೆಚ್ಚುಗೆಯ ಮಾತುಗಳನ್ನು ಹೇಳಿದ ನಂತರ ಮಾತು ಮುಂದುವರೆಸಿ ರುಕ್ಮೋದ್ದಿನ ಇಸ್ಲಾಂಪೂರ ರವರ ಪರಿಚಯ ನಿಮಗೆ ಇದೆಯೇ ? ಅಂತ ಕೇಳುತ್ತಿದ್ದರು, ರುಕ್ಮೋದ್ದಿನರು ಅಷ್ಟೊಂದು ಚಿರಪರಿಚಿಸ್ಥರು. ಪ್ರತಿ ವರ್ಷ 25ನೇ ಜನವರಿ ಮತ್ತು 14ನೇ ಅಗಷ್ಟದಂದು ರಾತ್ರಿ ವೇಳೆಯಲ್ಲಿ ಲಾಲಧರಿಯಲ್ಲಿ ತಪ್ಪದೇ ಸಾಹಿತ್ಯದ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಆ ಕಾರ್ಯಕ್ರಮಗಳಿಗೆ ನಮಗೂ ಸಹ ಅಹ್ವಾನಿಸಿ, ನನಗೆ ಸ್ವಲ್ಪ ಕೆಲಸವಿದೆ, ದಯವಿಟ್ಟು ಕ್ಷಮಿಸಿ ಅಂತ ಹೇಳಿದರೆ, ಇಲ್ಲ ಸರ್ ನೀವು ಬರಲೇ ಬೇಕು. ನೀವೇ ಬಂದು ನಿರೂಪಣೆ ಮಾಡಬೇಕೆಂದು ಹಠ ಹಿಡಿಯುತ್ತಿದ್ದರು. ಅವರ ಕೋರಿಕೆಗೆ ಮನ್ನಿಸಿ ಆಯ್ತು ಸರ್ ಎಂದು ಹೇಳಿ ಎಷ್ಟೆ ಕೆಲಸದ ಒತ್ತಡವಿದ್ದರು ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದೇನು. ಕಾರ್ಯಕ್ರಮದ ರೂಪರೇಶೆಗಳನ್ನು ನನ್ನೊಂದಿಗೆ ಚರ್ಚಿಸುತ್ತಿದ್ದರು. ಕೆಲವೊಂದು ಸಲಹೆಗಳನ್ನು ಕೇಳಿ ಬದಲಾಯಿಸುತ್ತಿದ್ದರು. ಕೆಲವೊಂದು ಬದಲಾವಣೆ ಮಾಡದೇ ಹಾಗೆಯೇ ಇರಲಿ ಅನ್ನುತ್ತಿದ್ದರು. ಸಮಯ ಸಿಕ್ಕಾಗ ನನ್ನ ಕಛೇರಿಗೆ ಬಂದು ಕಶಲೋಪರಿ ವಿಚಾರಿಸುತ್ತ ನಿಮ್ಮ ಕೃತಿಗಳೇಷ್ಟಾದವು ಸರ್, ಈಗ ಯಾವ ಕೃತಿ ರಚಿಸುತ್ತಿದ್ದೀರಿ ಇತ್ಯಾದಿಯಾಗಿ ಕೇಳುತ್ತಿದ್ದರು.

ರುಕ್ಮೋದ್ದಿನ್ ಇಸ್ಲಾಂಪೂರ ರಚಿಸಿರುವ ಲಾಲಧರಿ ವಿಚಾರಧಾರೆ ಪುಸ್ತಕದಲ್ಲಿ ತೈಯ್ಯಬ್, ಮೆಹಬೂಬ್, ಜಾನಿಮಿಯಾ, ಜೈನುಲ್ಲಾ ಮತ್ತು ನನ್ನನ್ನು ಆಪತ್ಕಾಲದ ಆಪದ್ಬಾಂಧವರಾಗಿದ್ದಾರೆಂದು ನಮೂದಿಸಿ ನಮ್ಮೊಂದಿಗಿದ್ದ ಸಂಬಂಧಕ್ಕೆ ಗೌರವ ಸಲ್ಲಿಸಿದ್ದರು. ಲಾಲಧರಿ ಮುತ್ಯರವರನ್ನು ಬಹಳ ಗೌರವದಿಂದ ಕಾಣುತ್ತಿದ್ದರು. ಲಾಧರಿ ಮುತ್ಯರವರಿಂದ ತನಗೆ ಆಧ್ಯತ್ಮಿಕವೊಲವು ಮತ್ತು ಮನಸ್ಸಿಗೆ ನೆಮ್ಮದಿ ಮತ್ತು ಶಾಂತಿ ಲಭಿಸಿದೆ ಎಂದು ಬಹಿರಂಗವಾಗಿಯೇ ಹೇಳಿಕೊಳ್ಳುತ್ತಿದ್ದರು.

ಸಾಹಿತ್ಯಕೃತಿಗಳನ್ನು ನೋಡುವುದಾದರೆ, "ಕಾರ್ಗತ್ತಲಿಂದ ಮಂಜು ಬೆಳಕಿನಡೆಗೆ" ಕಥಾ ಸಂಕಲನವು ವಿವಾದಕ್ಕೆ ಕಾರಣವಾಗಿತ್ತು. "ಎನ್ನೊಡಲಿಂದ ತಮ್ಮೊಡಲಿಗೆ" ಕವನ ಸಂಕಲನ, "ಕಣ್ಮಂಚಿನ ನೀರು", "ಸಮತಿ", "ಕರುಳ ಬಳ್ಳಿ", "ಭಗವತಿ" ನಾಲ್ಕು ಕಾದಂಬರಿಗಳು, "ಲಾಲಧರಿ ವಿಚಾರಧಾರೆ" ವೈಚಾರಿ ಕೃತಿ, "ಶೋಧ ಭೋದ" ಮತ್ತು "ಮಾನಸ ಗಂಗೋತ್ರಿಯ ಮಡಿಲಲ್ಲಿ" ಲೇಖನ ಸಂಕಲನಗಳು. "ಈ ಯೋಗಿ ವಾಸ್ತವವಾದಿ" ಜೀವನ ಚರಿತ್ರೆ ಹೀಗೆ ಒಟ್ಟು 10 ಕೃತಿಗಳನ್ನು ರಚಿಸಿದ್ದಾರೆ.

ರುಕ್ಮೋದ್ದಿನ ಇಸ್ಲಾಂಪೂರ ರವರ ತಾಯಿ ಮಸ್ತಾನ ಬೀ ಇಸ್ಲಾಂಪೂರ ಗ್ರಾಮದಲ್ಲಿದ್ದು, ಪತ್ನಿ ಸುಹೀಲಾ ಬೇಗಂ ಖಾಸಗಿ ಶಾಲೆಯಲ್ಲಿ ಶಿಕ್ಷಕಿಯಾಗಿ ಕಲಬುರಗಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಮಗಳು ರೋಶನ್ ಇವಳು ಟ್ರೇನ್ ಟೆಕ್ನಾಲಜಿಸ್ ಕಂಪನಿಯಲ್ಲಿ ಸಾಫ್ಟವೇರ್ ಇಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದು, ನೂರ ಈತನು ಮೈಸೂರಿನ ಜೆ.ಎಸ್.ಎಸ್ ತಾಂತ್ರಿಕೆ ಮಹಾವಿದ್ಯಾಲಯದಲ್ಲಿ ಬಿ.ಇ ಸಿವಿಲ್ ಓದುತ್ತಿದ್ದಾನೆ. ತಮ್ಮನಾದ ಖಾಸಿಮನು ಬಳ್ಳಾರಿಯ ತೋರಣಗಲ್ಲುವಿನ ಜಿಂದಾಲ್ ಸ್ಟೀಲ್ ಇಂಡಸ್ಟ್ರೀಯಲ್ಲಿ ಎ.ಜಿ.ಎಮ್ ಹುದ್ದೆಯಲ್ಲಿದ್ದಾರೆ. ಕುಟುಂಬದವರಷ್ಟೆ ಅಲ್ಲ ಬೀದರ ಜಿಲ್ಲೆಯ ಎಲ್ಲ ಸಾಹಿತಿಗಳು

# ಜಾಗತೀಕರಣದ ಅವಧಿ ಗಾಂಧಿಯನ್ನು ಅರ್ಥೈಸಿಕೊಂಡಿಲ್ಲ: ಸಿ ವಿ ಚಂದ್ರಶೇಖರ್




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.3: ಮಹಾತ್ಮ ಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ವಿಚಾರಧಾರೆಗಳನ್ನು ಜಾಗತೀಕರಣದ ಅವಧಿ ಅರ್ಥೈಸಿಕೊಳ್ಳುವಲ್ಲಿ ಎಡವಿದೆ ಎಂದು ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸದಸ್ಯರಾದ ಸಿ ವಿ ಚಂದ್ರಶೇಖರ್ ಹೇಳಿದರು.

ಪಕ್ಷದ ಕಚೇರಿಯಲ್ಲಿ ಗುರುವಾರ ನಡೆದ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

"ಗಾಂಧಿ ಮತ್ತು ಶಾಸ್ತ್ರೀಯವರು ಅಭಿವೃದ್ಧಿಗಿಂತ ಸರ್ವೋದಯಕ್ಕೆ ಹೆಚ್ಚಿನ ಒತ್ತು ಕೊಟ್ಟಿದ್ದರು. ಸುಸ್ಥಿರ ಅಭಿವೃದ್ಧಿಯನ್ನು ಒತ್ತಿಹೇಳಿದ್ದರು. ಶ್ರಮ ಹಾಗೂ ಸರಳತೆಯ ಮಾರ್ಗವನ್ನು ತಿಳಿಸಿದರು. ಮೂರು ದಶಕಗಳ ಜಾಗತೀಕರಣದ ಅವಧಿಯಲ್ಲಿ ನಮ್ಮ ವ್ಯವಸ್ಥೆ ಈ ತತ್ವಗಳ ವಿರುದ್ಧ ಹೋಗಿದೆ. ಹೀಗಾಗಿ ಅನೇಕ ಜ್ವಲಂತ ಸಮಸ್ಯೆಗಳು ಉದ್ಭವಿಸಿವೆ. ಈ ನಾಯಕರ ವಿಚಾರಗಳನ್ನು ಸರಿಯಾಗಿ ಅರ್ಥ ಮಾಡಿಕೊಳ್ಳುವಲ್ಲಿ ವಿಫಲವಾಗಿದ್ದು ಅದಕ್ಕೆ ಮುಖ್ಯ ಕಾರಣ," ಎಂದು ಹೇಳಿದರು.

ಲಾಭ ಹಾಗೂ ವೈಯಕ್ತಿಕ ಹಿತಾಸಕ್ತಿ

ಜಾಗತೀಕರಣ ಕಲಿಸಿಕೊಟ್ಟ ನೀತಿಗಳು. ಮೂರು ದಶಕಗಳಲ್ಲಿ ಲಾಭವೇ ಅಂತಿಮ ಸತ್ಯವಾಗಿದ್ದರಿಂದ

ಸ್ವಾರ್ಥ ನಿತ್ಯ ಮಂತ್ರವಾಗಿದೆ. ವ್ಯಕ್ತಿಗತ ಹಿತ ಮುಖ್ಯವಾಗಿ ಸಮಷ್ಟಿ ಹಿತ ಹಿಂದೆ ಸರಿದಿದೆ. ಅಭಿವೃದ್ಧಿಯನ್ನೇ ಸರ್ವೋದಯ ಎಂದು ತಪ್ಪಾಗಿ ಬಿಂಬಿಸಲಾಗಿದೆ ಎಂದು ವಿಷಾದಿಸಿದರು.

"ಇಂದಿನ ಯುವ ಜನತೆ ಗಾಂಧೀಜಿಯವರನ್ನು ಸರಿಯಾಗಿ ತಿಳಿದುಕೊಂಡಿಲ್ಲ. ವಿವಿಧ ಸಿದ್ಧಾಂತ ಪ್ರತಿಪಾದಕರ ಅಭಿಪ್ರಾಯಗಳನ್ನೇ ಸತ್ಯ ಎಂದು ನಂಬಿ ಗಾಂಧಿ ದೇಶವನ್ನು ಒಡೆದರು ಎಂಬ ತಪ್ಪು ಕಲ್ಪನೆಯಲ್ಲಿದ್ದಾರೆ. ಅಖಂಡ ಭಾರತಕ್ಕೆ ಪ್ರಯತ್ನ ಪಟ್ಟ ಅನೇಕರಲ್ಲಿ ಗಾಂಧಿ ಪ್ರಮುಖರು. ಗಾಂಧೀಜಿಯವರ ಕುರಿತು ಇನ್ನೊಬ್ಬರ ವಿಚಾರಗಳನ್ನು ತಿಳಿದುಕೊಳ್ಳುವ ಬದಲು ಗಾಂಧೀಜಿಯವರ ವಿಚಾರಗಳನ್ನು ತಿಳಿದುಕೊಳ್ಳುವುದು ಅಗತ್ಯ ಎಂಬುದನ್ನು ಯುವಕರು ಅರ್ಥ ಮಾಡಿಕೊಳ್ಳಬೇಕು. ಗಾಂಧಿಯವರ ವಿಚಾರಧಾರೆಗಳನ್ನು ತಿರುಚುವ ಕೆಲಸ ನಿಲ್ಲಬೇಕು,"ಎಂದರು.

ಕೊಪ್ಪಳದ ಸುತ್ತಮುತ್ತಲಿನ ಕಾರ್ಖಾನೆಗಳು ಪರಿಸರವನ್ನು ಈಗಾಗಲೇ ಹಾಳು ಮಾಡಿವೆ. ಗಾಂಧಿ ಪ್ರಣೀತ ಸುಸ್ಥಿರ ಅಭಿವೃದ್ಧಿಯನ್ನು ಅಳವಡಿಸಿಕೊಳ್ಳುವ ಮೂಲಕ ಹಾನಿಯನ್ನು ತಡೆಗಟ್ಟಲು ಸಾಧ್ಯ. ಕಾರ್ಖಾನೆಗಳ ಆಡಳಿತ ಮಂಡಳಿಗಳು ಈ ನಿಟ್ಟಿನಲ್ಲಿ ಗಂಭೀರವಾಗಿ ಯೋಚಿಸಬೇಕಿದೆ ಎಂದರು.

"ಜಾತಿ, ಧರ್ಮ, ಭಾಷೆ ಹಾಗೂ ಪ್ರಾಂತ್ಯದ ಹೆಸರಿನಲ್ಲಿ ತುಂಡು ತುಂಡಾಗಿರುವ ಇಂದಿನ ಸಮಾಜವನ್ನು ಒಗ್ಗೂಡಿಸುವ ಶಕ್ತಿ ಗಾಂಧಿ ಮತ್ತು ಶಾಸ್ತ್ರಿಯವರ ವಿಚಾರಧಾರೆಗಳಿಗಿದೆ," ಎಂದು ಹೇಳಿದರು. ಈ ಸಂದರ್ಭದಲ್ಲಿ ನಗರ ಅಧ್ಯಕ್ಷರಾದ ಸೋಮನಗೌಡ ಹೊಗರನಾಳ, ಉಪಾಧ್ಯಕ್ಷರಾದ ಮೂರ್ತ್ಯಪ್ಪ ಹಿಟ್ನಾಳ್, ಓಬಿಸಿ ಜಿಲ್ಲಾ ಅಧ್ಯಕ್ಷರಾದ ಕರಿಯಪ್ಪ ಹಾಲವರ್ತಿ, ಜಿಲ್ಲಾ ಚುನಾವಣೆ ಅಧಿಕಾರಿ ಶಿವಕುಮಾರ್ ಏಣಿಗಿ, ರೋಹಿತ್ ಹಣವಾಳ, ಸುರೇಶ್ ದದೇಗಲ್ ಕೃಷ್ಣ ಹಾಗೂ ಇತರರು ಉಪಸ್ಥಿತರಿದ್ದರು.

# ಕಲ್ಯಾಣ ನಾಡಿನಲ್ಲಿ ರಂಭಾಪುರಿ ಜಗದ್ಗುರುಗಳ ಭವ್ಯ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಅ 3: ಇಲ್ಲಿನ ವಿಜಯದಶಮಿ ದಿನದಂದು ವಿಶ್ವಗುರು ಬಸವಣ್ಣನವರ ಕರ್ಮಭೂಮಿ ಬಸವಕಲ್ಯಾಣದಲ್ಲಿ ಶರಣ್ನವರಾತ್ರಿ ರಂಭಾಪುರಿ ಜಗಸ್ಗುರುಗಳ ದಸರಾ ದರ್ಮ ಸಮ್ಮೇಳನ ಕೊನೆಯ ದಿನ ಬಸವಾನುಯಾಯಿಗಳ ಹಾಗೂ ಬಸವ ಭಕ್ತರ ಕೋರಿಕೆ ಮೆರೆಗೆ ಇದೆ ಮೊಟ್ಟ ಮೊದಲ ಬಾರಿಗೆ ರಂಭಾಪುರಿ ಜಗದ್ಗುರುಗಳ ಅಡ್ಡ ಪಲ್ಲಕಿ ಬದಲು ವಿಶೇಷ ಅಲಂಕೃತ ತೆರೆದ ವಾಹನದಲ್ಲಿ ಮೆರವಣಿಗೆ ಜರುಗಿತು. ಬಸವಣ್ಣನವರ ಮಂದಿರದಲ್ಲಿ ರಂಭಾಪುರಿ ಜಗದ್ಗುರುಗಳು ಬಸವೇಶ್ವರರರಿಗೆ ಪೂಜೆ ಸಲ್ಲಿಸಿ ಅಲಂಕೃತ ರಥವೇರಿದರು. ಮೆರವಣಿಗೆ ಉದ್ದಕ್ಕೂ ಡೊಳ್ಳು ಕುಣಿತ, ಹಲಗೆ ಕುಣಿತ, ವೀರಭದ್ರ ಕುಣಿತ, ಇತ್ಯಾದಿ ಸಾಂಸ್ಕೃತಿಕ ನೃತ್ಯ ವೀರಶೈವರ ಮನಸುರೆಗೊಂಳಿಸಿತು. ಧರ್ಮಕ್ಕೆ ಜಯವಾಗಲಿ, ಮಾನವ ಧರ್ಮಕ್ಕೆ ಜಯವಾಗಲಿ ಎಂಬ ಘೋಷಣೆ ಮುಗಿಲು ಮಟ್ಟಿತು. ಯುವಜನರ, ಮಹಿಳೆಯರ ನೃತ್ಯ ಮೆರವಣಿಗೆಯ ಕಳೆ ದ್ವಿಗುಣಗೊಳಿಸಿತು. ಮೆರವಣಿಗೆಯಲ್ಲಿ ಆನೆ ಸಹ ಮೆರವಣಿಗೆಯ ಶೋಭೆ ಹೆಚ್ಚಿಸಿತು. ಭಜನೆ ಎಲ್ಲೆಡೆ ಭಕ್ತಿಯ ವಾತಾವರಣ ಸೃಷ್ಟಿಸಿತು. ಮೆರವಣಿಗೆಯು ಬಸವೇಶ್ವರ ಮಂದಿರದಿಂದ ಪ್ರಮುಖ ರಸ್ತೆಗಳ ಮೂಲಕ ಬಿ.ಕೆ.ಡಿ.ಬಿ ಕಲ್ಯಾಣ ಮಂಟಪದ ವರೆಗೆ ಸಾಗಿತು. ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು. ತಡೂಳಾದ ಪೂಜ್ಯಶ್ರೀ ರಾಜೇಶ್ವರ ಶಿವಾಚಾರ್ಯರು. ತಿಪುರಾಂತಿನ ಗವಿಮಠದ ಪೂಜ್ಯಶ್ರೀ ಡಾ ಅಭಿನವ ಘನಲಿಂಗರುದ್ರಮುನಿಶಿವಾಚಾರ್ಯರು. ನಾಡಿನ ಹಲವಾರು ಪೂಜ್ಯರು ಮೆರವಣಿಗೆಯಲ್ಲಿ ಪಾಲ್ಗೊಂಡು ಇನ್ನಷ್ಟು ಭಕ್ತಿಮಯವಾಗಿಸಿದರು. ಈ ಸಂದರ್ಭದಲ್ಲಿ ಅನೇಕರು ಭಕ್ತರು ಭಾಗವಹಿಸಿದ್ದರು.

# ಜಿಲ್ಲೆಯ ಗುತ್ತಿಗೆದಾರರು ಸಾಕಷ್ಟು ಕಷ್ಟ ನಷ್ಟ ಅನುಭವಿಸುತ್ತಿದ್ದು,ಶೀಘ್ರ ಪ್ಯಾಕೇಜ್ ಟೆಂಡರ ನಿಲ್ಲಿಸಿ: ಭೂಮರೆಡ್ಡಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.3: ಜಿಲ್ಲೆಯಲ್ಲಿ ಎಸ್ಸಿ, ಎಸ್ಟಿ ಗುತ್ತಿಗೆದಾರರು ಸೇರಿದಂತೆ, ಕ್ಲಾಸ್ ಒನ್ ಮತ್ತು ಕ್ಲಾಸ್ ಟು ಹಾಗೂ ಮಧ್ಯಮ ವರ್ಗದ ಗುತ್ತಿಗೆದಾರರು. ಸಾಕಷ್ಟು ಕಷ್ಟ, ನಷ್ಟವನ್ನು,ಅನುಭವಿಸುತ್ತಿದ್ದಾರೆ.ಎಂದು ಗುತ್ತಿಗೆದಾರರ ಸಂಘದ ಜಿಲ್ಲಾಧ್ಯಕ್ಷ ಸುರೇಶ್ ಭೂಮರೆಡ್ಡಿ, ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಶಿ ಮಾತನಾಡಿದ ಇವರು.ಇದರ ಹಿಂದೆ ಕೊಪ್ಪಳದ ಕೆಲವು ಕಾಣದ ಕೈಗಳ,ಜನಪ್ರತಿನಿಧಿಗಳ ಸರ್ವಾಧಿಕಾರಿ ಧೋರಣೆಯಿಂದ, ಪ್ರೇರಣ ಎಂಬ ಸಂಸ್ಥೆಯಲ್ಲಿ ಮೆಟೀರಿಯಲ್ ಖರೀದಿ ಮಾಡಬೇಕು ಎಂಬ ನಿಯಮ ಮಾಡಿ,ಇದರಿಂದ ಗುತ್ತಿಗೆದಾರರ ಮೇಲೆ ಸಾಕಷ್ಟು ಸಂಕಷ್ಟಕ್ಕೆ ದಾರಿ ಮಾಡಿಕೊಟ್ಟಿದೆ. ಇಂಥ ಸರ್ವಾಧಿಕಾರಿ ಧೋರಣೆಯಿಂದ ಬೇಸತ್ತು ಇಂದು ಜಿಲ್ಲಾ ಗುತ್ತಿಗೆದಾರ ಸಂಘದಿಂದ ರಾಜ್ಯ ಸರ್ಕಾರಕ್ಕೆ ಮತ್ತು ಜಿಲ್ಲಾ ಮಂತ್ರಿಗಳಿಗೆ ಮನವಿ ಮಾಡಿಕೊಳ್ಳುತ್ತಿದ್ದೇವೆ. ಶೀಘ್ರವಾಗಿ ಪ್ಯಾಕೇಜ್ ಟೆಂಡರನ್ನು ನಿಲ್ಲಿಸಬೇಕು. ಕೊಪ್ಪಳದ ಲ್ಯಾಂಡ್ ಆರ್ಮಿ ಮತ್ತು ನಿರ್ಮಿತಿ ಕೇಂದ್ರ ಇತರ ಸಂಸ್ಥೆಗಳಿಗೆ ನೀಡುವ ಕೆಲಸಗಳನ್ನು ನಿಲ್ಲಿಸಬೇಕು. ಇದರಿಂದ ಗುತ್ತಿಗೆದಾರರಿಗೆ ಬಹಳಷ್ಟು, ಅಕ್ರಮ ಅವ್ಯವಹಾರ ವಾಗುತ್ತದೆ. ಇದರಿಂದ ನಮಗೆ ಅನ್ಯಾಯವಾಗುತ್ತಿದೆ. ಎಂದು ಆರೋಪಿಸಿದರು.

ಮುಂದುವರೆದು ಮಾತಾಡಿದ ಸುರೇಶ್ ಭೂಮರೆಡ್ಡಿ ರಾಜ್ಯಮಟ್ಟದ ಮತ್ತು ಜಿಲ್ಲೆಯ ಗುತ್ತಿಗೆದಾರರ ಹೆಸರಿನಲ್ಲಿ ಸ್ಥಳೀಯ ರಾಜಕಾರಣಿಗಳು, ತಮ್ಮ ಹಿಂಬಾಲಕರಿಗೆ ಕೆಲಸವನ್ನು ಕೊಡುತ್ತಿದ್ದು. ಇದರಿಂದ ಕೊಪ್ಪಳ ಜಿಲ್ಲೆಯಲ್ಲಿ ಕಳಪೆ ಕಾಮಗಾರಿಗೆ ದಾರಿ ಮಾಡಿಕೊಟ್ಟಂತಾಗಿದೆ. ಸ್ಥಳೀಯ ಮತ್ತು ಲೈಸೆನ್ಸ್ ಹೊಂದಿದ ಗುತ್ತಿಗೆದಾರರಿಗೆ ನಷ್ಟವಾಗುತ್ತಿದೆ. ಇಂಥ ಹಲವಾರು ಸಮಸ್ಯೆಗಳನ್ನು ಸಾಕಷ್ಟು ಇದ್ದು. ರಾಜ್ಯ ಸರ್ಕಾರ ಶೀಘ್ರವಾಗಿ ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಲ್ಲಿ. 13/10/ 2025 ರಂದು ಕೊಪ್ಪಳ ಜಿಲ್ಲೆ ಎಲ್ಲಾ ಗುತ್ತಿಗೆದಾರರು ಸೇರಿ ಎಲ್ಲ ಕಾಮಗಾರಿಗಳನ್ನು ನಿಲ್ಲಿಸುವ ತೀರ್ಮಾನಕ್ಕೆ ಬರುತ್ತೇವೆ. ಕೊಪ್ಪಳ ಜಿಲ್ಲೆಯಲ್ಲಿ ಕನಿಷ್ಠ 400 ಜನ ಗುತ್ತಿಗೆದಾರರು ಇದ್ದು. ಇವರಲ್ಲಿ ಕೇವಲ 20, 30, ಕೆಲಸಗಾರರಿಗೆ ಮಾತ್ರ ಕೆಲಸ ಇದೆ. ಉಳಿದವರಿಗೆ ಕೆಲಸವಿಲ್ಲದೆ ಮತ್ತು ಮಾಡಿದ ಕಾಮಗಾರಿಗೆ ಬಿಲ್ ಪಾವತಿ ಯಾಗದೆ ಕಷ್ಟವನ್ನು ಅನುಭವಿಸುತ್ತಿದ್ದಾರೆ. ಎಸ್‌ಸಿ,ಎಸ್ಟಿ, ಗುತ್ತಿಗೆದಾರರ ಮತ್ತು ಸಣ್ಣ ಹಾಗೂ ಮಧ್ಯಮ ಗುತ್ತಿಗೆದಾರರ ಹಿತ ದೃಷ್ಟಿಯಿಂದ ಮಾನ್ಯ ಮುಖ್ಯಮಂತ್ರಿ. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಮೇಲಾಧಿಕಾರಿಗಳು ನಮ್ಮ ನ್ಯಾಯಯುತವಾದ ಬೇಡಿಕೆಗಳಿಗೆ ಸ್ಪಂದಿಸಿ. ಜಿಲ್ಲೆಯ ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಟೆಂಡರ್ ಕರೆಯಲು ಒತ್ತಾಯಿಸಿದರು.ಸುದ್ದಿ ಗೋಷ್ಠಿಯಲ್ಲಿ,ಒಟ್ಟು14.ಬೇಡಿಕೆಗಳನ್ನು ಮುಂದಿಟ್ಟು ಶೀಘ್ರವಾಗಿ ಪರಿಹಾರಕ್ಕಾಗಿ ಒತ್ತಾಯಿಸಿದರು,ಇಲ್ಲದೆ ಹೋದರೆ ಉಗ್ರವಾದ ಹೋರಾಟ ಮಾಡಬೇಕಾಗುತ್ತದೆ ಎಂದು ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳನ್ನು ತಮ್ಮ ನ್ಯಾಯಕ್ಕಾಗಿ ಆಗ್ರಹಿಸಿದರು.

ಈ ಸಂಧರ್ಭದಲ್ಲಿ ಗುತ್ತಿಗೆದಾರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದೇವಪ್ಪ ಅರಕೇರಿ, ಆರ್. ರಾಜಶೇಖರ್,ಎಸ್ಸಿ,ಎಸ್‌ಟಿ, ಗುತ್ತಿಗೆದಾರ್ ಸಂಘದ ಜಿಲ್ಲಾ ಅಧ್ಯಕ್ಷ ಹನುಮೇಶ ಕಡೆಮನಿ,ಗುತ್ತಿಗೆದಾರರಾದ ಶುಕ್ರಾಜ್ ಹಾಳಕೇರಿ,ಯಮನೂರಪ್ಪ ನಡೂಲಮನಿ,ಎಲ್,ಎಂ,ಮಲ್ಲಯ್ಯ, ಸಿ ವಿ ಹಳ್ಳಿ, ಕೃಷ್ಣ ಇಟ್ಟಂಗಿ, ರವೀಂದ್ರನಂದವಾಡಗಿ,ಮತ್ತಿತರರು ಉಪಸ್ಥಿತರಿದ್ದರು.

# ದಸರಾ ಹಬ್ಬ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಅ.3: ತಾಲೂಕಿನ ಮುದನ್ನಾಳ ಗ್ರಾಮದಲ್ಲಿ ನಾಡ ಹಬ್ಬ ದಸರಾ ವಿಜಯದರ್ಶಮಿಯ ಪ್ರಯುಕ್ತ ಗ್ರಾಮದ ಮುಖಂಡರಾದ ವೀರಶೆಟ್ಟಿ ಮಾನಕಾರ್ ಇವರ ನೇತೃತ್ವದಲ್ಲಿ ಗ್ರಾಮದ ಲಕ್ಷ್ಮಿ ದೇವಸ್ಥಾನದಿಂದ ಬೃಹತ್ ಮೆರವಣಿಗೆಯನ್ನು ಪಾಂಡುರಂಗ ದೇವಸ್ಥಾನದ ವರೆಗೆ ಅದ್ದುರಿಯಾಗಿ ಜರುಗಿತ್ತು. ನಂತರ ಬನ್ನಿ ಬಂಗಾರ ಪರಸ್ಪರ ಒಬ್ಬರದೊಬ್ಬರು ಹಂಚಿ ದಸರಾ ಹಬ್ಬವನ್ನು ವೈಭವದಿಂದ ಆಚರಿಸಿದರು. ಈ ಸಂಧರ್ಭದಲ್ಲಿ ಸುನೀಲ ಬಿರಾದಾರ್, ರಾಜು ಪಾಟೀಲ್, ಅಶೋಕ ಬಿರಾದಾರ್, ಶಾಂತಪ್ಪ ಬದಗಿ, ವೈಜಿನಾಥ ಬದಗಿ ಸೇರಿದಂತೆ ಗ್ರಾಮದ ಹಿರಿಯರು,

# ಸಿಎಂ ಕಾರ್ಯಕ್ರಮಕ್ಕೆ ಬಂಜಾರ ಸಮುದಾಯದ ಬಹಿಷ್ಕಾರ: ಅ. 6 ರಂದು ಸಿಎಂಗೆ ಘೇರಾವ್



ಮಲ್ಲಮ್ಮ ನುಡಿವಾರ್ತೆ

ಕುಕನೂರ :ಅ.3: ಕೊಪ್ಪಳದಲ್ಲಿ ಇದೇ ಅಕ್ಟೋಬರ್ 6 ರಂದು ನಡೆಯಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ಸರಕಾರಿ ಕಾರ್ಯಕ್ರಮಕ್ಕೆ ಬಂಜಾರ ಸಮುದಾಯದ ಜನರು ಸಂಪೂರ್ಣವಾಗಿ ಬಹಿಷ್ಕಾರ ಹಾಕುತ್ತಿದ್ದು, ಅಂದೇ ಮುಖ್ಯಮಂತ್ರಿಗಳನ್ನು ಘೇರಾವ್ ಹಾಕುವುದರ ಮೂಲಕ ಸರ್ಕಾರಕ್ಕೆ ಬಿಸಿ ಮುಟ್ಟಿಸಲಿದ್ದೇವೆ' ಎಂದು ಗೋರ ಸೇನಾ ಕರ್ನಾಟಕ, ರಾಜ್ಯ ಪ್ರಧಾನ ಕಾರ್ಯದರ್ಶಿ ಸುರೇಶ ಬಳೂಟಗಿ ತಿಳಿಸಿದರು.

ಇಂದು ಪಟ್ಟಣದ ನಿರೀಕ್ಷಣಾ ಮಂದಿರದಲ್ಲಿ ಗೋರ ಸೇನಾ ಸಮಿತಿ ಹಾಗೂ ಬಂಜಾರ ಸಮುದಾಯದ ಸರ್ವ ನಾಗರಿಕರು ಪತ್ರಿಕಾಗೋಷ್ಠಿ ನಡೆಸಿದರು. ಈ ಬಗ್ಗೆ ಮಾತನಾಡಿದ ಸುರೇಶ್ ಬಳೂಟಗಿ, 'ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ವಿಚಾರದಲ್ಲಿ ನಮ್ಮ ಸಮುದಾಯಗಳಿಗೆ ಭಾರಿ ಅನ್ಯಾಯವಾಗಿದ್ದು, ಹೀಗಾಗಿ ಕೊಪ್ಪಳದಲ್ಲಿ ನಡೆಯಲಿರುವ ಮುಖ್ಯಮಂತ್ರಿಗಳ ಸರಕಾರಿ ಕಾರ್ಯಕ್ರಮಕ್ಕೆ ಬಂಜಾರ ಸಮುದಾಯದ ಜನರು ಸಂಪೂರ್ಣವಾಗಿ ಬಹಿಷ್ಕಾರ ಹಾಕುತ್ತಿದ್ದು, ನಾವು ಯಾರೂ ಕೂಡ ಕಾರ್ಯಕ್ರಮದಲ್ಲಿ ಭಾಗವಹಿಸದೆ ಬಹಿಷ್ಕಾರ ಹಾಕುತ್ತಿದ್ದೇವೆ, ಅಲ್ಲದೆ ನಾವು ಇದೇ ಸಂಧರ್ಭದಲ್ಲಿ ಅವರನ್ನು ಘೇರಾವ ಹಾಕುವುದರ ಮೂಲಕ ನಮಗೆ ಆಗಿರುವ ಅನ್ಯಾಯವನ್ನು ಸರಿಪಡಿಸಬೇಕು ಎಂದು ಆಗ್ರಹಿಸಲಿದ್ದೇವೆ ಎಂದರು.

'ಇಷ್ಟು ದಿನ ನಾವು ಶಾಂತಿಯುತವಾಗಿ ಹೋರಾಟ ಮಾಡುತ್ತಿದ್ದೇವೆ, ಆದರೆ ಸರ್ಕಾರದಿಂದ ಯಾವುದೇ ಸ್ಪಂದನೆ ಇಲ್ಲ, ಇನ್ಮೇಲೆ ನಮ್ಮ ಹೋರಾಟದ ಸ್ವರೂಪ ಕಾಂತ್ರಿ ಹಾಗೂ ಉಗ್ರ ರೂಪದಲ್ಲಿ ಇರುತ್ತದೆ. ಇದರ ಜೊತೆಗೆ ಇದೇ ಅಕ್ಟೋಬರ್ 17 ರಂದು ಬಂಜಾರ ಸಮಾಜದ ನಾಯಕರಾದ ರವಿಕಾಂತ ಅಂಗಡಿ ನೇತೃತ್ವದಲ್ಲಿ ಗದಗದಲ್ಲಿ ನಡೆಯಲಿರುವ ಅನಿರ್ದಿಷ್ಟಾವಧಿ ಹೋರಾಟದಲ್ಲಿ ಕರ್ನಾಟಕ ರಾಜ್ಯದ ಎಲ್ಲ ಜಿಲ್ಲೆಗಳಿಂದ ಸಮಾಜ ಬಾಂಧವರು ಭಾಗವಹಿಸಿ ಸರ್ಕಾರದ ಕಣ್ತೆರೆಸಬೇಕೆಂದು ಮನವಿ ಮಾಡಲಾಯಿತು.' ಎಂದು ಸಮಾಜಕ್ಕೆ ಕರೆ ನೀಡಿದರು.

# ದನ-ಕರು ರಸ್ತೆ ಮೇಲೆ ಬಿಡದಂತೆ ಮುನ್ನೆಚ್ಚರಿಕೆ ವಹಿಸಲು ಮಾಲೀಕರಿಗೆ ಕರೆ

(ಮಲ್ಲಮ್ಮ ನುಡಿ ವಾರ್ತೆ)



ಚಿಟಗುಪ್ಪ:ಅ.3: ಪಟ್ಟಣದ ಮುಖ್ಯ ರಸ್ತೆಗಳಲ್ಲಿ ಕುಳಿತುಕೊಂಡಿರುವ ದನ-ಕರುಗಳು ರಸ್ತೆಗಳ ಮೇಲೆ ಸಂಚರಿಸುತ್ತಿರುವ ಸಾರ್ವಜನಿಕರಿಗೆ ಮತ್ತು ವಾಹನ ಚಾಲಕರಿಗೆ ಅಡೆ-ತಡೆ ಉಂಟು ಮಾಡುತ್ತಿರುವುದರಿಂದ ಸಂಬಂಧಿಸಿದ ಮಾಲೀಕರು ತಮ್ಮ ದನ-ಕರುಗಳನ್ನು ರಸ್ತೆಗಳ ಮೇಲೆ ಬಿಡದಂತೆ ಮುನ್ನೆಚ್ಚರಿಕೆ ವಹಿಸಲು ತಿಳಿಸಿದ್ದಾರೆ. ಒಂದು ವೇಳೆ ದನ-ಕರುಗಳು ರಸ್ತೆಗಳ ಮೇಲೆ ಕಂಡು ಬಂದಲ್ಲಿ ಅವುಗಳನ್ನು ವಶಪಡಿಸಿಕೊಂಡು ಗೋಶಾಲೆಗೆ ಕಳುಹಿಸಿಕೊಡಲಾಗುವುದೆಂದು ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ ಬಾಬಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಕ್ಫ್ ಕಾಯಿದೆ 2025 ರದ್ದು :ಐ ಲವ್ ಮಹಮ್ಮದ್ ಘೋಷಣೆ ಕೂಗಿ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು :ಅ.3:ಪಟ್ಟಣದ ಗಡಿಯಾರ ಚೌಕದಲ್ಲಿ ಶುಕ್ರವಾರ ಮುಸ್ಲಿಂ ಸಮುದಾಯ ಹಾಗೂ ಮೌಲಾನರು ಜಮಾಯಿಸಿ, ಉತ್ತರ ಪ್ರದೇಶದಲ್ಲಿ "ಐ ಲವ್ ಮಹಮ್ಮದ್" ಎಂದು ಘೋಷಣೆ ಕೂಗಿದ ಮೌಲಾನರು ಮತ್ತು ಮುಸ್ಲಿಂ ಸಮಾಜದವರನ್ನು ಬಂಧಿಸಿ ಅವರ ಮೇಲೆಯೇ ಸುಳ್ಳು ದೇಶದ್ರೋಹ ಕೇಸು ದಾಖಲಿಸಿರುವುದನ್ನು ಖಂಡಿಸಿದರು. ಪ್ರತಿಭಟನಾಕಾರರು ಕೈಯಲ್ಲಿ "ಐ ಲವ್ ಮಹಮ್ಮದ್" ಎಂಬ ಬರೆಹ ಹೊಂದಿದ ಪೋಸ್ಟರ್‌ಗಳನ್ನು ಹಿಡಿದು, "ಧರ್ಮ ವಿರೋಧಿ ಕಾಯಿದೆಗಳನ್ನು ರದ್ದುಗೊಳಿಸಬೇಕು, ನಿರಪರಾಧಿಗಳನ್ನು ಕೂಡಲೇ ಬಿಡುಗಡೆ ಮಾಡಬೇಕು" ಎಂದು ಒತ್ತಾಯಿಸಿದರು. ಮೌಲಾನರು ಮಾತನಾಡಿ, "ಉತ್ತರ ಪ್ರದೇಶ ಸರ್ಕಾರವು ವರ್ಕ್ಸ್ ಕಾಯಿದೆ 2025 ಅನ್ನು ಜಾರಿಗೆ ತಂದಿರುವುದು ಮುಸ್ಲಿಂ ಸಮುದಾಯದ ಹಕ್ಕುಗಳಿಗೆ ಧಕ್ಕೆ ತಂದಿದೆ. ನಿರಪರಾಧ ಮೌಲಾನರು ಹಾಗೂ ಸಮುದಾಯದವರ ಮೇಲೆ ದೇಶದ್ರೋಹದ ಕೇಸು ಹಾಕಿರುವುದು ಅಸಹ್ಯಕರ. ಸರ್ಕಾರವು ಧರ್ಮೀಯ ಹಕ್ಕುಗಳನ್ನು ಕಸಿದುಕೊಳ್ಳುವ ಕ್ರಮ ತಕ್ಷಣ ನಿಲ್ಲಿಸಬೇಕು" ಎಂದರು.

ಈ ಪ್ರತಿಭಟನೆಯಲ್ಲಿ ನೂರಾರು ಮುಸ್ಲಿಂ ಸಮಾಜದವರು ಭಾಗವಹಿಸಿ ಘೋಷಣೆ ಕೂಗಿದರು. ಸರ್ಕಾರಕ್ಕೆ ಮನವಿ ಸಲ್ಲಿಸಿ, "ವರ್ಕ್ಸ್ ಕಾಯಿದೆ 2025 ಅನ್ನು ರದ್ದು ಮಾಡಿ, ಬಂಧಿತರನ್ನು ಬಿಡುಗಡೆ ಮಾಡದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ತೀವ್ರಗೊಳಿಸಲಾಗುವುದು" ಎಂದು ಎಚ್ಚರಿಸಿದರು.

# ಯೂನಿಯನ್ ನಿರ್ದೇಶಕ ಬಸವರಾಜಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಅ.3: ಮುದ್ದೇಬಿಹಾಳ ತಾಲೂಕಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಂದ ವಿಜಯಪುರ ಜಿಲ್ಲಾ ಯೂನಿಯನ್‌ಗೆ ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾದ ತಾಳಿಕೋಟಿ ಪಿಕೆಪಿಎಸ್ ನಿರ್ದೇಶಕ ಬಸವರಾಜ ಮಹದೇವಪ್ಪ ಕುಂಬಾರ ಇವರನ್ನು ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ, ಮುದ್ದೇಬಿಹಾಳ ಮತಕ್ಷೇತ್ರ ಶಾಸಕ ಸಿ.ಎಸ್.ನಾಡಗೌಡ(ಅಪ್ಪಾಜಿ) ಅವರು ಸನ್ಮಾನಿಸಿ ಅಭಿನಂದಿಸಿದರು.ಗುರುವಾರ ಮುದ್ದೇಬಿಹಾಳ ದಲ್ಲಿರುವ ತಮ್ಮ ಗೃಹ ಕಚೇರಿಯಲ್ಲಿ ವಿಜಯಪುರ ಯೂನಿಯನ್ ನೂತನ ನಿರ್ದೇಶಕ ಬಸವರಾಜ್ ಕುಂಬಾರ ಅವರಿಗೆ ಈ ಸನ್ಮಾನ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಸಹಕಾರಿ ಸಂಘಗಳು ಸೇವಾ ಸಂಸ್ಥೆಗಳಾಗಿವೆ ಇಡೀ ತಾಲೂಕಿನ ಸಂಘದ ಸದಸ್ಯರು ನಿಮ್ಮ ಮೇಲೆ ವಿಶ್ವಾಸವಿಟ್ಟು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ ಅವರ ನಿರೀಕ್ಷೆ ಹುಸಿಯಾಗದಂತೆ ನೋಡಿಕೊಂಡು ಕ್ರಿಯಾಶೀಲತೆಯೊಂದಿಗೆ ಕೆಲಸ ಮಾಡಲು ಪ್ರಯತ್ನಿಸಿ ಎಂದು ಸಲಹೆ ನೀಡಿದರು. ಈ ಸಮಯದಲ್ಲಿ ಗಣ್ಯರಾದ ಬಿ.ಕೆ.ಬಿರಾದಾರ, ಮುತ್ತಣ್ಣ ಮುತ್ತಣ್ಣವರ, ಸಂಗನಗೌಡ ಅಸ್ಕಿ(ಹಿರೂರ), ಗುರುಲಿಂಗಪ್ಪ ಕಶಟ್ಟಿ, ಬಸವರಾಜ್ ಸಜ್ಜನ, ನಾಗರಾಜ ಗೊಟಗುಣಕಿ ಇದ್ದರು.

## ಅನ್ನ ದಾಸೋಹಕ್ಕೆ ಶಾಸಕ ಬೆಲ್ದಾಳೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಅ.3:ತಾಲೂಕಿನ ನಿರ್ಣಾ ಗ್ರಾಮದ ಸ್ವಾಮಿ ವಿವೇಕಾನಂದ ಗ್ರಾಮೀಣ ಅಭಿವೃದ್ಧಿ ಟ್ರಸ್ಟ್ ವತಿಯಿಂದ ತುಳಜಾಪುರಕ್ಕೆ ಹೋಗುತ್ತಿರುವ ಪಾದಯಾತ್ರಿಗಳಿಗೆ ಏರ್ಪಡಿಸಿದ್ದ ಅನ್ನ ದಾಸೋಹಕ್ಕೆ ಬೀದರ್ ದಕ್ಷಿಣ ಮತ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಚಾಲನೆ ನೀಡಿ, ಮಾತನಾಡಿದ ಅವರು, ಸ್ವಾಮಿ ವಿವೇಕಾನಂದ ಗ್ರಾಮೀಣ ಅಭಿವೃದ್ಧಿ ಟ್ರಸ್ಟ್ ವತಿಯಿಂದ ತುಳಜಾಪುರಕ್ಕೆ ಹೋಗುತ್ತಿರುವ ಪಾದಯಾತ್ರಿಗಳಿಗೆ ಡಾ. ರವಿ ಸ್ವಾಮಿ ನಿರ್ಣಾ ಇವರ ನೇತೃತ್ವದಲ್ಲಿ ಸತತವಾಗಿ 14 ವರ್ಷದಿಂದ ಅನ್ನ ದಾಸೋಹ ಏರ್ಪಡಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ನುಡಿದರು. ಈ ಟ್ರಸ್ಟಿನ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಸರ್ವ ಸದಸ್ಯರು ಉಪಸ್ಥಿತರಿದ್ದರು.

# ಕಾನೂನು ಸುವ್ಯವಸ್ಥೆ, ಟ್ರಾಫಿಕ್ ನಿರ್ವಹಣೆಯಲ್ಲಿ

## ಸಮಸ್ಯೆಗಳಾಗದಂತೆ ಮುಂಜಾಗ್ರತೆ ವಹಿಸಿ: ಡಾ. ರಾಮ್ ಎಲ್. ಅರಸಿದ್ದಿ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.3: ಅಕ್ಟೋಬರ್ 6 ರಂದು ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಕೊಪ್ಪಳ ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಹೆಚ್ಚು ಜನರು ಸೇರುವುದರಿಂದ ಕಾನೂನು ಸುವ್ಯವಸ್ಥೆ ಹಾಗೂ ಟ್ರಾಫಿಕ್ ನಿರ್ವಹಣೆಯಲ್ಲಿ ಯಾವುದೇ ಸಮಸ್ಯೆಗಳಾಗದಂತೆ ಪೊಲೀಸ್ ಅಧಿಕಾರಿಗಳು ಮುಂಜಾಗ್ರತೆ ಕ್ರಮ ವಹಿಸಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಹೇಳಿದರು.

ಅವರು ಮಂಗಳವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅ.6 ರಂದು ಮಾನ್ಯ ಮುಖ್ಯಮಂತ್ರಿಗಳ ಕೊಪ್ಪಳ ಜಿಲ್ಲಾ ಪ್ರವಾಸದ ಹಿನ್ನೆಲೆ ಪೊಲೀಸ್ ಇಲಾಖೆ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಧಿಕಾರಿಗಳಿಗೆ ನೀಡಿದ ಕೆಲಸವನ್ನು ಮುಂದೆ ನಿಂತು ಜವಾಬ್ದಾರಿಯಿಂದ ಮಾಡಬೇಕು. ನಮ್ಮ ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿ ಸೇರಿದಂತೆ ಇತರೆ ಬೇರೆ ಬೇರೆ ಜಿಲ್ಲೆಗಳಿಂದ 2500 ಪೊಲೀಸ್ ಸಿಬ್ಬಂದಿ ಬರುತ್ತಾರೆ. ಅವರಿಗೆ ಉಳಿದುಕೊಳ್ಳಲು ಸಮುದಾಯ ಭವನ ಮತ್ತು ಕಲ್ಯಾಣ ಮಂಟಪಗಳಲ್ಲಿ ವ್ಯವಸ್ಥೆ ಮಾಡಬೇಕು. ಅಧಿಕಾರಿ ಮತ್ತು ಸಿಬ್ಬಂದಿ ತಮ್ಮ ವಾಹನಗಳ ಪಾಸ್‌ಗಳನ್ನು ಪಡೆಯಲು ಗುರುತಿನ ಚೀಟಿಯೊಂದಿಗೆ ಫೋಟೋಗಳನ್ನು ಕೊಡಬೇಕು ಎಂದರು.

ದೊಡ್ಡ ಕಾರ್ಯಕ್ರಮ ಆಗಿರುವುದರಿಂದ ಎಲ್ಲರೂ ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಕೊಪ್ಪಳ ಕೇಂದ್ರ ಬಸ್ ನಿಲ್ದಾಣದಿಂದ ಕಾರ್ಯಕ್ರಮದ ಮುಖ್ಯ ವೇದಿಕೆವರೆಗಿನ ರಸ್ತೆಯ ಪಕ್ಕದಲ್ಲಿ ಸಾರ್ವಜನಿಕರು ವಾಹನಗಳನ್ನು ಪಾರ್ಕಿಂಗ್ ಮಾಡಬಾರದು. ಅಧಿಕಾರಿಗಳ ವಾಹನಗಳಿದ್ದರೆ ಪಾಸ್‌ಗಳನ್ನು ಪಡೆಯಬೇಕು. ಜೆಸ್ಕಾಂ, ನಗರಸಭೆ, ಪೊಲೀಸ್ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ಕರ್ತವ್ಯಕ್ಕೆ ಯಾವುದೇ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕೆಂದು ಹೇಳಿದರು.



ಸಭೆಯಲ್ಲಿ ಸಹಾಯಕ ಆಯುಕ್ತರಾದ ಕ್ಯಾ.ಮಹೇಶ್ ಮಾಲಗಿತ್ತಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತಕುಮಾರ್, ಡಿವೈಎಸ್‌ಪಿ ಮುತ್ತಣ್ಣ ಸವರಗೋಳ, ಗಂಗಾವತಿ ಡಿವೈಎಸ್‌ಪಿ ಸಿದ್ದಲಿಂಗಪ್ಪಗೌಡ ಪಾಟೀಲ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರ, ಕಿಮ್ಸ್ ನಿರ್ದೇಶಕ ವಿಜಯನಾಥ ಇಟಗಿ, ಜಿಲ್ಲಾ ವಾರ್ತಾಧಿಕಾರಿ ಡಾ.ಸುರೇಶ ಜಿ., ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಘಟಕದ ಅಧ್ಯಕ್ಷರಾದ ನಾಗರಾಜ ಜುಮ್ಮನ್ನವರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಗಮೇಶ ಎನ್ ಜವಾದಿ ಲಿಂಗಾಯತ ಧರ್ಮದ ನಿಷ್ಠಾವಂತ ಹೋರಾಟಗಾರ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಅ 3: ಲಿಂಗಾಯತ ಧರ್ಮದ ನಿಷ್ಠಾವಂತ ಹೋರಾಟಗಾರ, ಬಸವ ತತ್ವವನ್ನು ಮನೆ ಮನಗಳಿಗೆ ಮುಟ್ಟಿಸುವ ನಿಟ್ಟಿನಲ್ಲಿ ಹಗಲಿರುಳೆನ್ನದೆ ದುಡಿಯುತ್ತಿರುವ ಯುವ ಶರಣ, ಪ್ರಗತಿಪರ ಚಿಂತಕರು, ಪರಿಸರ ಸಂರಕ್ಷಕರಾದ ಶರಣ ಸಂಗಮೇಶ ಎನ್ ಜವಾದಿ ರವರು ರಚಿಸಿದ ವೈಚಾರಿಕ ಚಿಂತಕರು ಕೃತಿ ನಾನು ಬಿಡುಗಡೆ ಮಾಡಿದ್ದು ಬಹಳಷ್ಟು ಸಂತಸ ತಂದಿದೆ ಎಂದು ಹಿರಿಯ ಸಾಹಿತಿ ಸೋಮನಾಥ ಯಾಳವಾರ ಹೇಳಿದರು.



ನಗರದ ಹರಳಯ್ಯ ಗವಿಯ ಆವರಣದಲ್ಲಿ ಜರುಗಿದ ಶರಣ ವಿಜಯೋತ್ಸವ ನಾಡಹಬ್ಬ, ಹುತಾತ್ಮ ದಿನಾಚರಣೆ ಸಮಾವೇಶದಲ್ಲಿ ' ವೈಚಾರಿಕ ಚಿಂತಕರು ' ಕೃತಿ ಬಿಡುಗಡೆಗೊಳಿಸಿ ಮಾತನಾಡಿದ ಅವರು ಶರಣ ಸಾಹಿತ್ಯ ಸಂಸ್ಕೃತಿಗಾಗಿ ಕೆಲಸ ಮಾಡುತ್ತಿರುವ ಸಂಗಮೇಶ ಎನ್ ಜವಾದಿ ನಿಷ್ಠುರವಾದಿ ಲೇಖಕ, ಅನೇಕ ಸಮಾಜ ಮುಖಿ ಲೇಖನಗಳನ್ನು ಬರೆದಿದ್ದಾರೆ. ಸಮಾಜದ ಅಂಕು ಡೊಂಕುಗಳನ್ನು ತಿದ್ದುವ ಕಾರ್ಯ ನಿರಂತರವಾಗಿ ಮಾಡಿಕೊಂಡು ಬರುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಇವರ ಬಸವ ಕಾಯಕ ತತ್ವ

ನಿಸ್ವಾರ್ಥ ಸೇವೆ ಸರ್ವರಿಗೂ ಮಾದರಿಯಾಗಿದೆ ಎಂದರು.

ನೇತೃತ್ವ ವಹಿಸಿದ್ದ ಬಸವೇಶ್ವರ ಸೇವಾ ಟ್ರಸ್ಟ್ ಮುಖ್ಯಸ್ಥೆ ಶರಣೆ ಇಂದುಮತಿ ಗಾರಂಪಳ್ಳಿ ಮಾತಾಜಿ ಮಾತನಾಡಿ

ಸೇವೆಯೇ ಶ್ರೇಷ್ಠ ಜೀವನದ ದಾರಿಯಲ್ಲಿ ಸಾಗುತ್ತಿರುವ ನಾವು ಬಸವ ತತ್ವವನ್ನು ಜೀವನದಲ್ಲಿ ಅಳವಡಿಸಿಕೊಂಡು ಹೋಗುತ್ತಿದ್ದೇವೆ ಎಂದರು.

ಸಾನಿಧ್ಯವಹಿಸಿದ್ದ ಕಲ್ಯಾಣಮಾಹಾಮನೆ ಮಾಹಾಮಠ ಗುಣತೀರ್ಥವಾಡಿ ಪರಮ ಪೂಜ್ಯ ಶ್ರೀ ಬಸವಪ್ರಭು ಸ್ವಾಮಿಜಿ ಮಾತನಾಡಿ ಬಸವಾದಿ ಶರಣರ ಸಮತಾ ತತ್ವ ಮುಗಿಲೆತ್ತರಕ್ಕೆ ಹಾರಿಸುತ್ತಿರುವ ಅಕ್ಕಗಂಗಾಂಬಿಕಾ ತಾಯಿ ರವರ ಸೇವೆ ಅನನ್ಯ, ಬಸವ ತತ್ವ ಸೇವೆಗೆ ಎಂದೆಂದಿಗೂ ಸೋಲಾಗುವುದಿಲ್ಲ. ಯಾವಾಗಲೂ ಜಯವಾಗಲಿದೆ. ಒಂದೊಂದು ಗೋಷ್ಠಿಗಳು ಅರ್ಥಪೂರ್ಣವಾಗಿ ಸಾಗುತ್ತಿವೆ. ಬಸವಾದಿ

ಶರಣರ ಮೇಲೆ ಅನೇಕ ಗಂಭೀರ ಆರೋಪಗಳನ್ನು ಮಾಡಿದ ಅಂದಿನ ಕುತಂತ್ರಗಳು ಆದರೂ ಸಹ ಅವರ ಕಾರ್ಯ ಯಶಸ್ವಿಯಾಗಲಿಲ್ಲ. ಶರಣರು ಅಹಿಂಸಾ ಮಾರ್ಗವನ್ನು ಬೋಧಿಸಿದವರು.

ಬಸವಾದಿ ಪ್ರಮಥರು ಪ್ರಾಮಾಣಿಕವಾಗಿ ಮಾಡಿದ ನಿಸ್ವಾರ್ಥ ಸೇವೆ ಅಜರಾಮರವಾಗಿದೆ. ವಚನ ಸಾಹಿತ್ಯ ಸಂರಕ್ಷಣೆ ಮಾಡುವಲ್ಲಿ ಶರಣರ ತ್ಯಾಗ ಬಲಿದಾನ ಇಂದಿನ ಸಮಾಜ ಯಾವತ್ತೂ ಮರೆಯಬಾರದು. ಸಂಗಮೇಶ ಎನ್ ಜವಾದಿ ರವರು ರಚಿಸಿದ ವೈಚಾರಿಕ ಚಿಂತಕರು ಕೃತಿ ಅರ್ಥಪೂರ್ಣವಾಗಿ ಅಷ್ಟೇ ವೈಚಾರಿಕವಾಗಿ ಮೂಡಿ ಬಂದಿದೆ ಎಂದು ತಿಳಿಸಿದರು.

ದಿವ್ಯ ನೇತೃತ್ವ ವಹಿಸಿದ್ದ ಹರಳಯ್ಯ ಗವಿಯಲಿ ಪೂಜ್ಯಶ್ರೀ ಡಾ.ಗಂಗಾಂಬಿಕೆ ಅಕ್ಕನವರು ಮಾತನಾಡಿ ಪರಿಸರ ಸಂರಕ್ಷಕ, ಸಾಹಿತಿ, ಲೇಖಕ, ಪತ್ರಕರ್ತ, ಬಸವ ತತ್ವ ಪ್ರಚಾರಕ ಶರಣ ಸಂಗಮೇಶ ಎನ್ ಜವಾದಿ ರಚಿಸಿದ "ವೈಚಾರಿಕ ಚಿಂತಕರು" ಕೃತಿಯನ್ನು ಬಸವಾದಿ ಶರಣರ ಪವಿತ್ರ ಭೂಮಿ ಬಸವಕಲ್ಯಾಣದ ಹರಳಯ್ಯ ಗವಿಯ ಆವರಣದಲ್ಲಿ ಜರುಗುತ್ತಿರುವ ಶರಣ ವಿಜಯೋತ್ಸವ ನಾಡ ಹಬ್ಬ ಕಾರ್ಯಕ್ರಮದಲ್ಲಿ ಬಿಡುಗಡೆ ಆಗುತ್ತಿರುವುದು ಸಂತಸದ ವಿಷಯವಾಗಿದೆ.

ಸಮಾಜದ ಅನೇಕ ವಿಷಯನ್ನೊಳಗೊಂಡ ಆಯ್ದ ಲೇಖನಗಳ ಗೊಚ್ಚವೇ ಈ ಕೃತಿಯಾಗಿದೆ. ಕೃತಿಯಲ್ಲಿ ಸಮಾಜ ಮುಖಿ ಚಿಂತನೆ, ಕಲ್ಯಾಣ ಕ್ಷೇತ್ರ, ರೈತರ ಸಮಸ್ಯೆ ಮತ್ತು ಪರಿಹಾರ, ವೈಚಾರಿಕ ಚಿಂತಕರ ಹಾಗೂ ಸಾಹಿತಿಗಳ ಕಿರು ಪರಿಚಯ ಭಾವದಿಂದ ಕೂಡಿದ ಕೃತಿ ಇದಾಗಿದ್ದು. ಎಲ್ಲರೂ ಕೃತಿಯನ್ನು ಕೊಂಡು ಓದಲೇಬೇಕಾದ ಉತ್ತಮ ಕೃತಿ ಇದಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಹಾರಾಷ್ಟ್ರ ರಾಜ್ಯದ ಬಸವ ತತ್ವ ಅನುಯಾಯಿ ಅವಿನಾಶ್ ಭೋಷೆಕರ್, ನಾಗಯ್ಯಾ ಸ್ವಾಮಿ, ವೈಜನಾಥ ಕಾಮಶೆಟ್ಟಿ, ಶಂಕ್ರಪ್ಪ ಪಾಟೀಲ, ಜಗನ್ನಾಥ ರಾಚೋಟಿ, ದತ್ತಾತ್ರೇಯ ಬಾಂದೇಕರ್, ಶರಣ ಶಿವರಾಜ್ ಶಾಶೆಟ್ಟಿ, ರವಿ ಕೋಳಕೂರು, ಚಂದ್ರಶೇಖರ ತಂಗಾ, ದೇವಕಿ ಪಾಟೀಲ, ಬಸವರಾಜ ಭಾಲ್ಕೆಕರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಕನ್ನಡ ಸರ್ಕಾರಿ ಶಾಲೆಗೆ ತಮಿಳಿಗನಿಂದ 5000 ಸಾವಿರ ದೇಣಿಗೆ



ಮಲ್ಲಮ್ಮ ನುಡಿವಾರ್ತೆ

ಕುಕನೂರ:ಅ.3:ಕನ್ನಡ ಮಾಧ್ಯಮ ಶಾಲೆಯಂದು ಕಾರ್ಯನಿರ್ವಹಿಸುತ್ತಿರುವ ಕಾರ್ಯವೈಕರಿಗೆ ಮೆಚ್ಚಿ ತಮಿಳಿಗರು ಒಬ್ಬರು ದೇಣಿಗೆ ನೀಡಿ ಮೆಚ್ಚುಗೆ ವ್ಯಕ್ತಪಡಿಸಿದ ಘಟನೆಗೆ ಸರ್ಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆ ಪಾತ್ರವಾಗಿದೆ.

ತಾಲೂಕಿನ ಮಂಡಲಗಿರಿ ಗ್ರಾಮದ ಸರಕಾರಿ ಹಿರಿಯ ಮಾದರಿಯ ಪ್ರಾಥಮಿಕ ಶಾಲೆ, ಉತ್ತಮ ರೀತಿಯಲ್ಲಿ ಕಾರ್ಯ ಇದನ್ನೆಲ್ಲ ಗಮನಿಸಿದ ತಮಿಳುನಾಡು ಮೂಲದ ನಾಮಕ್ಕಲ್ ಜಿಲ್ಲಾ ತಿರುಚನಗುಡ ಗ್ರಾಮದ ಲಾರಿ ಕ್ಯಾಬಿನ್ ಕೆಲಸಗಾರರಾದ ರಾಜಣ್ಣಟಿ ಎಂಬುವರು ಮಂಡಲಗಿರಿ ಶಾಲೆಯ ಶಾಲಾ ಸುಧಾರಣಾ ಸಮಿತಿಯ ಅಧ್ಯಕ್ಷರನ್ನು ಕರೆದು ತಮ್ಮ ಅಳಿಲು ಸೇವೆಯನ್ನು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಶಾಲೆಯ ಅಭಿವೃದ್ಧಿಗೆ ಬಳಸಿಕೊಳ್ಳಬೇಕು ಎಂದು ಹೇಳಿ 5000/–ರೂಪಾಯಿಗಳ ದೇಣಿಗೆ ನೀಡಿರುತ್ತಾರೆ.

# ರಸ್ತೆ ಅಪಘಾತಗಳನ್ನು ಶೂನ್ಯಕ್ಕೆ ತರಲು ಕ್ರಮ: ಸಂಸದ ಕೆ.ರಾಜಶೇಖರ ಹಿಟ್ನಾಳ




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಅ.3:ಕೊಪ್ಪಳ ಜಿಲ್ಲೆಯ ಅಸುರಕ್ಷಿತ ರಸ್ತೆ ಕ್ರಾಸ್‌ಗಳಲ್ಲಿ ಫ್ಲೈಓರ್ ನಿರ್ಮಾಣ ಮತ್ತು ವಾಹನಗಳ ಸಂಚಾರದ ಮೇಲೆ ನಿಗಾವಹಿಸಲು ಅಪಘಾತ ವಲಯಗಳಲ್ಲಿ ಸಿಸಿ ಟಿವಿ ಅಳವಡಿಸಿ ರಸ್ತೆ ಅಪಘಾತಗಳನ್ನು ಶೂನ್ಯಕ್ಕೆ ತರಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು ಅವರು ಶುಕ್ರವಾರ ಕೊಪ್ಪಳ ತಾಲ್ಲೂಕಿನ ಹೊಸಳ್ಳಿ ಮತ್ತು ಹಿಟ್ನಾಳ್ ಮಧ್ಯ ಭಾಗದಲ್ಲಿರುವ ರಾಷ್ಟ್ರೀಯ ಹೆದ್ದಾರಿ–50ರ ಮೇಲ್ಸೇತುವೆ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಎನ್.ಹೆಚ್–50 ಮತ್ತು 63 ರಸ್ತೆಗಳಲ್ಲಿ ಬಹಳಷ್ಟು ವಾಹನಗಳ ಸಂಚಾರ ದಟ್ಟನೆ ಹೆಚ್ಚಾಗಿದೆ. ಈ ಎರಡು ರಸ್ತೆಗಳ ಮಧ್ಯದಲ್ಲಿ ಸುಮಾರು 15 ಕಿಮೀ ಈ ಮಾರ್ಗದಲ್ಲಿ ಒಂದು ವರ್ಷಕ್ಕೆ ಸುಮಾರು 190 ರಸ್ತೆ ಅಪಘಾತಗಳು ಸಂಭವಿಸುತ್ತಿದ್ದು, ಇದರಲ್ಲಿ 50 ರಿಂದ 60 ಜನ ಸಾವನ್ನಪ್ಪುತ್ತಿದ್ದರು. ಇದನ್ನು ಅರಿತ ಹಿಂದಿನ ಸಂಸದರಾದ ಕರಡಿ ಸಂಗಣ್ಣನವರು 120 ಕೋಟಿ ರೂ. ಗಳನ್ನು ಮಂಜೂರು ಮಾಡಿಸಿ, ನಿಂಗಾಪುರ, ಹೊಸಳ್ಳಿ, ಶಹಪುರ ಹಾಗೂ ಮೆಥಗಲ್ ಸೇರಿ ಒಟ್ಟು ಐದು ಕಡೆಗಳಲ್ಲಿ ಮೇಲ್ಸೇತುವೆ ನಿರ್ಮಾಣಕ್ಕಾಗಿ ಟೆಂಡರ್ ಕ–ರೆದು ಅಡಿಗಲ್ಲು ಹಾಕಿದ್ದರು. ಅವುಗಳನ್ನು ಒಂದೊಂದಾಗಿ ಪೂರ್ಣಗೊಳಿಸಲಾಗುವುದು. ರಸ್ತೆ ಅಪಘಾತಗಳ ಸಂಖ್ಯೆಯನ್ನು ಮತ್ತಷ್ಟು ಕಡಿಮೆಯಾಗಿಸಲು ಹೊಸ ಸಕ್ಯೂರಿಟಿ ಸಿಸ್ಟಮ್ ಮಾಡಬೇಕೆಂದು ಸಿಸಿ ಟಿವಿ ಅಳವಡಿಸಲಾಗಿದೆ ಎಂದರು.

ವಾಹನಗಳಿಗೆ ವೇಗತ ಮಿತಿ ನಿಗದಿಪಡಿಸಿ ಭಾರಿ ವಾಹನಗಳಿಗೆ ವೇಗ ಮಿತಿ 60 ಕಿಮೀ ಹಾಗೂ ಕಾರ್ ಮತ್ತು ಬಸ್‌ಗಳಿಗೆ 70 ಕಿಮೀ ಮಿತಿ ನಿಗದಿ ಮಾಡಿ, ಓವರ್ ಸ್ಪೀಡ್‌ನಲ್ಲಿ ಹೋಗುವಂತಹ ವಾಹನಗಳಿಗೆ ಹೊಸ ಟೆಕ್ನಾಲಜಿ ಪ್ರಕಾರ ವಾಹನಗಳ ನಂಬರ್ ಮೇಲೆಯೇ ತ್ವರಿತವಾಗಿ ದಂಡ ಹಾಕುವ ಕೆಲಸ ಮಾಡಲಾಗುವುದು. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ಮಾಡಿ, ಈ ನಿಯಮಗಳನ್ನು ಜಾರಿಗೊಳಿಸಲಾಗುವುದು. ಟಿಪ್ಪರ ವಾಹನವೊಂದರ ಓವರ್ ಸ್ಪೀಡ್‌ನಿಂದಾಗಿ ಇತ್ತೀಚೆಗೆ ಕಿರ್ಲೋಸ್ಕರ್ ಕಂಪನಿ ಹತ್ತಿರ 129 ಕುರಿಗಳು ಸಾವನಪ್ಪಿದ್ದವು. ಕಿರ್ಲೋಸ್ಕರ್ ಮತ್ತು ಹೊಸಪೇಟೆ ಸ್ಟೀಲ್ಸ್ ಕಂಪನಿ ಹತ್ತಿರವೂ ಸಿಸಿ ಟಿವಿ ಅಳವಡಿಸಲು ಆಯಾ ಕಂಪನಿಗಳಿಗೆ ಸೂಚನೆ ನೀಡಲಾಗಿದೆ. ಈ ರಸ್ತೆಯಲ್ಲಿ ಅಪಘಾತಗಳನ್ನು ಶೂನ್ಯಕ್ಕೆ ತರುವ ಉದ್ದೇಶ ಹೊಂದಲಾಗಿದೆ. ಹೊಸಳ್ಳಿ ಮತ್ತು ಹಿಟ್ನಾಳ್ ಮಧ್ಯ ಭಾಗದ ಎನ್.ಹೆಚ್–50ರ ಮೇಲ್ಸೇತುವೆಯನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ 19.43 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದ್ದು, ಸಾರ್ವಜನಿಕರ ಬಳಕೆಗೆ ಇಂದು ಅನುವು ಮಾಡಿಕೊಡಲಾಗಿದೆ. ಈ ಮೇಲ್ಸೇತುವೆಯಲ್ಲಿ ಶೀಘ್ರದಲ್ಲಿಯೇ ಲೈಟಿಂಗ್ ವ್ಯವಸ್ಥೆಯನ್ನು ಮಾಡಲಾಗುವುದು ಎಂದು ಹೇಳಿದರು. ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ, ವಾಹನಗಳ ಸಂಚಾರಕ್ಕೆ ಅನುಕೂಲ ಮತ್ತು ಅಪಘಾತಗಳನ್ನು ತಡೆಗಟ್ಟಲು ಹೊಸಳ್ಳಿ–ಹಿಟ್ನಾಳ್ ಮಧ್ಯ ಭಾಗದ ರಾಷ್ಟ್ರೀಯ ಹೆದ್ದಾರಿ–50ರಲ್ಲಿ ಮೇಲ್ಸೇತುವೆ ನಿರ್ಮಾಣವಾಗಿರುವುದು ಸಂತಸ ತಂದಿದೆ. ಈ ಕಾಮಗಾರಿಯನ್ನು ಬೇಗನೆ ಪೂರ್ಣಗೊಳಿಸಿರುವುದು ಸಾರ್ವಜನಿಕರಿಗೆ ಮತ್ತು ವಾಹನಗಳ ಓಡಾಟಕ್ಕೆ ತುಂಬಾ ಅನುಕೂಲವಾಗಿದೆ. ಇದೇ ಅಕ್ಟೋಬರ್ 6 ರಂದು ಕೊಪ್ಪಳದಲ್ಲಿ ಮುಖ್ಯಮಂತ್ರಿಗಳ ಕಾರ್ಯಕ್ರಮ ನಡೆಯಲಿದ್ದು, ಸುಮಾರು 1500 ಕೋಟಿ ರೂಪಾಯಿಗಳಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನಡೆಯಲಿದೆ. ಈ ಸಮಾರಂಭದಲ್ಲಿ ಉಪ ಮುಖ್ಯಮಂತ್ರಿಗಳು, ಸಚಿವರುಗಳು ಮತ್ತು ಇತ–ರೆ ಗಣ್ಯರು ಪಾಲ್ಗೊಳ್ಳಲಿದ್ದು, ಸರ್ಕಾರದ ವಿವಿಧ ಯೋಜನೆಗಳ ಫಲಾನುಭವಿಗಳನ್ನು ಕರೆತರಬೇಕು ಮತ್ತು ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಎಲ್ಲರೂ ಆಗಮಿಸಿ ಯಶಸ್ವಿಗೊಳಿಸಬೇಕು ಎಂದರು.

ಮಾಜಿ ಸಂಸದರಾದ ಕರಡಿ ಸಂಗಣ್ಣ ಅವರು ಮಾತನಾಡಿ, ಹೊಸಳ್ಳಿ ಮತ್ತು ಹಿಟ್ನಾಳ್ ಮ ಧ್ಯ ಭಾಗದ ರಾಷ್ಟ್ರೀಯ ಹೆದ್ದಾರಿ–50ರ ಮೇಲ್ಸೇತುವೆ ನಿರ್ಮಿಸಲು ಮಂಜೂರಾತಿಗೆ ಈ ಹಿಂದೆ ಶ್ರಮಿಸಿದ್ದೇನೆ. ಈ ಕಾಮಗಾರಿಯ ಟೆಂಡರ್ ಕರೆದು ಕಾಮಗಾರಿಯನ್ನು ಪ್ರಾರಂಭಿಸಿ, ಬೇಗನೇ ರಸ್ತೆ ಮೇಲ್ಸೇತುವೆ ನಿರ್ಮಾಣ ಮಾಡಿರುವುದಕ್ಕೆ ಇಂದಿನ ಸಂಸದರಿಗೆ ಮತ್ತು ಗುತ್ತಿಗೆದಾರರಿಗೆ ಅಭಿನಂದಿಸುತ್ತೇನೆ. ಕುಕನೂರು, ಯಲಬುರ್ಗಾ, ಮಸ್ಕಿ ಮತ್ತು ಸಿಂಧನೂರು ಬೈಪಾಸ್ ಕಾಮಗಾರಿಯನ್ನು ಪ್ರಾರಂಭಿಸಬೇಕು. ಕೊಪ್ಪಳದಲ್ಲಿ ಏರ್ಪೋರ್ಟ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು. ಇದರ ಜೊತೆಗೆ ರೈಲ್ವೆ ಯೋಜನೆಗಳಿಗೆ ಆದ್ಯತೆ ನೀಡಿ, ದರೋಜಿ–ಗಂಗಾವತಿ ಮತ್ತು ಗಂಗಾವತಿ–ಬಾಗಲಕೋಟ ರೈಲ್ವೆ ಲೈನ್ ಪ್ರಾರಂಭಕ್ಕೂ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹೊಸಳ್ಳಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಸುರೇಶ್, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಕೊಪ್ಪಳ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಾಲಚಂದ್ರನ್, ಮುಖಂಡರಾದ ಗೂಳಪ್ಪ ಹಲಗೇರಿ, ವೀನಗೌಡ ಪಾಟೀಲ್, ಯಂಕಪ್ಪ, ಕೆ.ಎಂ.ಸೈಯದ್, ವಿಶ್ವನಾಥ ರಾಜಣ್ಣ, ಗುತ್ತಿಗೆದಾರ ಶರಣಬಸವರಾಜ

## ರಂಭಾಪುರಿ ಜಗದ್ಗುರುಗಳಿಂದ ಡಿ.ಕೆ ರವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಅ 3 :ಇಲ್ಲಿನ ಅಕ್ಕ ಮಹಾದೇವಿ ಮಹಿಳಾ ಮಹಾವಿದ್ಯಾಲಯದ ಅವರಣದಲ್ಲಿ ಹಮ್ಮಿಕೊಂಡ ದಸರಾ ದರ್ಬಾರ್ ಸಮಾರಂಭದಲ್ಲಿ ಸುಮಾರು ವರ್ಷಗಳಿಂದ ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆಯ್ಲಲಿ ವರದಿಗಾರರಾಗಿ ಕೆಲಸ ಮಾಡುತ್ತಿರುವ ಡಿ. ಕೆ. ಪ್ರಹ್ಲಾದ. ಅವರನ್ನು ಪೂಜ್ಯಶ್ರೀ ರಂಭಾಪುರಿ ಜಗದ್ಗುರುಗಳು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ತ್ರಿಪುರಾಂತನ ಪೂಜ್ಯ ಶ್ರೀ ಡಾ. ಷ ಬ್ರ.ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು. ತಡೋಳಾದ ಪೂಜ್ಯ ಶ್ರೀ ರಾಜೇಶ್ವರ ಶಿವಾಚಾರ್ಯರು ಸೇರಿದಂತೆ ಅನೇಕರು


# ಯಶಸ್ವಿ ಸಮೀಕ್ಷೆಗೈದ ಶಿಕ್ಷಕರಿಗೆ ಸನ್ಮಾನ: ಬಾಗಲಕೋಟೆ ಜಿಲ್ಲೆಯಲ್ಲಿ 3.26 ಲಕ್ಷ ಕುಟುಂಬಗಳ ಸಮೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.3–ಜಿಲ್ಲೆಯಾದ್ಯಂತ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯವನ್ನು ಚುರುಕಾಗಿ ನಡೆಸಿ ಕಡಿಮೆ ಅವಧಿಯಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸಿದ ಬಾಗಲಕೋಟೆ ತಾಲೂಕಿನ ಇಬ್ಬರು ಶಿಕ್ಷಕರನ್ನು ಹಿಂದುಳಿದ ವರ್ಗಗಳ ಆಯೋಗದ ಸದಸ್ಯ ಡಾ.ಸಿ.ಎಂ. ಕುಂದಗೋಳ ಸನ್ಮಾನಿಸಿ ಪ್ರಮಾಣ ಪತ್ರ ನೀಡಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಜರುಗಿದ ಸಾಮಾಜಿಕ ಮತ್ತು ಶೈಕ್ಷಣಿ ಸಮೀಕ್ಷೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಮೀಕ್ಷೆಯಲ್ಲಿ ಪಾಲ್ಗೊಂಡ ತಾಲೂಕಾ ಅಧಿಕಾರಿಗಳಿಂದ ಸಮೀಕ್ಷೆಯಲ್ಲಿ ಕಂಡು ಬರುವ ಸಮಸ್ಯೆಗಳನ್ನು ಆಲಿಸಿದರು. ನಂತರ ತಾಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಮಸ್ಯೆ ಹಾಗೂ ಪರಿಹಾರಗಳ ಕುರಿತು ಚರ್ಚೆ ನಡೆಸಿದರು. ಕಡಿಮೆ ಅವಧಿಯಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸಿದ ತಾಲೂಕಿನ ಇಬ್ಬರ ಸಮೀಕ್ಷೆದಾರರಿಗೆ ಪ್ರಮಾಣ ಪತ್ರ ವಿತರಿಸಿ ಸನ್ಮಾನಿಸಲಾಯಿತು.

ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 4,70,648 ಕುಟುಂಬಗಳಿದ್ದು, ಸಮೀಕ್ಷೆ ಕೈಗೊಳ್ಳಲು 4323 ಸಮೀಕ್ಷೆದಾರರನ್ನು ನೇಮಕ ಮಾಡಲಾಗಿದೆ. ಇಲ್ಲಿಯವರೆಗೆ



3,26,081 ಕುಂಟುಂಬಗಳ ಸಮೀಕ್ಷೆ ಮಾಡಿ ಶೇ.69.28 ರಷ್ಟು ಪ್ರಗತಿ ಸಾಧಿಸಲಾಗಿದೆ. ಬೀಳಗಿ ತಾಲೂಕು ಶೇ.78.33 ಸಾಧನೆ ಮಾಡಿ ಪ್ರಥಮ ಸ್ಥಾನದಲ್ಲಿದ್ದರೆ, ಬಾಗಲಕೋಟೆ ತಾಲೂಕು ಶೇ. 54.67 ಸಾಧನೆ ಮಾಡಿ ಕೊನೆಯ ಸ್ಥಾನದಲ್ಲಿರುತ್ತದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಜಮಖಂಡಿ ಉಪ ವಿಬಾಗಾಧಿಕಾರಿ ಶ್ವೇತಾ ಬೀಡಿಕರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಂಕಜಾ ಹಾಗೂ ಜಿಲ್ಲಾ ಮಟ್ಟದ ನೂಡಲ್ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



# ಪತ್ರಕರ್ತ ಬಾಬುರಾವ್ ಯಡ್ರಾಮಿಯವರಿಗೆ ಮಾತೃ ವಿಯೋಗ

ಮಲ್ಲಮ್ಮ ನುಡಿ ವಾರ್ತೆ

ಕಲಬುರ್ಗಿ, ಅ.3– ಹಿರಿಯ ಪತ್ರಕರ್ತ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಾಬುರಾವ್ ಯಡ್ರಾಮಿ ಅವರ ತಾಯಿ ಶ್ರೀಮತಿ ರುಕ್ಮಾಬಾಯಿ ಹಲಕರ್ಟಿ ಅವರು ಶುಕ್ರವಾರ ಬೆಳಗಿನ ಜಾವ ನಿಧನರಾದರು. ಮೃತರಿಗೆ 86 ವರ್ಷ ವಯಸ್ಸಾಗಿತ್ತು.

ಬಾಬುರಾವ್ ಯಡ್ರಾಮಿ ಅವರೂ ಸೇರಿದಂತೆ ಆರು ಜನ ಪುತ್ರರು, ಮೂವರು ಪುತ್ರಿಯರು ಹಾಗೂ ಅಪಾರ ಬಂಧು, ಬಳಗವನ್ನು ಬಿಟ್ಟು ಶ್ರೀಮತಿ ರುಕ್ಮಾಬಾಯಿ ಅವರು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸ್ವಗ್ರಾಮ ಜಿಲ್ಲೆಯ ಯಡ್ರಾಮಿ ಪಟ್ಟಣದಲ್ಲಿರುವ ಸ್ವಂತ ಜಮೀನಿನಲ್ಲಿ ಮಧ್ಯಾಹ್ನ ನೆರವೇರಿತು. ಪತ್ರಕರ್ತರು, ರಾಜಕೀಯ ಮುಖಂಡರು, ಸಮಾಜದ ಹಿರಿಯರೂ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು. ಶ್ರೀಮತಿ ರುಕ್ಮಾಬಾಯಿ ಯಡ್ರಾಮಿ ಅವರ ನಿಧನಕ್ಕೆ ಅನೇಕ ಪತ್ರಕರ್ತರು ಸಂತಾಪ ವ್ಯಕ್ತಪಡಿಸಿದ್ದಾರೆ.

# ಬೀದರ-ಬೆಂಗಳೂರು ಕಂಟೋನ್ಮೆಂಟ್ ನಡುವೆ ವಿಶೇಷ ರೈಲು ಸಂಚಾರ: ಈ ವಿಶೇಷ ರೈಲು ಕಲಬುರಗಿ ಹಾಗೂ ಶಹಾಬಾದ ನಿಲ್ದಾಣಗಳಲ್ಲಿ ನಿಲುಗಡೆ

ಕಲಬುರಗಿ,ಅ.03–ಭಾರತೀಯ ರೈಲ್ವೆಯಿಂದ ಬೀದರ ಮತ್ತು ಬೆಂಗಳೂರು ಕಂಟೋನ್ಮೆಂಟ್ ನಡುವೆ ವಿಶೇಷ ರೈಲು ಸಂಚರಿಸಲಿದ್ದು, ಈ ವಿಶೇಷ ರೈಲು ಕೇಂದ್ರ ರೈಲ್ವೆ ಸೋಲಾಪುರ ವಿಭಾಗದ ಕಲಬುರಗಿ ಮತ್ತು ಶಹಾಬಾದ್ ನಿಲ್ದಾಣಗಳಲ್ಲಿ ನಿಲ್ಲಲಿದೆ ಎಂದು ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಬೀದರ್–ಬೆಂಗಳೂರು ಕಂಟೋನ್ಮೆಂಟ್ ವಿಶೇಷ ರೈಲು (ರೈಲು ಸಂಖ್ಯೆ 07063) ಅಕ್ಟೋಬರ್ 4 ರಂದು 14:40 ಗಂಟೆಗೆ ಬೀದರ್‌ನಿಂದ ಹೊರಟು ಮರುದಿನ 05:00 ಗಂ–ಟೆಗೆ ಬೆಂಗಳೂರು ಕಂಟೋನ್ಮೆಂಟ್‌ಗೆ ತಲುಪಲಿದೆ. ರೈಲು ನಂ. 07064 ವಿಶೇಷ ರೈಲುಗಳು ಅಕ್ಟೋಬರ್ 5 ರಂದು 22:30 ಗಂಟೆಗೆ ಬೆಂಗಳೂರು ಕಂಟೋನ್ಮೆಂಟ್‌ನಿಂದ ಹೊರಟು ಮರುದಿನ 14:40 ಗಂ–ಟೆಗೆ ಬೀದರ್ ತಲುಪಲಿದೆ. ಈ ರೈಲು ಹುಮ್ನಾಬಾದ್, ಕಮಲಾಪುರ, ಕಲಬುರಗಿ, ಶಹಾಬಾದ, ಯಾದಗಿರಿ, ರಾಯಚೂರು, ಮಂತ್ರಾಲಯ ರಸ್ತೆ, ಅದೋನಿ, ಗುಂಟಕಲ್, ಅನಂತಪುರ, ಧರ್ಮಾವರಂ ಮತ್ತು ಯಲಹಂಕ ಮಾರ್ಗದ ಮೂಲಕ ಸಂಚರಿಸಲಿದೆ.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ತಿತಿತಿ.ಎಡಿಥಿಣಟಿ.ಥಿ.ಟಿವಟ್‌ಸ್ಟೆಟ್‌ನ್ನ, ವಿಶೇಷ ರೈಲುಗಳ ವಿವರವಾದ ಸಮಯ ಮತ್ತು ನಿಲುಗಡೆಗಳಿಗಾಗಿ, www.enquiry.indianrail.gov.in ಗೆ ಭೇಟಿ ನೀಡಿ ಅಥವಾ NTES ಅಪ್ಲಿಕೇಶನ್ ಡೌನ್‌ಲೋಡ್ ಮಾಡಿಕೊಂಡು ಪಡೆಯಬಹುದಾಗಿದೆ.

# ಅನ್ಯಭಾಷಿಕರಿಗೆ ಕನ್ನಡ ಕಲಿಸುವ ತರಬೇತಿಗೆ ಅರ್ಜಿ ಆಹ್ವಾನ

ಕಲಬುರಗಿ,ಅ.3: ಕನ್ನಡೇತರರಿಗೆ ಮತ್ತು ಅನ್ಯ ಭಾಷಿಕರಿಗೆ ಕನ್ನಡ ಕಲಿಸುವ ನಿಟ್ಟಿನಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಕನ್ನಡ ತರಬೇತಿ ಕಾರ್ಯಕ್ರಮ ಕಲಬುರಗಿಯಲ್ಲಿ ಆಯೋಜಿಸಿದ್ದು, ಜಿಲ್ಲೆಯಲ್ಲಿರುವ ಕೇಂದ್ರೋದ್ಯಮಗಳು, ಬ್ಯಾಂಕ್‌ಗಳು, ಕೇಂದ್ರ ಸರ್ಕಾರಿ ಕಛೇರಿಗಳು, ವಸತಿ ಸಮುಚ್ಚಯಗಳಲ್ಲಿನ ಕನ್ನಡೇತರರಿಗೆ ಹಾಗೂ ಅನ್ಯಭಾಷಿಕರು ತರಬೇತಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಕನ್ನಡ ಕಲಿಸುವತ್ತ ಹಲವು ವಿನೂತನ ಚಟುವಟಿಕೆಗಳನ್ನು ಹಮ್ಮಿಕೊಂಡು ಬರುತ್ತಿರುವ ಪ್ರಾಧಿಕಾರವು ಪ್ರಸಕ್ತ 2025–26ನೇ ಸಾಲಿನಲ್ಲಿ ಇದಕ್ಕಾಗಿ ವೈಜ್ಞಾನಿಕ ಪಠ್ಯಕ್ರಮವನ್ನು ರೂಪಿಸಿದ್ದು, ನುರಿತ ಶಿಕ್ಷಕರಿಂದ ಕನ್ನಡ ತರಬೇತಿ ಜಿಲ್ಲಾ ಹಂತದಲ್ಲಿ ಆಯೋಜಿಸಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಜಗದೀಶ್ವರಿ ಅ. ನಾಶಿ ತಿಳಿಸಿದ್ದಾರೆ.

ಮೂರು ತಿಂಗಳ ಅವಧಿಯ ಕನ್ನಡ ಕಲಿಕೆ ತರಬೇತಿ ಕಲಬುರಗಿಯ ಡಾ. ಸಿದ್ದಯ್ಯ ಪುರಾಣಿಕ ಸುವರ್ಣ ಸಾಂಸ್ಕೃತಿಕ ಸಮುಚ್ಚಯದ ಆವರಣದಲ್ಲಿನ ಸಭಾಂಗಣದಲ್ಲಿ ನಡೆಸಲಾಗುತ್ತಿದೆ.

ವಾರಕ್ಕೆ 3 ದಿನದಂತೆ ಪ್ರತಿ ದಿನ 1 ಗಂಟೆಯಂತೆ ತರಬೇತಿ ನಡೆಯಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಆಸಕ್ತ ಕನ್ನಡೇತರರು ತಮ್ಮ ಸ್ವ–ವಿವರಗಳೊಂದಿಗೆ ಅರ್ಜಿಯನ್ನು ಇದೇ ಅಕ್ಟೋಬರ್ 10 ರೊಳಗಾಗಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಡಾ. ಸಿದ್ದಯ್ಯ ಪುರಾಣಿಕ ಸುವರ್ಣ ಸಾಂಸ್ಕೃತಿಕ ಸಮುಚ್ಚಯ, ಸೇಡಂ–ಶಹಾಬಾದ ವರ್ತುಲ ರಸ್ತೆ, ಕಲಬುರಗಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08472–227734 ಸಂಪರ್ಕಿಸುವುದು.

# ಸಿನಿಮಾ ಟಿಕೆಟ್‌ಗಳ ಮೇಲೆ ವಿಧಿಸಿದ್ದ 200 ರೂ. ಮಿತಿ ಕರ್ನಾಟಕ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆ ಮುಂದುವರಿಕೆ

ಬೆಂಗಳೂರು, ಅ 03: ರಾಜ್ಯದ ಎಲ್ಲಾ ಮಲ್ಟಿಪ್ಲೆಕ್ಸ್‌ಗಳಲ್ಲಿ ಸಿನಿಮಾ ಟಿಕೆಟ್‌ಗಳ ಮೇಲೆ ವಿಧಿಸಿದ್ದ 200 ರೂ.ಗಳ ದರ ಮಿತಿಗೆ ಕರ್ನಾಟಕ ಉಚ್ಚ ನ್ಯಾಯಾಲಯವು ತಡೆಯಾಜ್ಞೆಯನ್ನು ಮುಂದುವರಿಸಿದೆ.

ಕರ್ನಾಟಕ ಉಚ್ಚ ನ್ಯಾಯಾಲಯದ ಪ್ರಧಾನ ಪೀಠದಲ್ಲಿ ದಾಖಲಾಗಿದ್ದ, ರಿಟ್ ಅಪೀಲು ಸಂಖ್ಯೆ:1623/2025ರ (ಕರ್ನಾಟಕ ರಾಜ್ಯ ಚಲನಚಿತ್ರ ವಾಣಿಜ್ಯ ಮಂಡಳಿ ವಿರುದ್ಧ, ಮಲ್ಟಿಪ್ಲೆಕ್ಸ್ ಅಸೋಸಿಯೇಷನ್ ಇಂಡಿಯಾ) ಪ್ರಕರಣದಲ್ಲಿ ದಿನಾಂಕ:30.09.2025ರಂದು ಮಾನ್ಯ ನ್ಯಾಯಾಲಯವು ಸಿನಿಮಾ ಟಿಕೆಟ್‌ಗಳ ಮೇಲೆ ವಿಧಿಸಿದ್ದ ರೂ.200/–ಗಳ ಮಿತಿಗೆ ದಿನಾಂಕ:23.09.2025ರಂದು ನೀಡಿದ ತಡೆಯಾಜ್ಞೆಯನ್ನು ಮುಂದುವರೆಸುವ ಜೊತೆಗೆ, ಈ ಕೆಳಕಂಡಂತೆ ಆದೇಶಿಸಿರುತ್ತದೆ.

ದಾಖಲೆಗಳ ನಿರ್ವಹಣೆ: ಪ್ರತಿವಾದಿ ಸಂಖ್ಯೆ 1 ಮತ್ತು ಅದರ ಅಡಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಮಲ್ಟಿಪ್ಲೆಕ್ಸ್‌ಗಳು, ಮಾರಾಟವಾದ ಪ್ರತಿಯೊಂದು ಟಿಕೆಟ್‌ಗೆ ಸಮಗ್ರ ಮತ್ತು ಲೆಕ್ಕಪರಿಶೋಧಿಸಬಹುದಾದ ದಾಖಲೆಗಳನ್ನು ನಿರ್ವಹಿಸಲು ನಿರ್ದೇಶಿಸಲಾಗಿದೆ. ದಾಖಲೆಗಳು ಈ ಕೆಳಗಿನವುಗಳನ್ನು ಒಳಗೊಂಡಿರಬೇಕು:

ಮಾರಾಟದ ದಿನಾಂಕ ಮತ್ತು ಸಮಯ, ಆನ್‌ಲೈನ್ ಅಥವಾ ಭೌತಿಕ ಕೌಂಟರ್‌ಗಳಲ್ಲಿ ಬುಕಿಂಗ್ ಮಾಡಿರುವ ವಿವರ, ಕ್ರೆಡಿಟ್/ಡೆಬಿಟ್ ಕಾರ್ಡ್, ಯುಪಿಐ ನೆಟ್ ಬ್ಯಾಂಕಿಂಗ್ ಅಥವಾ ನಗದು ಪಾವತಿ ಮಾಡಿರುವ ವಿವರ, ಸಂಗ್ರಹಿಸಿದ ಮೊತ್ತ, ಜಿಎಸ್‌ಟಿ ಘಟಕ.

ಎಲ್ಲಾ ನಗದು ವಹಿವಾಟುಗಳಿಗೆ ಡಿಜಿಟಲ್ ಆಗಿ ಪತ್ತೆಹಚ್ಚಬಹುದಾದ ರಸೀದಿಗಳನ್ನು ನೀಡಬೇಕು ಮತ್ತು ಪ್ರತಿದಿನ ಕ್ಯಾಶ್ ರಿಜಿಸ್ಟರ್‌ಗಳನ್ನು ಮಲ್ಟಿಪ್ಲೆಕ್ಸ್‌ನ ವ್ಯವಸ್ಥಾಪಕರು ಪ್ರತಿ ಸಹಿ ಮಾಡಬೇಕು.

ಎಲೆಕ್ಟ್ರಾನಿಕ್ ವಹಿವಾಟುಗಳು: ಅರ್ಜಿದಾರರು ಈ ಮೇಲ್ಮನವಿ/ಅರ್ಜಿಯ ಅಂತಿಮ ತೀರ್ಪಿನಲ್ಲಿ ಸಿಲುಕಿದರೆ, ಈ ನಿಬರ್ಂಧದ ಬಾಕಿ ಇರುವ ಸಮಯದಲ್ಲಿ ಎಲೆಕ್ಟ್ರಾನಿಕ್ ವಿಧಾನಗಳ ಮೂಲಕ (ಅನ್ವಯವಾಗುವ ಜಿಎಸ್‌ಟಿ ಹೊರತುಪಡಿಸಿ) ಸಂಗ್ರಹಿಸಿದ ಎಲ್ಲಾ ಮೊತ್ತವನ್ನು ಟಿಕೆಟ್‌ಗಳನ್ನು ಬುಕ್ ಮಾಡಿದ ವೈಯಕ್ತಿಕ ಗ್ರಾಹಕರಿಗೆ ಬುಕಿಂಗ್‌ಗೆ ಬಳಸುವ ಅದೇ ಪಾವತಿ ವಿಧಾನದ ಮೂಲಕ ಮರುಪಾವತಿಸಬೇಕು.

ಪ್ರತಿವಾದಿ ಸಂಖ್ಯೆ 1 ಇಂದಿನಿಂದ 45 ದಿನಗಳಲ್ಲಿ ಪರವಾನಗಿ ಪ್ರಾಧಿಕಾರಕ್ಕೆ ಮರುಪಾವತಿ ಪ್ರಕ್ರಿಯೆ ಯೋಜನೆಯನ್ನು ಅನುಮೋದನೆಗಾಗಿ ಸಲ್ಲಿಸಬೇಕು, ಇದು ಗ್ರಾಹಕರಿಗೆ ಮರುಪಾವತಿ ಮಾಡುವ ಕಾರ್ಯವಿಧಾನವನ್ನು ವಿವರಿಸುತ್ತದೆ. ಪರವಾನಗಿ ಪ್ರಾಧಿಕಾರದಿಂದ ಅನುಮೋದನೆಯ ನಂತರ ಅದನ್ನು ಅಂತಿಮ ಅನುಮೋದನೆಗಾಗಿ ಈ ನ್ಯಾಯಾಲಯದ ಮುಂದೆ ಇಡಬೇಕಾಗುತ್ತದೆ.

ಈ ಹಿನ್ನೆಲೆಯಲ್ಲಿ, ಸಾರ್ವಜನಿಕರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ತೀರ್ಪಿನನ್ವಯ, ಹಾಲಿ ಚಲನಚಿತ್ರ ಪ್ರದರ್ಶನಕ್ಕೆ ನೀಡಿರುವ ದರಕ್ಕೆ ಸಂಬಂಧಿಸಿದಂತೆ ಭೌತಿಕವಾಗಿ ಅಥವಾ ಎಲೆಕ್ಟ್ರಾನಿಕ್ ಮಾಧ್ಯಮದಲ್ಲಿ ಪಡೆದ ಟಿಕೆಟ್‌ಗಳನ್ನು ಭದ್ರವಾಗಿ ಕಾಯ್ದಿರಿಸಿಕೊಳ್ಳತಕ್ಕದ್ದು, ಹಾಗೆಯೇ, ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳ ಮಾಲೀಕರು ಎಲ್ಲಾ ರೀತಿಯಾ ಸಿನಿಮಾ ಟಿಕೆಟ್‌ಗಳ ಮಾರಾಟದ ಸಂಪೂರ್ಣ ದಾಖಲೆಗಳನ್ನು ನಿರ್ವಹಿಸಬೇಕಾಗಿರುತ್ತದೆ.

ಈ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ / ಅಪೀಲು ಸಂಬಂಧದಲ್ಲಿ ನೀಡುವ ಅಂತಿಮ ಆದೇಶದಲ್ಲಿ ಅರ್ಜಿದಾರರಿಗೆ ಹಿನ್ನಡೆಯಾದಲ್ಲಿ ಗ್ರಾಹಕರಿಂದ ಸಂಗ್ರಹವಾದ ಹೆಚ್ಚುವರಿ ಮೊಬಲಗನ್ನು ಅವರುಗಳು ಪಾವತಿಸಿದ ವಿಧಾನದಲ್ಲಿಯೇ ಹಿಂದಿರುಗಿಸಲು ಅನುಕೂಲವಾಗುವಂತೆ ಅರ್ಜಿದಾರರು, ರಾಜ್ಯ ಹಾಗೂ ಗ್ರಾಹಕರ ಹಿತಾಸಕ್ತಿಯನ್ನು ಗಮನದಲ್ಲಿರಿಸಿಕೊಂಡು ಮೇಲಿನ ನಿರ್ದೇಶನಗಳನ್ನು ನೀಡಿರುತ್ತದೆ ಎಂದು ಒಳಾಡಳಿತ ಇಲಾಖೆಯ (ಸೆರೆಮನೆ ಮತ್ತು ಸಿನಿಮಾ) ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಸರ್ಕಾರದ ಅಧೀನ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಲಬುರ್ಗಾ ಎಪಿಎಂಸಿ: ಕುಕನೂರು ಮಾರುಕಟ್ಟೆಯಲ್ಲಿ ವಾರದಲ್ಲಿ 2 ದಿನ ಇ-ಟೆಂಡರ್ ಪ್ರಕ್ರಿಯೆ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.3: ಯಲುಬುರ್ಗಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕುಕನೂರು ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಸರ್ಕಾರಿ ರಜೆ ದಿನಗಳನ್ನು ಹೊರತುಪಡಿಸಿ ಸೋಮವಾರ ಮತ್ತು ಗುರುವಾರ (ವಾರದಲ್ಲಿ 2 ದಿನ ಮಾತ್ರ) ಅಧಿಸೂಚಿತ ಕೃಷಿ ಉತ್ಪನ್ನಗಳಿಗೆ ಇ–ಟೆಂಡರ್ ನಡೆಸಲಾಗುವುದು.

ಬೆಳಗ್ಗೆ 10.30 ರಿಂದ 12.30 ಗಂಟೆವರೆಗೆ ಲಾಟ್ ಎಂಟ್ರಿ ಹಾಗೂ ಮಧ್ಯಾಹ್ನ 12.30 ರಿಂದ 1.30 ಗಂಟೆವರೆಗೆ ಟೆಂಡರ್ ಹಾಕಲಾಗುವುದು. 1.30 ಗಂಟೆ ನಂತರ ಟೆಂಡರ್ ತೆರೆಯುವುದು ಅಥವಾ ಘೋಷಿಸಲಾಗುವುದು. ಅಧಿಸೂಚಿತ ಕೃಷಿ ಉತ್ಪನ್ನಗಳಿಗೆ ಕೂಡಲೇ ಇ–ಟೆಂಡರ್ ಪ್ರಾರಂಭ ಮಾಡುವಂತೆ ತೀರ್ಮಾನಿಸಲಾಗಿರುತ್ತದೆ.

ಆದ್ದರಿಂದ ರೈತ ಬಾಂಧವರು ತಮ್ಮ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ಕುಕನೂರು ಮುಖ್ಯ ಮಾರುಕಟ್ಟೆ ಪ್ರಾಂಗಣಕ್ಕೆ ತಂದು, ಮಾರಾಟ ಮಾಡುವ ಮೂಲಕ ಸ್ಪರ್ಧಾತ್ಮಕ ಬೆಲೆಯನ್ನು ಪಡೆಯಲು ಹಾಗೂ ಸಮಿತಿಯಿಂದ ಲೈಸೆನ್ಸ್ ಹೊಂದಿದ ದಲಾಲರು ಮತ್ತು ಕೃಷಿ ಮಾರಾಟ ಇಲಾಖೆಯಿಂದ

ಲೈಸೆನ್ಸ್ ಹೊಂದಿದ ಖರೀದಿದಾರರು ಈ ಟೆಂಡರ್‌ನಲ್ಲಿ

ಭಾಗವಹಿಸಲು, ಸಕಾರಾತ್ಮಕವಾಗಿ ಸ್ಪಂದಿಸಿ ಯಶಸ್ವಿಗೊಳಿಸುವಂತೆ ಯಲಬುರ್ಗಾ ಎಪಿಎಂಸಿಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬಳ್ಳಾರಿಯಲ್ಲಿ ಮಧ್ವಾಚಾರ್ಯರ ಜಯಂತಿ ಆಚರಣೆ



ಬಳ್ಳಾರಿ:ಅ.3: ಹದಿನಾಲ್ಕು ಲೋಕಗಳನ್ನು ಆಳುವ ತಂದೆ ಉಡುಪಿ ಶ್ರೀಕೃಷ್ಣನನ್ನು ಸಾಕ್ಷಾತ್ಕರಿಸಿಕೊಂಡು ವಿಷ್ಣು ಸಹಸ್ರನಾಮಕ್ಕೆ ಅದ್ಭುತವಾದ ಭಾಷ್ಯ ರಚನೆ ಮಾಡಿದ್ದ ಶ್ರೀ ಮಧ್ವಾಚಾರ್ಯರ ಜಯಂತಿಯನ್ನು ನಗರದಲ್ಲಿ ಸಡಗರ, ಸಂಭ್ರಮ ಮತ್ತು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಶ್ರೀ ಮಧ್ವಾಚಾರ್ಯರ ಸುಂದರ ದಿವ್ಯ ಚಿತ್ರಪಟ ದೊಂದಿಗೆ ನಗರದ ಶ್ರೀ ಸತ್ಯನಾರಾಯಣ ಪೇಟೆ ಮುಖ್ಯ ರಸ್ತೆಯ ಶ್ರೀ ವೆಂಕಟೇಶ್ವರ ದೇವಸ್ಥಾನದಿಂದ ದ್ವಿ ಚಕ್ರ ವಾಹನ ಮೆರವಣಿಗೆಯೊಂದಿಗೆ ಸಂಗಂ ಸರ್ಕಲ್, ರಾಯಲ್ ಸರ್ಕಲ್, ಬೆಂಗಳೂರು ರಸ್ತೆ, ಬ್ರೂಸ್ ಪೇಟೆ ಪೊಲೀಸ್ ಸ್ಟೇಷನ್, ಮೋತಿ ಸರ್ಕಲ್, ರೈಲ್ವೆ ನಿಲ್ದಾಣ ರಸ್ತೆ ಮುಖಾಂತರ ಪುನಃ ರಾಯಲ್ ಸರ್ಕಲ್ ನಿಂದ ಶ್ರೀ ವೆಂಕಟೇಶ್ವರ ದೇವಸ್ಥಾನಕ್ಕೆ ಬಂದು ಸಂಪನ್ನಗೊಳಿಸಲಾಯಿತು.

ಪಂಡಿತರಾದ ಜಿತೇಂದ್ರ ಆಚಾರ್, ನವೀನ್ ಆಚಾರ್, ಹಿರಿಯ ವಕೀಲರಾದ ರಾಘವೇಂದ್ರ ಮೋಹನ್, ಬ್ರಾಹ್ಮಣ ಸುವಾಸಿನಿಯರಾದ ಶೀಲಾ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಡಾ. ಶ್ರೀನಾಥ್, ಸುರೇಂದ್ರಾಚಾರ್, ಡೊಕ್ಕಿ ಗಿರಿ, ಸಿಮೆಂಟ್ ಗಿರಿ, ಕಲ್ಲಿ, ವೆಂಕಟೇಶ್, ವಿಜಯೇಂದ್ರ, ವಿಜಯ ರಾಜೀವಾಚಾರ್, ಲಕ್ಷ್ಮೀಕಾಂತ್, ವಿಜಯ ವಿಠ್ಠಲ, ಗುರುರಾಜ ಕುಲಕರ್ಣಿ, ವಿಠ್ಠಲ ದೇಸಾಯಿ, ದೇಸಾಯಿ ಸತೀಶ್, ಶ್ಯಾಮ, ಕಾರ್ತಿಕ್, ವಿಜಯ ರಾವ್, ವಿಠ್ಠಲ್ ದೇಸಾಯಿ, ರಾಮರಾವ್ ಕುಲಕರ್ಣಿ, ಹರಿಪ್ರಸಾದ್, ವಿಜೇಂದ್ರ, ವಜ್ರಮಣಿ ಅನಿಲ್, ಹಯವದನಾಚಾರ್, ಗುರು, ಗಿರಿ, ಫಣಿ, ಬುದ್ಧ, ಅಲೂರು ಅನಂತಾಚಾರ್, ವರುಣ್, ಕಾರ್ತಿಕ್, ವಾದಿರಾಜ, ಗುರುತೇಜ, ಶಾಮ್, ಸಂತೋಷ್ ಹಾಗೂ ಎಲ್ಲಾ ಪ್ರಮುಖ ವಿಪ್ರರು ಈ ಮಧ್ವಾಚಾರ್ಯ ಜಯಂತಿಯಲ್ಲಿ ಭಾಗವಹಿಸಿದ್ದರು.

# ದೈವಿ ಗುಣಗಳನ್ನು ಬಲಗೊಳಿಸುವುದೇ ವಿಜಯ ದಶಮಿಯ ಗುರಿ : ರಂಭಾಪುರಿ ಜಗದ್ಗುರುಗಳು



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ–ಅ.3– ಮನುಷ್ಯನಲ್ಲಿರುವ ಅಸುರಿ ಗುಣಗಳು ನಾಶವಾಗಿ ದೈವೀ ಗುಣಗಳನ್ನು ಬಲಗೊಳಿಸುವುದೇ ದಸರಾ ಹಬ್ಬದ ಮೂಲ ಗುರಿಯಾಗಿದೆ–ಯೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ವಿಜಯ ದಶಮಿಯ ಅಂಗವಾಗಿ ಶಮಿ ಸೀಮೊಲ್ಲಂಘನ ನೆರವೇರಿಸಿ ಮಾನದ ಧರ್ಮ ವೇದಿಕೆಯಲ್ಲಿ ಶಾಂತಿ ಸಂದೇಶ ನೀಡುತ್ತಿದ್ದರು.

ಜೀವನದಲ್ಲಿ ಬದಲಾವಣೆ ಮತ್ತು ಬೆಳವಣಿಗೆ ಎರಡೂ ಮುಖ್ಯ. ಮೌಲ್ಯಾಧಾರಿತ ಬದುಕಿಗೆ ಬೆಲೆಯಿದೆ. ಆತ್ಮ ವಿಶ್ವಾಸ ನಿಶ್ಚಿತ ಗುರಿ ಮತ್ತು ಸಂಯಮ ಯಶಸ್ವಿಗೆ ಭದ್ರ ಬುನಾದಿ. ಮಾನವೀಯ ಸಂಬಂಧಗಳನ್ನು ಗಟ್ಟಿಗೊಳಿಸಿ ಬದುಕಿನ ಹಿರಿಮೆ ಮತ್ತು ರಹಸ್ಯ ಬೋಧಿಸುವುದೇ ನಿಜವಾದ ಧರ್ಮ. ಸತ್ಯವೇ ಒಂದು ಧರ್ಮ. ಇದು ಧರ್ಮವನ್ನು ರಕ್ಷಿಸುವ ರಕ್ಷಾ ಕವಚ. ಧರ್ಮದ ರಕ್ಷಾ ಕವಚ ಕಳಚಿದರೆ ನಾಡಿನಲ್ಲಿ ಧರ್ಮ ಸಂಸ್ಕೃತಿ ಸಭ್ಯತೆ ಮತ್ತು ಪರಂಪರೆಯ ಆದರ್ಶಗಳು ಉಳಿಯಲಾರವು. ಧರ್ಮದ ಉತ್ಕೃಷ್ಟ ಮೌಲ್ಯಗಳನ್ನು ಪ್ರತಿಪಾದಿಸಿದ ಶ್ರೀ ಜಗದ್ಗುರು ರೇಣುಕಾಚಾರ್ಯರ ಮತ್ತು ಬಸವಾದಿ ಶರಣರ ವಿಚಾರ ಧಾರೆಗಳ ಪರಿಪಾಲನೆಯಿಂದ ಜಗದಲ್ಲಿ ಶಾಂತಿ ಸಾಮರಸ್ಯ ಮೂಡಿ ಬರಲು ಸಾಧ್ಯವಾಗುತ್ತದೆ. ಬಸವಕಲ್ಯಾಣದಲ್ಲಿ ನಡೆದ ದಸರಾ ನಾಡಹಬ್ಬ ಅತ್ಯಂತ ಸಂಭ್ರಮ ಸಡಗರದಿಂದ ನಡೆದಿರುವುದು ತಮ್ಮಲ್ಲಿರುವ ಧರ್ಮಶ್ರದ್ಧೆ ಮತ್ತು ಭಕ್ತಿಯ ಶಕ್ತಿಯೇ ಕಾರಣವಾಗಿದೆ ಎಂದು ಹರುಷ ವ್ಯಕ್ತಪಡಿಸಿದ ಜಗದ್ಗುರುಗಳು ಸ್ವಧರ್ಮದಲ್ಲಿ ನಿಷ್ಠೆ ಮತ್ತು ಪರಧರ್ಮದಲ್ಲಿ ಸಹಿಷ್ಣುತಾ ಮನೋಭಾವ ಹೊಂದಿ ಬಾಳಿದರೆ ಸಕಲರಿಗೂ ಸುಖ ಶಾಂತಿ ಪ್ರಾಪ್ತವಾಗುತ್ತದೆ ಎಂದರು.

ಇಂದು ಸ್ವಾತಂತ್ರ್ಯ ಸಂಗ್ರಾಮದಲ್ಲಿ ಮುಂಚೂಣಿಯಲ್ಲಿ ನಿಂತು ಶ್ರಮಿಸಿದ ಮಹಾತ್ಮ ಗಾಂಧೀಜಿ ಹಾಗೂ ಹಾಗೂ ದಕ್ಷ ಪ್ರಾಮಾಣಿಕ ಜನಪರ ಕಾಳಜಿ ಹೊಂದಿದ್ದ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ. ಅವರ ಸರಳತೆ ಸಾತ್ವಿಕ ಮನೋಭಾವ ಬೆಳೆಯುವ ಯುವ ಜನಾಂಗದಲ್ಲಿ ಮತ್ತು ರಾಜಕೀಯ ಧುರೀಣರಲ್ಲಿ ಬೆಳೆದು ಬಂದರೆ ನಾಡು ನುಡಿ ಶ್ರೀಮಂತಗೊಳ್ಳುವುದರಲ್ಲಿ ಯಾವುದೇ ಸಂದೇಹ ಇಲ್ಲ ಎಂದರು.

ಸಮಾರಂಭಕ್ಕೂ ಮುನ್ನ ಶ್ರೀ ಬಸವೇಶ್ವರ ದೇವಸ್ಥಾನದಿಂದ ವೈಭವದ ಅಡ್ಡಪಲ್ಲಕ್ಕಿ ಪ್ರಾರಂಭಗೊಂಡು ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಸುಮಾರು 3 ಗಂಟೆಗಳ ಕಾಲ ಉತ್ಸವ ಜರುಗಿತು. ನಂತರ ತೇರು ಮೈದಾನದಲ್ಲಿ ನಿರ್ಮಿಸಿದ ಬನ್ನಿ ಮಂಟಪದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಶಮೀ ಪೂಜೆ ಸಲ್ಲಿಸಿ ದಿನನಿತ್ಯದಂತೆ ಅಕ್ಕಮಹಾದೇವಿ ಮಹಿಳಾ ವಿದ್ಯಾಲಯದ ಆವರಣದಲ್ಲಿರುವ ಮಾನವ ಧರ್ಮ ಮಂಟಪಕ್ಕೆ ಆಗಮಿಸಿ ಮಹಾತ್ಮಾ ಗಾಂಧೀಜಿ ಹಾಗೂ ಲಾಲಬಹದ್ದೂರ ಇವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ನಂತರ ಸಿಂಹಾಸನಾರೋಹಣ ಮಾಡಿ ಶಾಂತಿ ಸಂದೇಶವನ್ನು ಅನುಗ್ರಹಿಸಿದರು. ಶಾಸಕ ಶರಣು ಸಲಗರ ಸರ್ವರನ್ನು ಸ್ವಾಗತಿಸಿ ದಸರಾ ಯಶಸ್ಸಿಗೆ ಶ್ರಮಿಸಿದ ಎಲ್ಲ ಸದ್ಭಕ್ತರಿಗೂ ಕೃತಜ್ಞತೆಯನ್ನು ಸಲ್ಲಿಸಿದರು.

ಹಾರಕೂಡ ಹಿರೇಮಠದ ಡಾ॥ ಚನ್ನವೀರ ಶಿವಾಚಾರ್ಯರು, ಮೇಹಕರ ಹಿರೇಮಠದ ರಾಜೇಶ್ವರ ಶಿವಾಚಾರ್ಯರು, ಡಾ॥ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ತ್ರಿಪುರಾಂತಕ, ದಸರಾ ಸಮಿತಿಯ ಎಲ್ಲ ಸದಸ್ಯರು ಶ್ರೀ ರಂಭಾಪುರಿ ಜಗದ್ಗುರುಗಳಿಗೆ ಗೌರವ ಸಮರ್ಪಿಸಿ ಬಿನ್ನವತ್ತಳೆಯನ್ನು ಅರ್ಪಿಸಿದರು.

ಈ ಪವಿತ್ರ ಸಮಾರಂಭದಲ್ಲಿ ಮಳಲಿಮಠ, ಸಿದ್ಧರಬೆಟ್ಟ, ಶಕಾಪುರ, ಸಿಂಧನೂರ, ಸಂಗೊಳ್ಳಿ, ಅಚಲೇರಿ, ಕಪಿಲಧಾರಾ,

ಪಾಳಾ ಮೊದಲಾದ ಶ್ರೀಗಳವರು ಉಪಸ್ಥಿತರಿದ್ದರು. ಆಗಮಿಸಿದ ಎಲ್ಲ ಶಿಷ್ಯ ಸದ್ಭಕ್ತರು ಜಗದ್ಗುರುಗಳಿಗೆ ಶಮೀ ಮತ್ತು ಕಾಣಿಕೆ ಸಲ್ಲಿಸಿ ಆಶೀರ್ವಾದ ಪಡೆದ ದೃಶ್ಯ ಅಪೂರ್ವವಾಗಿದ್ದನ್ನು ನಾವಿಲ್ಲಿ ನೆನಪಿಸಿಕೊಳ್ಳಬಹುದು. ಹಲವಾರು ಗಣ್ಯರು ಸೇರಿದಂತೆ ಶ್ರೀ ರಂಭಾಪುರಿ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ, ಸವಣೂರಿನ ಡಾ.ಗುರುಪಾದಯ್ಯ ಸಾಲಿಮಠ ವೇದಿಕೆಯಲ್ಲಿದ್ದರು. ಗುರುಲಿಂಗಯ್ಯ ಹಿತ್ತಲಶಿರೂರ ಇವರಿಂದ ಸಂಗೀತ ಜರುಗಿತು. ಶಾಂತಾ ಆನಂದ ಹಾಗೂ ರಮೇಶ ರಾಜೋಳೆ ನಿರೂಪಿಸಿದರು.

ಶ್ರೀಮತಿ ಸುಶೀಲಾಬಾಯಿ ಶರಣಪ್ಪ ಬಿರಾದಾರ ತ್ರಿಪೂರಾಂತ ಬಸವಕಲ್ಯಾಣ ಇವರಿಂದ ಅನ್ನ ದಾಸೋಹ ಜರುಗಿತು.

# ಕವಲೂರಿನ ಹೊನ್ನಿನಕೇರಿ ಮಲ್ಲಯ್ಯನ ಜಾತ್ರೆಯಲ್ಲಿ ಭಕ್ತಿ ಭಂಡಾರದಿ ಮಿಂದೆದ್ದ ಭಕ್ತರು

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.3: ಜಿಲ್ಲೆಯ ಕೊಪ್ಪಳ ತಾಲ್ಲೂಕಿನ ಕವಲೂರಿನಲ್ಲಿ ಹೊನ್ನಿನಕೇರಿ ಮಲ್ಲಯ್ಯನ ಜಾತ್ರೆ ಅದ್ಧೂರಿಯಾಗಿ ನಿನ್ನೆ ಸಂಪನ್ನಗೊಂಡಿದೆ. ನವರಾತ್ರಿ ಪ್ರಾರಂಭದಿಂದಲೂ ದೇವಸ್ಥಾನಕ್ಕೆ ದೀಪಾಲಂಕಾರ, ಪ್ರತಿ ನಿತ್ಯ ವಿಶೇಷ ಪೂಜೆ, ಅಭಿಷೇಕ, ನೈವೈದ್ಯ, ಹೂವಿನ ಅಲಂಕಾರದಿಂದ ಕಂಗೊಳಿಸಿದ್ದು ನಿನ್ನೆ ಚಿಕ್ಕಹಳ್ಳದಲ್ಲಿ ಗಂಗಾ ಸ್ನಾನದಿಂದ ಪ್ರಾರಂಭವಾದ ಧಾರ್ಮಿಕ ಕಾರ್ಯ ಊರಿನ ಪ್ರಮುಖ ಬೀದಿಯಲ್ಲಿ ಹೂವಿನಿಂದ ಅಲಂಕಾರಗೊಂಡ ಪಲ್ಲಕ್ಕಿಯನ್ನು ಮನಶುದ್ಧಿ ಕಾಯಕತತ್ವದಿಂದ ಹೊತ್ತು ದೀವಿಟಿಗೆ, ಡೊಳ್ಳು ಮಜುಲು, ಕಳಸ, ಮಂಗಳವಾದ್ಯ ಭಜನೆಯೊಂದಿಗೆ ಭವ್ಯ ಮೆರವಣಿಗೆ ಸಾಗಿ ಅಗ್ನಿಕೊಂಡ ಹಾಯುವ ಮೂಲಕ ಜಾತ್ರೆ ಸಂಪನ್ನಗೊಂಡಿದೆ.



ಭಂಡಾರದಿ ಮಿಂದೆಂದ ಭಕ್ತಗಣ.

ಹೊನ್ನಿನಕೇರಿ ಮಲ್ಲಯ್ಯ ಎಂದರೆ ಬಂಡಾರ ಪ್ರೀಯ ಎನ್ನುವ ವಾಡಿಕೆ, ಸುತ್ತಮುತ್ತಮುತ್ತಲಿನ ಗ್ರಾಮದಿಂದ ಆಗಮಿಸಿದ ಭಕ್ತರು ಬಂಡಾರ ಹಂಚಿ ಭಕ್ತಿ ಸಮರ್ಪಿಸಿದರು, ಭವ್ಯ ಮೆರವಣಿಗೆಯುದ್ದಕ್ಕೂ ಬಂಡಾರ ಅರ್ಪಿಸುತ್ತಾ ಹರಕೆಯನ್ನು ತೀರಿಸಿದರು. ಧಾರ್ಮಿಕ ಪೂಜಾ ವಿಧಿವಿಧಾನದಲ್ಲಿ ಸಾವಿರಾರು ಭಕ್ತರು ಭಾಗವಹಿಸಿ ಇಷ್ಟಾರ್ಥ ಸಿದ್ದಿಗೆ ಪ್ರಾರ್ಥನೆಗೈದರು. ವಿಶೇಷ ಮಂಗಳಾರತಿ ದರುಶನ ಮತ್ತು ಅಜ್ಜನ ಅಗ್ನಿಹಾಯುವ ದೃಶ್ಯ ಕಣ್ತುಂಬಿಕೊಂಡು ಅನ್ನ ಸಂತರ್ಪಣೆಯೊಂದಿಗೆ ಜಾತೆ–ಯು ಸಂಪನ್ನವಾಯಿತು. ಜಾತ್ರಾ ಕಾರ್ಯಕ್ರಮದಲ್ಲಿ ಊರಿನ ಹಿರಿಯರು, ಹೊನ್ನಿನಕೇರಿ ಮಲ್ಲಯ್ಯ ಟ್ರಸ್ಟ್ ಕಮಿಟಿಯ ಸರ್ವ ಪದಾಧಿಕಾರಿಗಳು, ಮುಖಂಡರು, ಯುವಕರು,

ಮಹಿಳೆಯರು, ಕಲಾವಿದರು ಮಕ್ಕಳು ಭಾಗಿಯಾಗಿ ಜಾತ್ರೆಯನ್ನು ಯಶಸ್ವಿಗೊಳಿಸಿದರು.

# ಅತಿವೃಷ್ಟಿ, ಪ್ರವಾಹದಿಂದ 270 ವಿದ್ಯುತ್ ಪರಿವರ್ತಕಗಳು, 700 ಕಂಬಗಳಿಗೆ ಹಾನಿ

ಕಲಬುರ್ಗಿ,ಅ.3–ಅತಿವೃಷ್ಟಿ ಹಾಗೂ ಪ್ರವಾಹದಿಂದಾಗಿ ಜಿಲ್ಲೆಯಲ್ಲಿ ಸುಮಾರು 270 ವಿದ್ಯುತ್ ಪರಿವರ್ತಕಗಳು ಹಾಗೂ 700 ವಿದ್ಯುತ್ ಕಂಬಗಳಿಗೆ ಹಾನಿಯಾಗಿದೆ ಎಂದು ಗುಲಬರ್ಗಾ ವಿದ್ಯುತ್ ಪ್ರಸರಣಾ ನಿಗಮದ ನೂತನ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ್ ಅವರು ಹೇಳಿದರು.



ಜಿಲ್ಲೆಯ ಜೇವರ್ಗಿ ತಾಲ್ಲೂಕಿನ ಚಿತ್ತಾಪುರ, ಕಡಬೂರು, ಕಾಗಿಣ ಸೇತುವೆ ಮತ್ತು ರದ್ದೇವಾಡಗಿಯ ಹಲವಾರು ಭಾಗಗಳಲ್ಲಿ ಭಾರಿ ಮಳೆಯಿಂದಾಗಿ ವಿದ್ಯುತ್ ಮೂಲಸೌಕರ್ಯಕ್ಕೆ ವ್ಯಾಪಕ ಹಾನಿಯಾಗಿದೆ ಎಂದು ಗುರುವಾರ ಪ್ರವಾಹ ಪೀಡಿತ ಪ್ರದೇಶಗಳಿಗೆ ವೈಯಕ್ತಿಕವಾಗಿ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿ ತಿಳಿಸಿದರು.

ಹಲವಾರು ಸ್ಥಳಗಳಲ್ಲಿ ಪ್ರವಾಹದ ನೀರು ಇನ್ನೂ ಸಂಪೂರ್ಣವಾಗಿ ಇಳಿಯದ ಕಾರಣ ಪುನಃಸ್ಥಾಪನೆ ಕಾರ್ಯಕ್ಕೆ ಅಡ್ಡಿಯಾಗಿದೆ, ಇದ–ರಿಂದಾಗಿ ದುರಸ್ತಿ ಕಾರ್ಯಗಳು ಕಷ್ಟಕರವಾಗಿವೆ. ರೈತರು ಮತ್ತು ನಿವಾಸಿಗಳಿಗೆ ತಕ್ಷಣದ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಭರವಸೆ ನೀಡಿದ ಅವರು, ನೀರು ಕಡಿಮೆಯಾದ ನಂತರ ಎಲ್ಲ ಪುನಃಸ್ಥಾಪನೆ ಕಾರ್ಯಗಳನ್ನು ಯುದ್ಧೋಪಾದಿಯಲ್ಲಿ ಪೂರ್ಣಗೊಳಿಸಲು ನಾನು ನಮ್ಮ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ರೈತರಿಗೆ ಪರಿಹಾರ ನೀಡುವುದು ಮತ್ತು ಸಾಧ್ಯವಾದಷ್ಟು ಬೇಗ ನಿರಂತರ ವಿದ್ಯುತ್ ಸರಬರಾಜು ಖಚಿತಪಡಿಸಿಕೊಳ್ಳುವುದು ನಮ್ಮ ಆದ್ಯತೆಯಾಗಿದೆ ಎಂದರು.

ಜೆಸ್ಕಾಂ ತಂಡಗಳು ಕಾರ್ಯಪ್ರವೃತ್ತವಾಗಿದ್ದು, ಪರಿಸ್ಥಿತಿಗಳು ಅನುಕೂಲಕರವಾದ ತಕ್ಷಣ ದೊಡ್ಡ ಪ್ರಮಾಣದ ದುರಸ್ತಿ ಮತ್ತು ಬದಲಿ ಕಾರ್ಯಗಳನ್ನು ಪ್ರಾರಂಭಿಸಲಿವೆ ಎಂದು ಹೇಳಿದ ಅವರು, ಪ್ರವಾಹ ಪರಿಸ್ಥಿತಿಯು ಹಲವಾರು ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಳಿಸಿದ್ದು, ರೈತರು ಮತ್ತು ನಿವಾಸಿಗಳ

ಸಂಕಷ್ಟಗಳನ್ನು ಹೆಚ್ಚಿಸಿದೆ.

ಪರಿಹಾರಕ್ರಮಗಳನ್ನು ವೇಗಗೊಳಿಸಲು ಅಧಿಕಾರಿಗಳು ಈಗ ಸ್ಥಳೀಯ ಆಡಳಿತದೊಂದಿಗೆ

ಸಮನ್ವಯದೊಂದಿಗೆ ಕೆಲಸ ಮಾಡುತ್ತಿದ್ದಾರೆ ಎಂದರು.

# ಕನ್ನಡ ಉಳಿಸುವ ಕಾರ್ಯವಾಗಲಿ: ಮಂಜಮ್ಮ ಜೋಗುತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.3– ಕನ್ನಡ ಭಾಷೆಯನ್ನುಉಳಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದ್ದು, ಭಾಷೆ ಕೇವಲ ಆಡಂಬರದ ಆಚರಣೆಗೆ ಸೀಮಿತವಾಗದೆ ಕನ್ನಡ ಭಾಷೆ ಹಾಗೂ ಕನ್ನಡ ಶಾಲೆಗಳ ಉಳಿವಿಗೆ ಶ್ರಮಿಸಬೇಕು ಎಂದು ಪದ್ಮಶ್ರೀ ಪುರಸ್ಕೃತೆ ಮಂಜಮ್ಮ ಜೋಗತಿ ಹೇಳಿದರು.

ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದಲ್ಲಿ ಮೇಘಮೈತ್ರಿ ಕನ್ನಡ ಸಾಹಿತ್ಯ ಸಂಘ ಹಾಗೂ ದಸರಾ ಉತ್ಸವ ಸಮಿತಿ ಸಹಯೋಗದಲ್ಲಿ ಆಯೋಜಿಸಿದ್ದ ದಸರಾ ಉತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕನ್ನಡ ಭಾಷೆ, ನಾಡು ನುಡಿಗೆ ತನ್ನದೇ ಆದ ಶ್ರೀಮಂತಿಕೆ ಇದೆ. ಕನ್ನಡ ಭಾಷೆಯನ್ನು ಉಳಿಸುವ ಕೆಲಸ ಮನೆಯಿಂದಲೇ ಪ್ರಾರಂಭವಾಗಬೇಕು. ಪುಸ್ತಕಗಳನ್ನು ಕೊಂಡು ಓದುವ ಹವ್ಯಾಸ ನಮ್ಮದಾಗಬೇಕು. ಅಂದಾಗ ಸಾಹಿತ್ಯ ಉಳಿಯುತ್ತದೆ ಎಂದರು.

ಮುಧೋಳದ ಪ್ರಗತಿಪರ ರೈತ ಚಂದ್ರಶೇಖರ ದೇಸಾಯಿ ಕಾರ್ಯಕ್ರಮ ಉದ್ಘಾಟಿಸಿದರು. ಮೇಘ ಮೇತ್ರಿ ಕನ್ನಡ ಸಂಘದ ಅಧ್ಯಕ್ಷ ರಮೇಶ ಕಮತಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪದ್ಮಶ್ರೀ ಪುರಸ್ಕೃತ ಹಿರಿಯ ಜಾನಪದಕಲಾವಿದ ವೆಂಕಪ್ಪ ಸುಗತೇಕರ, ಶರಣ ಸಾಹಿತ್ಯ ಪರಿಷತ ಜಿಲ್ಲಾಧ್ಯಕ್ಷ ಎ.ಎಸ್.ಪಾವಟೆ, ಸಾಹಿತಿಗಳಾದ ಪ್ರಕಾಶ ಖಾಡೆ, ಕಿರಣ ಬಾಳಗೋಳ, ಪ್ರಕಾಶ ನರಗುಂದ, ಬಸವರಾಜ ಗವಿಮಠ ಮಾತನಾಡಿದರು.

ಸಾಹಿತಿ ವೆಂಕಟೇಶ ಗುಡೆಪ್ಪನವರ ಅವರ 'ದಮನಿತರ ಧ್ವನಿ' ಕೃತಿ ಲೋಕಾರ್ಪಣೆಗೊಳಿಸಲಾಯಿತು. ಹಿರೇಮಠದ ಶಿವಕುಮಾರ ಶಿವಾಚಾರ್ಯ ಸ್ವಾಮೀಜಿ, ಬಸವಣ್ಣೆಮ್ಮ ಬಸರ–ಕೋಡ, ಪಟ್ಟಣ ಪಂಚಾಯಿತಿ ಅಧ್ಯಕ್ಷ ಬಸವರಾಜ ಕುಂಬಳಾವತಿ, ಉಪಾಧ್ಯಕ್ಷೆ ನೇತ್ರಾವತಿ ನಿಂಬಲಗುಂದಿ,

ಶಾಂತಾ ಕರಡಿಗುಡ್ಡ, ಅನಿತಾ ಪಾಟೀಲ, ಆನಂದ ಪೂಜಾರಿ, ಮಲ್ಲಪ್ಪ ಮೇಟಿ, ಮುತ್ತು ಬಳ್ಳಾ, ಈಶ್ವರ ಮೇಟಿ, ವೆಂಕಟೇಶ ಗುಡೆಪ್ಪನವರ, ವಿನೋದ್ ಬೊಂಬ್ಲೆಕರ್, ಹನಮಂತ ತೋಟಗೇರ ಸೇರಿದಂತೆ ಇತರರು ಇದ್ದರು. ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನಿಸಲಾಯಿತು.

# ಭವಾನಿ ಮಾತೆ ಪಲ್ಲಕ್ಕಿ ಉತ್ಸವಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಅ.3:ನಗರದ ನಾಗಣ್ಣ ಕಟ್ಟಿ ಹತ್ತಿರದಲ್ಲಿನ ಭವಾನಿ ಮಂದಿರದಲ್ಲಿ ಭಾವಸಾರ ಕ್ಷತ್ರಿಯ ಸಮಾಜ ವತಿಯಿಂದ ಆಯೋಜಿಸಿದ್ದ ಭವಾನಿ ಮಾತೆ ಪಲ್ಲಕ್ಕಿ ಉತ್ಸವಕ್ಕೆ ವಿಧಾನ ಪರಿಷತ್ ಸದಸ್ಯರಾದ ಶ್ರೀ ಭೀಮರಾವ ಪಾಟೀಲ್ ಚಾಲನೆ ನೀಡಿದರು.

ಭಾವಸಾರ ಕ್ಷತ್ರಿಯ ಸಮಾಜದ ಕೆಲ ಮುಖಂಡರು ಮಾತನಾಡಿ, ಭವಾನಿ ಮಾತೆ ದೇವಸ್ಥಾನ ಹಾಗೂ ಭಾವಸಾರ ಕ್ಷತ್ರಿಯ ಸಮಾಜದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ಮಾಜಿ ಸಚಿವರಾದ ಶ್ರೀ ಬಸವರಾಜ ಪಾಟೀಲ್ ಹಾಗೂ ಮಾಜಿ ಸಚಿವರಾದ ಶ್ರೀ ರಾಜಶೇಖರ ಪಾಟೀಲ್ ಅನೇಕ ಯೋಜನೆಗಳನ್ನು ನೀಡಿದ್ದಾರೆ. ಇನ್ನೂ ಹೆಚ್ಚಿನ ಅಭಿವೃದ್ಧಿಗಾಗಿ ಭಾವಸಾರ ಕ್ಷತ್ರಿಯ ಸಮಾಜಕ್ಕೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಬಳಿಕ ವಿಧಾನ ಪರಿಷತ್ ಸದಸ್ಯರಾದ ಶ್ರೀ ಭೀಮರಾವ ಪಾಟೀಲ್ ಮಾತನಾಡಿ, ಭಾವಸಾರ ಕ್ಷತ್ರಿಯ ಸಮಾಜದ ಅಭಿವೃದ್ಧಿ ಕಾರ್ಯಗಳಿಗೆ ನಮ್ಮ ಪಾಟೀಲ್ ಪರಿವಾರ ಸಹಕಾರ ನೀಡುತ್ತಲೆ ಬಂದಿದೆ. ಈಗಲೂ ಭಾವಸಾರ ಕ್ಷತ್ರಿಯ ಸಮಾಜದ ಬೇಡಿಕೆಯಂತೆ ಶೀಘ್ರದಲ್ಲೇ 5 ಅನುದಾನ ನೀಡುವ ಮೂಲಕ ಸಮಾಜದ ಅಭಿವೃದ್ಧಿಗೆ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಉತ್ಸವ ಸಮಿತಿ ಪದಾಧಿಕಾರಿಗಳು, ಭಕ್ತಾಧಿಗಳು ಉಪಸ್ಥಿತರಿದ್ದರು.

# ಡಾ.ಸಿದ್ರಾಮ ವಾಘಮಾರೆಗೆ ತಪ್ಪಿದ ನಿಗಮ ಮಂಡಳಿ ಸ್ಥಾನ



ಬಳ್ಳಾರಿ:ಅ.3: ಕರ್ನಾಟಕ ಪ್ರದೇಶ ಕಾಂಗ್ರೆಸ್ ಪಕ್ಷದ ಸಕ್ರಿಯ ಸದಸ್ಯರಾಗಿ ಕಳೆದ ಐದು ದಶಕಗಳಿಂದ ದುಡಿದಿದ್ದ ಡಾ.ಸಿದ್ರಾಮ ವಾಘಮಾರೆ ಅವರಿಗೆ ಈ ಬಾರಿಯಾದರೂ ನಿಗಮ, ಮಂಡಳಿಗೆ ಸ್ಥಾನ ಮಾನ ಸಿಗುವುದೆಂಬ ನಿರೀಕ್ಷೆಯಲ್ಲಿದ್ದ ಗೋಂಧಳಿ ಸಮುದಾಯದ ಜನರಿಗೆ ನಿರಾಸೆಯಾಗಿದೆ.

ಕಳೆದ ವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೆಲ ನಿಗಮ, ಮಂಡಳಿಗಳ ಅಧ್ಯಕ್ಷರನ್ನು ನಿಯೋಜಿಸಿ ಆದೇಶ ಹೊರಡಿಸಿದ್ದರು. ಗೋಂಧಳಿ ಸಮುದಾಯದ ಡಾ.ಸಿದ್ರಾಮ ವಾಘಮಾರೆ ಅವರಿಗೆ ನಿಗಮ, ಮಂಡಳಿಯಲ್ಲಿ ಸ್ಥಾನ ಸಿಗುವುದೆಂಬ ನಿರೀಕ್ಷೆ ಮತ್ತೆ ಹುಸಿಯಾಗಿದೆ. ನಿಗಮ, ಮಂಡಳಿಗೆ ಸ್ಥಾನ ನೀಡಬೇಕೆಂದು ಕರ್ನಾಟಕ ಸರ್ಕಾರದ ಸಚಿವ ಸಂಪುಟದ ಸಚಿವರಾದ ಈಶ್ವರ್ ಖಂಡ್ರೆ, ಶಿವರಾಜ್ ತಂಗಡಗಿ, ರಹೀಂ ಖಾನ್, ಪ್ರಿಯಾಂಕ್ ಖರ್ಗೆ, ಜಮೀರ್ ಅಹ್ಮದ್ ಖಾನ್, ಮಾಜಿ ಸಚಿವ ರಾಜಶೇಖರ ಪಾಟೀಲ್ ಆದಿಯಾಗಿ ಸರ್ಕಾರದ ಹಲವು ಸಚಿವರಿಗೆ ಮನವಿ ಮಾಡಿದ್ದರು. ಸಚಿವರು ಕೂಡ ಈ ಕುರಿತು ಡಾ.ವಾಘಮಾರೆ ಅವರಿಗೆ ಭರವಸೆ ನೀಡಿದ್ದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೂ ಮನವಿ ಮಾಡಲಾಗಿತ್ತು. ಈ ಬಾರಿಯೂ ನಿಗಮ, ಮಂಡಳಿಗೆ ಸ್ಥಾನ ಮಾನ ನೀಡದೇ ಇರುವುದರಿಂದ ಡಾ.ಸಿದ್ರಾಮ ವಾಘಮಾರೆ ಅವರಿಗೆ ಮಾತ್ರವಲ್ಲ, ಸಣ್ಣ ಸಮುದಾಯಗಳಿಗೆ ಮಾಡಿದ ಅನ್ಯಾಯವಾಗಿದೆ ಎಂದು ಸಮುದಾಯದ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಮಾಧ್ಯಮದವರಲ್ಲಿ ತಮ್ಮ ಅಳಲನ್ನು ತೋಡಿಕೊಂಡಿರುವ ಗೋಂಧಳಿ ಐಕ್ಯತಾ ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ವೀರೇಶರಾವ್ ಪಾಚಂಗೆ, ಸಂಚಾಲಕರಾದ ತುಕಾರಾಮ್ ಸುರ್ವೆ, ಅಲೆಮಾರಿ ಸಮುದಾಯಗಳ ಒಕ್ಕೂಟದ ಧುರೀಣರಾದ ಶಿವಾನಂದ್ ಪಾಚಂಗೆ, ಅಲೆಮಾರಿ ಸಮುದಾಯದ ಚಿಂತಕರಾದ ತುಕಾರಾಮ್ ವಾಷ್ಟರ್, ಗೋಂಧಳಿ ಸಮಾಜದ ಕಲಾವಿದರು ಮತ್ತು ಸಾಹಿತಿಗಳಾದ ಗೋಪಾಲ್ ಪಾರಗೆ, ಮುಖಂಡರಾದ ಮಾರ್ತಂಡಪ್ಪ ನಾಯ್ಕಲ್, ತುಕಾರಾಮ್ ಗುಡಕರ್, ವಿಜಯ್ ಭರತ್ ಇನ್ನಿತರರು ಸ್ವಾತಂತ್ರ ??ನಂತರದ ದಿನಗಳಿಂದಲೂ ಗೋಂಧಳಿ ಸಮುದಾಯ ಅನ್ಯಾಯಕ್ಕೆ ಒಳಗಾಗುತ್ತಲೇ ಇದೆ. ಪಕ್ಷಕ್ಕಾಗಿ ಎಷ್ಟೇ ದುಡಿದರೂ ಸಮುದಾಯದ ಕಾಂಗ್ರೆಸ್ ಕಾರ್ಯಕರ್ತರನ್ನು ಕಡೆಗಣಿಸುತ್ತಲೇ ಬರಲಾಗುತ್ತಿದೆ.

ಅತಿ ಸಣ್ಣ ಸಮುದಾಯದಲ್ಲಿ ಜನಿಸಿ, ಇಂದಿರಾಗಾಂಧಿ, ರಾಜೀವ್ ಗಾಂಧಿ ಮತ್ತು ಸೋನಿಯಾಗಾಂಧಿ ಅವರ ಅಭಿಮಾನಿಯಾಗಿ ಕಾಂಗ್ರೆಸ್ ಪಕ್ಷಕ್ಕೆ ಹಗಲಿರುಳೂ ದುಡಿಯುತ್ತಿರುವ ಡಾ.ಸಿದ್ರಾಮ ವಾಘಮಾರೆ ಅವರಿಗೆ ನಿಗಮ, ಮಂಡಳಿಯಲ್ಲಿ ಸ್ಥಾನ ಮಾನ ನೀಡಬೇಕಿತ್ತು. ಸಾಮಾಜಿಕ ನ್ಯಾಯದ ಹರಿಕಾರರಾದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಮ್ಮ ಸಮುದಾಯದ ಡಾ.ಸಿದ್ರಾಮ ವಾಘಮಾರೆ ಅವರನ್ನು ಹೊರತುಪಡಿಸಿ ಉಳಿದ 46 ಸಣ್ಣ ಜಾತಿಗಳ ಯಾವುದಾದರೋ ಒಬ್ಬ ಮುಖಂಡರಿಗೆ ನಿಗಮ ಮಂಡಳಿಗೆ ನಿಯೋಜಿಸಬಹುದಿತ್ತು. ಒಟ್ಟಿನಲ್ಲಿ ಅಲೆಮಾರಿ ಸಮುದಾಯಗಳನ್ನು ಕಾಂಗ್ರೆಸ್ ಸರ್ಕಾರ ಮತ್ತು ಕೆಪಿಸಿಸಿ ನಾಯಕರು ಕಡೆಗಣಿಸುತ್ತಿರುವುದು ನಮಗೆ ನೋವುಂಟು ಮಾಡಿದೆ ಎಂದು ಅವರು ತಿಳಿಸಿದ್ದಾರೆ.

# ಮಜಿದ್, ದರ್ಗಾ ಅಭಿವೃದ್ಧಿಗೆ 65 ಲಕ್ಷ ಅನುದಾನ ಮಂಜೂರು, ಅಖಾಡ ಮುಖಂಡರ ಹರ್ಷ:ಮಾಜಿ ಸಚಿವ ರಾಜಶೇಖರ ಪಾಟೀಲ್‌ಗೆ ಅದ್ದೂರಿ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಅ.3: ಪಟ್ಟಣದ ಮಜಿದ್ ಇ ನೂರ ಹಾಗೂ ಚಿಲ್ಲಾ ಲಾಡ್ಲೆ ಮಶಾಖ ದರ್ಗಾ ದುರಸ್ಥಿ ಮತ್ತು ಅಭಿವೃದ್ಧಿ ಕಾರ್ಯಕ್ಕೆ 65 ಲಕ್ಷ ಅನುದಾನ ಮಂಜೂರು ಆಗಿರುವ ಹಿನ್ನಲೆ ಪಟ್ಟಣದ ಮಾಜಿ ಸಚಿವರ ಗೃಹ ಕಚೇರಿಯಲ್ಲಿ ಶುಕ್ರವಾರ ನೂರಖಾನ್ ಅಖಾಡ ಮುಖಂಡರು ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ಸನ್ಮಾನಿಸಿದರು.

ನೂರಖಾನ್ ಅಖಾಡದ ಕೆಲ ಮುಖಂಡರು ಮಾತನಾಡಿ, 2025–26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ ಇಲಾಖೆ ವತಿಯಿಂದ ಹುಮನಾಬಾದ ಪಟ್ಟಣದ ಮಜಿದ್ ಇ ನೂರ ಅಭಿವೃದ್ಧಿಗೆ 60 ಲಕ್ಷ ಹಾಗೂ ಚಿಲ್ಲಾ ಲಾಡ್ಲೆ ಮಶಾಖ ದರ್ಗಾ ಅಭಿವೃದ್ಧಿಗೆ 5 ಲಕ್ಷ ಸೇರಿ ಒಟ್ಟು 65 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ. ಈ ಅನುದಾನ ಮಂಜೂರು ಮಾಡುವುದಕ್ಕೆ ಶ್ರಮ ವಹಿಸಿದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ಸನ್ಮಾನ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಮಾಜಿ ಸಚಿವ ರಾಜಶೇಖರ ಪಾಟೀಲ್ ಮಾತನಾಡಿ, ನೂರ್ ಖಾನ್ ಅಖಾಡ ಮುಖಂಡರ ಬೇಡಿಕೆ–ಯಂತೆ ಸಚಿವ ಜಮೀರ್ ಅಹ್ಮದ್ ಅವರಿಗೆ ಭೇಟಿ ಮಜಿದ್ ಇ ನೂರ ಹಾಗೂ ಚಿಲ್ಲಾ ಲಾಡ್ಲೆ ಮಶಾಖ ದರ್ಗಾ ದುರಸ್ಥಿ ಮತ್ತು ಅಭಿವೃದ್ಧಿ ಕಾರ್ಯಕ್ಕೆ ಅನುದಾನ ನೀಡುವಂತೆ ಮನವಿ ಮಾಡಲಾಗಿತ್ತು. ನಮ್ಮ ಮನವಿಗೆ ಸ್ಪಂಧಿಸಿ ಸಚಿವ ಜಮೀರ್ ಅಹ್ಮದ್ ಅವರು 65 ಲಕ್ಷ ರೂಪಾಯಿ ಅನುದಾನ ನೀಡಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್, ಜಿಪಂ. ಮಾಜಿ ಸದಸ್ಯ ವೀರಣ್ಣ ಪಾಟೀಲ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರಮಿಯ, ಇಕ್ಬಾಲ್, ಲಿಯಾಖತ್, ಸೈಯದ್ ಬಾಷೀದ್, ಸೈಯದ್ ಕಲಿಮುಲ್ಲಾ, ಶಖೀಲ್ ಲಸ್ಕರಿ, ಸೈಯದ್ ಖಾಜಾ, ಷಾ ನವಾಜ್ ಖಾನ್, ಮಹ್ಮದ್ ಜಾನಿ ಗುತ್ತೆದಾರ್, ಅಬ್ದುಲ್ ಸಲೀಂ, ಖಾಜಾ ಇಂಜಿನಿಯರ್, ಯುನಿಸ್, ರಫೀಕ್, ಫಿರೋಜ್, ಸಿದ್ದಿಕ್, ಸದ್ದಾಮ್ ಸೇರಿ ಅನೇಕರಿದ್ದರು.

> ಕ್ಷೇತ್ರವ್ಯಾಪ್ತಿಯ ಸಮಗ್ರ ಅಭಿವೃದ್ಧಿ ನಮ್ಮ ಜವಬ್ದಾರಿ. ಈ ಹಿನ್ನಲೆ ಪಕ್ಷ ಬೇಧವಿಲ್ಲದೇ ಎಲ್ಲ ಗ್ರಾಮ, ಎಲ್ಲ ಸಮುದಾಯದ ಜನರ ಕಲ್ಯಾಣಕ್ಕೆ ಶ್ರಮ ವಹಿಸುತ್ತೇವೆ. ರಾಜ್ಯದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಸೇರಿದಂತೆ ಸಚಿವರಿಗೆ ಮನವಿ ಮಾಡುವ ಮೂಲಕ ಹುಮನಾಬಾದ್ ಕ್ಷೇತ್ರದ ಅಭಿವೃದ್ಧಿಗೆ ಶ್ರಮ ವಹಿಸುತ್ತೇವೆ.
> **ರಾಜಶೇಖರ ಪಾಟೀಲ್**
> **ಮಾಜಿ ಸಚಿವ, ಹುಮನಾಬಾದ್**

# ಅಣ್ಣವೀರಭದ್ರೇಶ್ವರ ಟ್ರೇಲರ್ಸ್‌ನಿಂದ ತುಳಜಾಪುರ, ಪಾದಯಾತ್ರಿಗಳಿಗೆ ಅನ್ನದಾಸೋಹ: ಮಾಜಿ ಸಚಿವ ರಾಜಶೇಖರ್ ಪಾಟೀಲ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಅ.3: ನೆರೆಯ ಮಹಾರಾಷ್ಟ್ರದ ತುಳಜಾಪುರ ಅಂಬಾ ಭವಾನಿದೇವಿಯ ದರ್ಶನಕ್ಕೆ ಪಾದಯಾತ್ರೆ ಮೂಲಕ ತೆರಳುತ್ತಿರುವ ಭಕ್ತರಿಗಾಗಿ ಪಟ್ಟಣದ ಹೊರವಲಯದಲ್ಲಿರುವ ಶ್ರೀ ಅಣ್ಣವೀರಭದ್ರೇಶ್ವರ ಟ್ರೇಲರ್ಸ್ ವತಿಯಿಂದ ಶುಕ್ರವಾರ ಆಯೋಜಿಸಿದ ಅನ್ನದಾಸೋಹ ಪ್ರಸಾದಕ್ಕೆ ಮಾಜಿ ಸಚಿವ ರಾಜಶೇಖರ್ ಪಾಟೀಲ ಅವರು ಚಾಲನೆ ನೀಡಿದರು.

ಇಲ್ಲಿನ ಶ್ರೀ ಅಣ್ಣವೀರಭದ್ರೇಶ್ವರ ಟ್ರೇಲರ್ಸ್‌ನಿಂದ ನಡೆದ ದಾಸೋಹದಲ್ಲಿ ಕರ್ನಾಟಕ ಸೇರಿದಂತೆ ನೆರೆಯ ಆಂಧ್ರಾ ಪ್ರದೇಶ, ತೆಲಂಗಾಣದಿಂದ ಪಾದ ಯಾತ್ರೆ ಮೂಲಕ ತುಳಜಾಪುರಕ್ಕೆ ತೆರಳುತ್ತಿರುವ ಸಾವಿರಾರೂ ಭಕ್ತರು ಇಲ್ಲಿ ಮಾಡಿರುವ ಭಜ್ಜಿ, ಕಡಕ ಸಜ್ಜಿ ರೊಟ್ಟಿ, ಜೋಳದ ರೊಟ್ಟಿ, ಸಾಬುದಾಣಿ ಪಾಯಸಾ, ಅನ್ನ, ಸಾಂಬರ, ಮಿರ್ಚಿ ಭಜಿ, ಪ್ರಸಾದವನ್ನು ಸೇವಿಸಿ ತುಳಜಾಪುರ ಅಂಬಾ ಭವಾನಿ ದೇವಿಯ ದರ್ಶನಕ್ಕೆ ತೆರಳಿದರು.

ಶ್ರೀ ಅಣ್ಣವೀರಭದ್ರೇಶ್ವರ ಟ್ರೇಲರ್ಸ್‌ನ ಮಾಲೀಕರಾದ ರಾಜಶೇಖರ್ ಚಿಂಚೋಳಿ, ಪ್ರಮುಖರಾದ ಯುವರಾಜ ಚಿಂಚೋಳಿ, ಶರಣು ನಾವದಗಿ, ಸಂಜು ವಡ್ಡನಕೇರಾ, ರಾಜಕುಮಾರ ಪಾಟೀಲ, ಕಿರಣ ಪಾಟೀಲ, ನರಸಪ್ಪ ಪರಸನೋರ, ಅರವಿಂದ ಧುಮಾಳೆ, ಬಸವರಾಜ ಕನಕಟ್ಟಾ, ಸತೀಶ ಪಂಚಾಳ, ರಮೇಶ ಮೇಕ್ಯಾನಿಕ. ಕಂಟೆಪ್ಪಾ ಬಿರಾದರ್ ಕಲ್ಲೂರು, ಹಣಮಂತ ಕಾಂಬಳೆ, ಮಲ್ಲಪ್ಪ ತುಪ್ಪದ, ರಾಜು ಉಪ್ಪಳೆ, ಶಶಿ ಸೀಗಿ, ಚಿದಾನಂದ ಭಾವಿ, ಮಂಜು ಚಾಂಗಲೇರಾ ಸೇರಿದಂತೆ, ಅನೇಕರು, ಇದ್ದರು.

# ಅಣವೀರಭದ್ರೇಶ್ವರ ಟ್ರೈಲಿ ವರ್ಕ್‌ಶಾಪ್ ಗೆಳೆಯರ ಬಳಗದಿಂದ ಹುಮನಾಬಾದ್‌ನಲ್ಲಿ ಭಕ್ತರಿಗಾಗಿ ಉಚಿತ ವೈದ್ಯಕೀಯ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್, ಅ. 3:ಹುಮನಾಬಾದ್‌ನ ಶ್ರೀ ವೀರಭದ್ರೇಶ್ವರ ಹೋಮಿಯೋಪತಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯು ದಸರಾ ಹಬ್ಬದ ಅಂಗವಾಗಿ ಮಹಾರಾಷ್ಟ್ರದ ತುಳಜಾಪೂರ ದೇವಸ್ಥಾನಕ್ಕೆ ಪಾದಯಾತ್ರೆ ಮೂಲಕ ಹೋಗುವ ಭಕ್ತರಿಗಾಗಿ ಹುಮನಾಬಾದ್‌ನ ರಾಜಶೇಖರ ಚಿಂಚೋಳಿ ಅಣವೀರಭದ್ರೇಶ್ವರ ಟ್ರೈಲಿ ವರ್ಕ್‌ಶಾಪ್ ಗೆಳೆಯರ ಬಳಗ ವತಿಯಿಂದ ಪಟ್ಟಣದ ಆರ್‌ಟಿಒ ಕಚೇರಿಯ ಬಳಿ ಉಚಿತ ವೈದ್ಯಕೀಯ ಶಿಬಿರವನ್ನು ಆಯೋಜಿಸಲಾಯಿತ್ತು. ಶಿಬಿರವು ಮಧುಮೇಹ, ಅಧಿಕ ರಕ್ತದೊತ್ತಡ, ಬೊಜ್ಜು ಮತ್ತು ಥೈರಾಯ್ಡ್ ಅಸ್ವಸ್ಥತೆಗಳು ಸೇರಿದಂತೆ ಸಾಂಕ್ರಾಮಿಕವಲ್ಲದ ಕಾಯಿಲೆಗಳ (ಎನ್‌ಸಿಡಿ) ತಪಾಸಣೆಯ ಮೇಲೆ ಕೇಂದ್ರೀಕರಿಸಿದೆ. ಸಮಗ್ರ ಪೋಷಣೆಯ ಕುರಿತು ಆರೋಗ್ಯ ಜಾಗೃತಿ ಮೂಡಿಸಲಾಯಿತು. ಶಿಬಿರದ ಮುಖ್ಯ ಅತಿಥಿಗಳಾಗಿ ಬೀದರ್‌ನ ವಿಧಾನ ಪರಿಷತ್ ಸದಸ್ಯರಾದ ಶ್ರೀ ಭೀಮರಾವ್ ಬಿ. ಪಾಟೀಲ್ ಮಾತನಾಡಿ, ಭಕ್ತರೇ ಪಾದಯಾತ್ರೆ ಮೂಲಕ ತೆರಳುವ ಸಂದರ್ಭದಲ್ಲಿ ರಸ್ತೆಯ ಮೇಲ್ಗಡೆಯಿಂದ ತೆರಳಬೇಡಿ, ಏಕೆಂದರೆ ಮೋಟರ್ ಸೈಕಲ್‌ಗಳು ತೆರಳುತ್ತವೆ ಆದ್ದರಿಂದ ರಸ್ತೆಯ ಪಕ್ಕದ ಫುಟ್‌ಪತ್ ಮೇಲಿಂದ ನಿಧಾನವಾಗಿ ತೆರಳಿ ತುಳಜಾಪೂರ ಅಂಬಾಭವಾನಿ ತಾಯಿಯ ದರ್ಶನ ಪಡೆದು ಪುನೀತರಾಗಬೇಕೆಂದು ಭಕ್ತರಲ್ಲಿ ಮನವಿ ಮಾಡಿದರು. ಆರೋಗ್ಯ ಅತ್ಯಂತ ಬೆಲೆ ಬಾಳುವ ವಸ್ತು. ಆರೋಗ್ಯವೇ ಭಾಗ್ಯ. ಆರೋಗ್ಯ ಕೆಟ್ಟ ಮೇಲೆ ಪರಿತಪಿಸುವುದಕ್ಕಿಂತ ಮೊದಲೇ ಎಚ್ಚರವಾಗಿರಬೇಕು. ಪೂರಕವಾದ ಆಹಾರ ಸೇವಿಸಬೇಕು ಎಂದು ಹೇಳಿದರು. ಈ ಶಿಬಿರದಲ್ಲಿ ಭಕ್ತಾಧಿಗಳು ಪಾಲ್ಗೊಂಡು ಆರೋಗ್ಯ ತಪಾಸಣೆ ಮಾಡಿಸಿಕೊಂಡು ಆರೋಗ್ಯವಂತರಾಗಬೇಕೆಂದು ಕರೆ ನೀಡಿದರು. ತುಳಜಾಪೂರ ದೇವಸ್ಥಾನಕ್ಕೆ ಪಾದಯಾತ್ರೆ ಮೂಲಕ ತೆರಳುವ ಭಕ್ತರಿಗೆ ರಕ್ತದಲ್ಲಿನ ಸಕ್ಕರೆ – ಬಿಪಿ, ಜ್ವರ, ಕೈಕಾಲು ನೋವು ಹಾಗೂ ಇತ್ಯಾದಿ ಪರೀಕ್ಷೆಯಂತಹ ಅಗತ್ಯ ತನಿಖೆಗಳನ್ನು ಒದಗಿಸಲಾಯಿತು. ಕಾಲೇಜಿನ ಅಧ್ಯಾಪಕ ಸದಸ್ಯರು ಮತ್ತು ಅಂತಿಮ ವರ್ಷದ ಬಿಎಚ್‌ಎಂಎಸ್ ವಿದ್ಯಾರ್ಥಿಗಳನ್ನು ಒಳಗೊಂಡ ಸಮರ್ಪಿತ ತಂಡವು ವೈದ್ಯಕೀಯ ಆರೈಕೆ ಮತ್ತು ಸಮಾಲೋಚನೆಯನ್ನು ನೀಡಲಾಯಿತ್ತು. ಡಾ. ಭಾಗ್ಯಶ್ರೀ, ಡಾ. ಪ್ರಶಾಂತ್ ಹುಡ್ಗಿ, ಶ್ರೀ. ಸಂ–ಜಯ್ ಗುತ್ತೇದಾರ್ ಮತ್ತು ಡಾ. ಇಂದ್ರಜೀತ್ ಶಾ ಅವರು ತಜ್ಞರ ಮಾರ್ಗದರ್ಶನವನ್ನು ನೀಡಿದರು. ಭಕ್ತಾಧಿಗಳಿಗಾಗಿ ಈ ಶಿಬಿರವು ಉತ್ಸಾಹದಿಂದ ಭಾಗವಹಿಸಿದ್ದರು. ಶಿಬಿರದ ಸಂಘಟಕರಾದ ಶ್ರೀ ರಾಜೇಶ್ವರ್ ಚಿಂಚೋಳಿ ಅವರ ಬೆಂಬಲ ಮತ್ತು ಭಕ್ತರಿಗೆ ಉಚಿತ ಆಹಾರವನ್ನು ಒದಗಿಸಿದ್ದಕ್ಕಾಗಿ ಅವರಿಗೆ ವಿಶೇಷ ಧನ್ಯವಾದಗಳನ್ನು ಅರ್ಪಿಸಲಾಯಿತು. ಶಿಬಿರವನ್ನು ಯಶಸ್ವಿಗೊಳಿಸಲು ನಿರಂತರ ಪ್ರೋತ್ಸಾಹ ಮತ್ತು ಬೆಂಬಲ ನೀಡಿದ್ದಕ್ಕಾಗಿ ಹುಮ್ನಾಬಾದ್‌ನ ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ್ ಬಿ. ಪಾಟೀಲ್ ಮತ್ತು ಕಾಲೇಜು ಆಡಳಿತ ಮಂಡಳಿಯ ಅಧ್ಯಕ್ಷರಿಗೆ ಸಂಘಟಕರು ಕೃತಜ್ಞತೆಗಳನ್ನು ಸಲ್ಲಿಸಿದರು.

# ಯಲ್ಲಾಲಿಂಗನ ಕೊಲೆ ಪ್ರಕರಣ; ಎಲ್ಲಾ ಆರೋಪಿಗಳು ಖುಲಾಸೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.3: ದಶಕದ ಹಿಂದೆ ರಾಜ್ಯದ ರಾಜಕಾರಣದಲ್ಲಿ ಭಾರಿ ಕೋಲಾಹಲಕ್ಕೆ ಕಾರಣವಾಗಿದ್ದ ವಿದ್ಯಾರ್ಥಿ ಯಲ್ಲಾಲಿಂಗನ ಕೊಲೆ ಪ್ರಕರಣದ ಅಂತಿಮ ಆದೇಶ ಇಲ್ಲಿನ ಜಿಲ್ಲಾ ನ್ಯಾಯಾಲಯದಿಂದ ಶುಕ್ರವಾರ ಪ್ರಕಟವಾಗಿದ್ದು, ಎಲ್ಲ ಒಂಬತ್ತು ಜನ ಆರೋಪಿಗಳನ್ನು ನಿರಪರಾಧಿಗಳು ಎಂದು ನ್ಯಾಯಾಲಯ ಆದೇಶ ನೀಡಿದೆ. ಆಗಲೂ ಸಚಿವರಾಗಿದ್ದ ಕನಕಗಿರಿ ವಿಧಾನಸಭಾ ಕ್ಷೇತ್ರದ ಶಿವರಾಜ ತಂಗಡಗಿ ರಾಜೀನಾಮೆಗೂ ಯಲ್ಲಾಲಿಂಗನ ಕೊಲೆ ಪ್ರಕರಣ ಕಾರಣವಾಗಿತ್ತು. ಜಿಲ್ಲಾ ನ್ಯಾಯಾಲಯ ಸೆ.24ರಂದು ಪ್ರಕರಣದ ಅಂತಿಮ ವಿಚಾರಣೆ ನಡೆಸಿತ್ತು. ರಾಜಕೀಯ ಷಡ್ಯಂತ್ರದ ಕಾರಣಕ್ಕೆ ಒಂಬತ್ತು ಜನರ ಮೇಲೆ ಕೊಲೆ ಆರೋಪ ಹೊರಿಸಲಾಗಿತ್ತು. ಇದು ನಿರಾಧಾರ ಎಂದು ನ್ಯಾಯಾಲಯ ಹೇಳಿದ್ದು, ಯಲ್ಲಾಲಿಂಗನದ್ದು ಕೊಲೆ ಅಲ್ಲ; ಆತ್ಮಹತ್ಯೆ ಎಂದು ಅವರ ಸ್ವಂತ ಸಹೋದರರನೇ ಹೇಳಿದ್ದರು. ಈ ಎಲ್ಲ ಅಂಶಗಳನ್ನು ಗಮನಿಸಿ ನ್ಯಾಯಾಲಯ ಅವರನ್ನು ನಿರ್ದೋಷಿ ಎಂದು ಹೇಳಿದೆ ಎಂದು ಆರೋಪಿಗಳು ಎನಿಸಿದ್ದವರ ಪರ ವಕೀಲ ಗಂಗಾಧರ ಮಾಧ್ಯಮಗಳಿಗೆ ತಿಳಿಸಿದರು.

ಪ್ರಕರಣದ ಆರೋಪಿಗಳಾಗಿದ್ದ ಕಾಂಗ್ರೆಸ್ ಮುಖಂಡ ಹನುಮೇಶ ನಾಯಕ, ಬಾಳನಗೌಡ, ಕಾಡಮಂಜ, ಮಹಾಂತೇಶ ನಾಯಕ, ಮನೋಜ ಪಾಟೀಲ್, ನಂದೀಶ, ಪರಶುರಾಮ, ಯಮನೂರಪ್ಪ ಹಾಗೂ ದುರ್ಗಪ್ಪ ಅವರ ಮೇಲೆ ಕೊಲೆ ಆರೋಪ ಬಂದಿತ್ತು.

ದಶಕಗಳ ಹಿಂದೆ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ಕನಕಾಪುರ ಗ್ರಾಮದ ವಿದ್ಯಾರ್ಥಿ ಯಲ್ಲಾಲಿಂಗ ತಮ್ಮ ಗ್ರಾಮದಲ್ಲಿ ನಡೆದಿದ್ದ ಭ್ರಷ್ಟಾಚಾರದ ಬಗ್ಗೆ ಮಾತನಾಡಿದ್ದ. ಇದಾದ ಬಳಿಕ 2015ರ ಜನವರಿ 11ರಂದು ಕೊಪ್ಪಳ ರೈಲ್ವೆ ನಿಲ್ದಾಣದಲ್ಲಿ ಯಲ್ಲಾಲಿಂಗನ ಮೃತದೇಹ ಪತ್ತೆಯಾಗಿತ್ತು. ಇದು ಮೊದಲು ಆತ್ಮಹತ್ಯೆ ಎಂದು ಶಂಕಿಸಲಾಗಿದ್ದರೂ ನಂತರ ಕೊಲೆ ಎಂದು ಕೊಪ್ಪಳ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಸಚಿವ ಶಿವರಾಜ ತಂಗಡಗಿ ಆಪ್ತ ಹನಮೇಶ ನಾಯಕ ಸೇರಿ 9 ಜನರ ವಿರುದ್ಧ ಇಲ್ಲಿ ಪ್ರಕರಣ ದಾಖಲಾಗಿತ್ತು. ಯಲ್ಲಾಲಿಂಗನ ಸಾವಿಗೆ ನ್ಯಾಯ ಒದಗಿಸುವಂತೆ ದೊಡ್ಡ ಮಟ್ಟದಲ್ಲಿ ಹೋರಾಟಗಳು ಕೂಡ ನಡೆದಿದ್ದರಿಂದ ರಾಜ್ಯ ಮಟ್ಟದಲ್ಲಿ ಸದ್ದು ಮಾಡಿ ಸಚಿವ ಶಿವರಾಜ ತಂಗಡಗಿ ಸಂಪುಟದಿಂದ ಹೊರಬೀಳುವಂತಾಗಿತ್ತು. ಸುದೀರ್ಘ ಹತ್ತು ವರ್ಷಗಳ ವಿಚಾರಣೆ ನಡೆದಿದ್ದು ಈಗ ನ್ಯಾಯಾಲಯದ ಈ ಆದೇಶ ನೀಡಿದೆ. ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಸಚಿವ ಶಿವರಾಜ ತಂಗಡಗಿ ಆಪ್ತ ಹನಮೇಶ ನಾಯಕ ಸೇರಿ 9 ಜನರ ವಿರುದ್ಧ ಇಲ್ಲಿ ಪ್ರಕರಣ ದಾಖಲಾಗಿತ್ತು. ಯಲ್ಲಾಲಿಂಗನ ಸಾವಿಗೆ ನ್ಯಾಯ ಒದಗಿಸುವಂತೆ ದೊಡ್ಡ ಮಟ್ಟದಲ್ಲಿ ಹೋರಾಟಗಳು ಕೂಡ ನಡೆದಿದ್ದರಿಂದ ರಾಜ್ಯ ಮಟ್ಟದಲ್ಲಿ ಸದ್ದು ಮಾಡಿ ಸಚಿವ ಶಿವರಾಜ ತಂಗಡಗಿ ಸಂಪುಟದಿಂದ ಹೊರಬೀಳುವಂತಾಗಿತ್ತು. ಸುದೀರ್ಘ ಹತ್ತು ವರ್ಷಗಳ ವಿಚಾರಣೆ ನಡೆದಿದ್ದು ಈಗ ನ್ಯಾಯಾಲಯದ ಈ ಆದೇಶ ನೀಡಿರುತ್ತದೆ.

ಪ್ರಕರಣದ ತನಿಖೆಯನ್ನು ಸಿಐಡಿಗೆ ಒಪ್ಪಿಸಲಾಗಿತ್ತು. ನಂತರ ಆರೋಪಿಗಳಿಗೆ ಜಾಮೀನು ದೊರೆತಿತ್ತು. 2021ರಲ್ಲಿ ಆರೋಪಿ ಮಹಾಂತೇಶ್ ನಾಯಕನ ಮದುವೆಯಲ್ಲಿ ಪೊಲೀಸರು ಭಾಗವಹಿಸಿದ್ದರಿಂದ ಪ್ರಕರಣ ಮತ್ತೆ ಮುನ್ನಲೆಗೆ ಬಂದಿತ್ತು ಎಂಬುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.